ಸಂಪುಟ: 13 Volume | ಸಂಚಿಕೆ: 323 Issue | ಪುಟಗಳು 08 Pages | ಶುಕ್ರವಾರ 13 ಫೆಬ್ರವರಿ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಬೆಂಕಿಯಿಲ್ಲದೆ ಮೇಣದ ಬತ್ತಿ ಉರಿಯುವುದಿಲ್ಲ. ಹಾಗೆಯೇ ಆಧ್ಯಾತ್ಮಿಕ ಜೀವನವಿಲ್ಲದೆ ಮನುಷ್ಯ ಬದುಕಲಾರ.

–ಗೌತಮ ಬುದ್ಧ

ಮಹಾಶಿವರಾತ್ರಿ ಮಹೋತ್ಸವ ಉತ್ಸವ 6 | ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ 7 | 10ನೇ ತರಗತಿವರೆಗೆ ಉಚಿತ ಶಿಕ್ಷಣ 8

## ಬಿಜೆಪಿ ಶಾಸಕನ ಬಂಧನ

**ಬೆಂಗಳೂರು:** ರೌಡಿ ಶೀಟರ್ ಬಿಕ್ಲು ಶಿವ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಭೈರತಿ ಬಸವರಾಜ್ ಅವರಿಗೆ ಸುಪ್ರೀಂ ಕೋರ್ಟ್ ಸಹ ಬಿಗ್ ಶಾಕ್ ನೀಡಿದ್ದು, ನಿರೀಕ್ಷಣಾ ಜಾಮೀನು ಅರ್ಜಿಯನ್ನು ವಜಾಗೊಳಿಸಿದೆ.



ಕಳೆದ ಮಂಗಳವಾರ ನಿರೀಕ್ಷಣಾ ಜಾಮೀನು ಕೋರಿ ಭೈರತಿ ಬಸವರಾಜ್ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ನ್ಯಾಯಮೂರ್ತಿ ಸುನೀಲ್ ದತ್ ಯಾದವ್ ಅವರಿದ್ದ ಪೀಠ ವಜಾಗೊಳಿಸಿತ್ತು. ಸುಪ್ರೀಂ ಕೋರ್ಟ್ ನಲ್ಲೂ ಜಾಮೀನು ಅರ್ಜಿ ವಜಾಗೊಂಡಿರುವುದರಿಂದ ಹಲವು ದಿನಗಳಿಂದ ತಲೆಮರೆಸಿಕೊಂಡಿರುವ ಭೈರತಿ ಬಸವರಾಜ್ ಅವರನ್ನು ಸಿಐಡಿ ಯಾವುದೇ ಸಂದರ್ಭದಲ್ಲೂ ಬಂಧಿಸಬಹುದು.

## ಸಾರಿಗೆ ಸಚಿವ ಜಿಲ್ಲಾ ಪ್ರವಾಸ

**ಬೀದರ:** ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ರವರು. ಫೆ.13 ರಂದು ಬೀದರ್ ಹಾಗೂ ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ. ಫೆ. 13 ರಂದು ಬೆಳಗ್ಗೆ 8 ಗಂಟೆಗೆ ಬೀದರ್ ವಿಮಾನ ನಿಲ್ದಾಣಕ್ಕೆ ಆಗಮಿಸಿ. ಅಲ್ಲಿಂದ ರಸ್ತೆ ಮೂಲಕ ಕಲಬುರಗಿ ಜಿಲ್ಲೆಯ ಗಾಣಗಾಪೂರಕ್ಕೆ ತೆರಳಿ ಶ್ರೀ ದತ್ತಾತ್ರೇಯ ದೇವಸ್ಥಾನದ ಅಧೀನದಲ್ಲಿ ಬರುವ ಶ್ರೀ ತುಂತುಕೇಶ್ವರ ದೇವಸ್ಥಾನ ಅನ್ನದಾಸೂಹ ಭವನ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಗಾಣಗಾಪೂರ ರಸ್ತೆ ಮೂಲಕ ಹೈದ್ರಾಬಾದ್ ಗೆ ತರಳಿ ಅಲ್ಲಿಂದ ಬೆಂಗಳೂರಿಗೆ ತೆರಳಲಿದ್ದಾರೆ ಎಂದು ವಿಶೇಷ ಕರ್ತವ್ಯ ಆಧಿಕಾರಿಗಳು ತಿಳಿಸಿದ್ದಾರೆ.



## ಕವಿಗೋಷ್ಠಿಗೆ ಎಂ.ಪಿ.ಎಂ ಆಯ್ಕೆ

**ವಿಜಯನಗರ:** ಜಿಲ್ಲೆಯ ಹೂವಿನ ಹಡಗಲಿಯ ಹಿರಿಯ ಬರಹಗಾರ ಸಾಹಿತಿ ಎಂ.ಪಿ.ಎಂ ಕೊಟ್ರಯ್ಯವರು ಈ ಬಾರಿ 2026 ರ ಹಂಪಿ ಉತ್ಸವದಲ್ಲಿ ನಡೆಯುವ ಕವಿ ಗೋಷ್ಠಿಯಲ್ಲಿ ಕವನ ವಾಚನ ಮಾಡಲಿದ್ದಾರೆ. ಫೆ. 13 ಶುಕ್ರವಾರ ವೀರುಪಾಕ್ಷೇಶ್ವರ ವೇದಿಕೆಯಲ್ಲಿ ನಡೆಯುವ ಕವಿಗೋಷ್ಠಿಯಲ್ಲಿ ಎಂ.ಪಿ.ಎಂ ರವರು ಕವನ ವಾಚನ ಮಾಡಲಿದ್ದು , ಗೋಷ್ಠಿಯ ಅಧ್ಯಕ್ಷತೆ ಸಾಹಿತಿ ಡಾ. ಯು.ರಾಘವೇಂದ್ರರಾವ್ ವಹಿಸಲಿದ್ದು ಡಾ. ವಸುಂಧರಾ ಭೂಪತಿ ಕಾರ್ಯಕ್ರಮ ಉದ್ಘಾಟಿಸಿವರು. ಮುಖ್ಯ ಅತಿಥಿಗಳಾಗಿ ನಾಗರಾಜ್ ಹವಾಲ್ದಾರ್ ಹಾಗೂ ಉಪಸ್ಥಿತಿಯಲ್ಲಿ ರಮೇಶ ಗಣ್ಣೂರು, ಡಾ. ದಯಾನಂದ ಕಿನ್ನಾಳ್, ಜಗದೀಶ ಬೆನ್ನೂರ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ. ಮಕ್ಕಳಿಗಾಗಿ ಚಿಲಿಪಿಲಿ ಕಲರವ ರಾಜ್ಯಮಟ್ಟದ ಸಾಂಸ್ಕೃತಿಕ ಸ್ಪರ್ದೆಗಳನ್ನು ಏರ್ಪಡಿಸುವುದರ ಮೂಲಕ ಕ್ರೀಯಾಶೀಲ ಸಂಘಟಕರಾಗಿ ಗುರುತಿಸಿಕೊಂಡಿದ್ದಾರೆ.



## 5ಲಕ್ಷ ರೂ. ಬೆಲೆಯ ಅಣಬೆ ಪ್ರದರ್ಶನ

**ಕೊಪ್ಪಳ:** ನಗರದಲ್ಲಿರುವ ತೋಟಗಾರಿಕೆ ಇಲಾಖೆಯ ಹಣದಲ್ಲಿ ಆಯೋಜಿಸಿದ್ದ ಹಣ್ಣು, ಜೇನು ಮತ್ತು ಅಣಬೆ ಪ್ರದರ್ಶನ ಮತ್ತು ಮಾರಾಟ ಮೇಳದಲ್ಲಿ ಜಗತ್ತಿನ ಅತ್ಯಂತ ಜ ದುಬಾರಿ ಪ್ರತಿ ಕೆಜಿಗೆ 15 ಲಕ್ಷ ರುಪಾಯಿ ಬೆಲೆಬಾಳುವ ಅಣಬೆಯಾದ ಯರ್ಸಗೊಂಬಾ ಪ್ರಭೇದದ ಅಣಬೆ ಪ್ರದರ್ಶನಕ್ಕೆ ಇಡಲಾಯಿತು.



ಈ ಅಪರೂಪದ ಅಣಬೆ ಪ್ರದರ್ಶನದಿಂದ ಸಾರ್ವಜನಿಕರಿಗೆ ಅಪರೂಪದ ಈ ಅಣಬೆಯನ್ನು ನೇರವಾಗಿ ನೋಡುವ ಅವಕಾಶ ದೊರೆತಂತಾಯ್ತು. ಈ ಅಣಬೆಯು ಹಿಮಾಲಯ ಪರ್ವತ ಪ್ರದೇಶದ ಸುಮಾರು 3,000ರಿಂದ 5,000 ಮೀಟರ್ ಎತ್ತರದ ಪ್ರದೇಶಗಳಲ್ಲಿ ಮಾತ್ರ ಬೆಳೆಯುತ್ತದೆ.

# ಪಟ್ಟವ ನೀ ಕೊಡೆ, ನಾ ಬಿಡೆ

### ಡಿಸಿಎಂ ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ವರಿಷ್ಠ ರಾಹುಲ್ ಗಾಂಧಿ ಭೇಟಿ | ಬಜೆಟ್ ತಯಾರಿಯಲ್ಲಿ ಸಿಎಂ ಕೂಲ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ಸಿಎಂ ಕುರ್ಚಿ ನೀ ಕೊಡೆ, ನಾ ಬಿಡೆ ಎನ್ನುವಂತಾಗಿದೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಹೈಕಮಾಂಡ್ ಇತರ ಪ್ರಮುಖರನ್ನು ಭೇಟಿ ಮಾಡಿದ್ದು ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದೆ. ಆದರೆ ಇದಾವುದರ ಪರಿವೇ ಇಲ್ಲದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಲ್ ಆಗಿ ಬಜೆಟ್ ಮಂಡನೆಗಾಗಿ ಪೂರ್ವ ಸಭೆ, ಚರ್ಚೆ ನಡೆಸಿದ್ದಾರೆ.

**ಪ್ರಮುಖ ಘಟ್ಟ:** ನಾಯಕತ್ವದ ಬದಲಾವಣೆಗೆ ಸಂಬಂಧಪಟ್ಟಂತೆ ಇದುವರೆಗೂ ನಡೆಯುತ್ತಿದ್ದ ಬೆಳವಣಿಗೆಗಳು ರಾಹುಲ್ ಗಾಂಧಿ ಭೇಟಿ ಬಳಿಕ ಪ್ರಮುಖ ಘಟ್ಟದತ್ತ ದಾಪುಗಾಲಿಟ್ಟಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಾವು ರಾಹುಲ್ ಗಾಂಧಿ ಹೇಳಿದಂತೆ ಅರ್ಥಾತ್ ಹೈಕಮಾಂಡ್ ಸೂಚನೆಯಂತೆ ನಡೆದುಕೊಳ್ಳುವುದಾಗಿ ಪದೇ ಪದೇ ಪ್ರತಿಪಾದಿಸುತ್ತಿದ್ದಾರೆ.









### ಕೊನೆಗೂ ರಾಹುಲ್‌ಗಾಂಧಿ ಭೇಟಿ

ಡಿ.ಕೆ.ಶಿವಕುಮಾರ್ ಅವರು ರಾಹುಲ್ ಗಾಂಧಿಯವರ ಮೂಲಕ ಸಿದ್ದರಾಮಯ್ಯ ಅವರಿಗೆ ನಿರ್ದೇಶನ ಕೊಡಿಸಬೇಕು ಎಂದು ಸತತ ಪ್ರಯತ್ನ ನಡೆಸಿದ್ದರು. ಆದರೆ ರಾಹುಲ್– ಡಿ.ಕೆ.ಶಿಗೆ ಸಮಯವನ್ನೇ ನೀಡುತ್ತಿರಲಿಲ್ಲ. ಪಟ್ಟು ಹಿಡಿದಿದ್ದ ಡಿ.ಕೆ. ಸಹೋದರರು ಸೋನಿಯಾ ಗಾಂಧಿ ನಿವಾಸದಲ್ಲಿ ರಾಹುಲ್, ಪ್ರಿಯಾಂಕ ಗಾಂಧಿಯವರನ್ನು ಭೇಟಿ ಮಾಡಿದ್ದಾರೆ ಎಂದು ಮೂಲ ತಿಳಿಸಿದೆ.

### ಪಂಚ ರಾಜ್ಯ ಎಲೆಕ್ಷನ್‌ವರೆಗೆ..!

ಡಿ.ಕೆ.ಶಿವಕುಮಾರ್ 2023ರ ವಿಧಾನಸಭೆ ಚುನಾವಣೆ ಫಲಿತಾಂಶದ ಬಳಿಕ ತಮಗೆ ಹೈಕಮಾಂಡ್ ನೀಡಿದ್ದ ಭರವಸೆ–ಮುಖ್ಯಮಂತ್ರಿ ಜೊತೆ ನಡೆಸಿದ್ದ ಮಾತು ನೆನಪಿಸಿದ್ದಾರೆ. ಸದ್ಯದ ಪರಿಸ್ಥಿತಿಯಲ್ಲಿ ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆ ಪಕ್ಷಕ್ಕೆ ಉಚಿತವಲ್ಲ. ಪಂಚರಾಜ್ಯ ಚುನಾವಣೆವರೆಗೆ ಮೌನವಾಗಿರಿ ಎಂದು ಹೈಕಮಾಂಡ್ ಸೂಚನೆ ನೀಡಿರುವುದಾಗಿ ತಳಿದು ಬಂದಿದೆ.

### ಎಲ್ಲಾ ನಾಯಕರ ಭೇಟಿ

ನಾನು ದೆಹಲಿಗೆ ಬಂದ ನಂತರ ಎಲ್ಲರನ್ನೂ ಭೇಟಿ ಮಾಡುತ್ತೇನೆ. ರಾಹುಲ್ ಗಾಂಧಿ, ಪ್ರಿಯಾಂಕ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಕೆ.ಸಿ ವೇಣುಗೋಪಾಲ್, ಸುರ್ಜೆವಾಲ, ಟಿ.ಬಿ. ಜಯಚಂದ್ರ ಸೇರಿದಂತೆ ಎಲ್ಲರನ್ನು ಭೇಟಿ ಮಾಡಿರುವೆ. ರಾಜಕಾರಣಿಗಳು ಭೇಟಿ ಯಾದಾಗ ರಾಜಕಾರಣ ಚರ್ಚೆ ಮಾಡದೇ ಇರುತ್ತಾರಾ? ರಾಜಕೀಯ ಚರ್ಚೆ ಮಾಡುತ್ತೇವೆ ಎಂದಿದ್ದಾರೆ ಡಿಕೆಶಿ.

### ಕಾಲವೇ ಉತ್ತರ ಕೊಡುತ್ತೆ..?

ದೆಹಲಿಯಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ನಾನು ಇಲ್ಲಿಗೆ ಬಂದಿರೋದು ರಾಜಕಾರಣ ಮಾಡೋಕೆ, ಸುಮ್ಮನೆ ಗಾಳಿ ಕುಡಿದು ಹೋಗೋದಿಕ್ಕೆ ಅಲ್ಲ. ವರಿಷ್ಠರ ಬಳಿ ಏನು ಮಾತನಾಡಬೇಕೋ ಅದನ್ನ ಮಾತನಾಡಿದ್ದೀನಿ. ಎಲ್ಲದಕ್ಕೂ ಕಾಲ ಉತ್ತರ ಕೊಡುತ್ತೆ ಎಂದು ಮಾರ್ಮಿಕವಾಗಿ ನುಡಿದಿದ್ದಾರೆ ಡಿಕೆಶಿ.

### ಸಿಎಂ ಕೂಲ್, ಬಣ ಬಿರುಸು

ರಾಹುಲ್ ಗಾಂಧಿ ಭೇಟಿಯಾಗಿದ್ದಾರೆ ಎಂದು ತಿಳಿಯುತ್ತಿದ್ದಂತೆ ನಿಧಾನವಾಗಿ ಚಿತ್ರಣ ರಾಜ್ಯ ರಾಜಕಾರಣದಲ್ಲಿ ಚಿತ್ರಣವೇ ಬದಲಾಗ ಲಾರಂಭಿಸಿದೆ. ಅಸ್ಸಾಂ ವಿಧಾನಸಭೆಯ ಫಲಿತಾಂಶ ಡಿ.ಕೆ.ಶಿವಕುಮಾರ್ ರಾಜಕೀಯ ಭವಿಷ್ಯವನ್ನು ನಿರ್ಧರಿಸಲಿದೆ ಎಂಬ ಚರ್ಚೆಗಳಿವೆ. ಸಿಎಂ ಯಾವ ಗೋಜಿಗೂ ತಲೆ ಕಡೆಸಿಕೊಳ್ಳದೆ, ಕೂಲ್ ಆಗಿ ಬಜೆಟ್ ತಯಾರಿಗಾಗಿ ಸಭೆಗಳನ್ನು ನಡೆಸುತ್ತಿದ್ದಾರೆ.

## ಪರಂಪರೆ, ತಂತ್ರಜ್ಞಾನದ ಹಂಪಿ ಉತ್ಸವ

**ಹಂಪಿ:** ಇಂದಿನಿಂದ ಮೂರು ದಿನಗಳ ಕಾಲ ನಡೆಯುವ ಈ ವರ್ಷದ ಹಂಪಿ ಉತ್ಸವವು ಪರಂಪರೆ ಮತ್ತು ಆಧುನಿಕ ತಂತ್ರಜ್ಞಾನಕ್ಕೆ ನಿದರ್ಶನವಾಗಲಿದೆ. ಅದ್ಭುತ ಡ್ರೋನ್ ಪ್ರದರ್ಶನದ ಮೂಲಕ ಆಕಾಶವನ್ನು ಭವ್ಯ ಡಿಜಿಟಲ್ ಕ್ಯಾನ್ವಾಸ್ ಆಗಿ ಪರಿವರ್ತಿಸಲಾಗುತ್ತಿದೆ. ಫೆ. 13 ರಿಂದ 15 ರವರೆಗೆ ನಡೆಯಲಿರುವ ವಿಶ್ವಪ್ರಸಿದ್ಧ ಹಂಪಿ ಉತ್ಸವದಲ್ಲಿ 1,000 ಡ್ರೋನ್‌ಗಳನ್ನು ಒಳಗೊಂಡ ಹೈಟೆಕ್ ವೈಮಾನಿಕ ಪ್ರದರ್ಶನ ಈ ವರ್ಷದ ಹಂಪಿ ಉತ್ಸವದ ಈ ಕಾರ್ಯಕ್ರಮವು ಹಗಲಿನಲ್ಲಿ ಹೆಲಿಕಾಪ್ಟರ್ ಸವಾರಿಗಳನ್ನು ಸಹ ಒಳಗೊಂಡಿರುತ್ತದೆ.



ಗಾಯತ್ರಿ ಪೀಠದ ವೇದಿಕೆಯ ಬಳಿ ನಡೆಯಲಿರುವ ಡ್ರೋನ್ ಪ್ರದರ್ಶನವು ಐತಿಹಾಸಿಕ ವಿಜಯನಗರ ಸಾಮ್ರಾಜ್ಯದ ಉದಯ, ಅದರ ಸುವರ್ಣ ಯುಗ ಮತ್ತು ರಾಜತಾಂತ್ರಿಕತೆ ಹಾಗೂ ಯುದ್ಧದ ನಿರ್ಣಾಯಕ ಕ್ಷಣಗಳನ್ನು ಚಿತ್ರಿಸುತ್ತದೆ. ಹಂಪಿಯ ಪ್ರಮುಖ ಸ್ಮಾರಕಗಳಾದ ಕಲ್ಲಿನ ರಥ, ವಿರೂಪಾಕ್ಷ ದೇವಾಲಯದ ಗೋಪುರ, ಉಗ್ರ ನರಸಿಂಹ ಪ್ರತಿಮೆ, ಕಡ್ಲೇಕಾಳು ಗಣೇಶ ಡ್ರೋನ್ ಪ್ರದರ್ಶನದಲ್ಲಿ ಕಾಣಿಸಿಕೊಳ್ಳಲಿವೆ ಎಂದು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದ್ದಾರೆ.

## ಬಿಜೆಪಿ ಕಾರ್ಯಕಾರಿ ಸಭೆ 19ಕ್ಕೆ

• ಮಲ್ಲಮ್ಮ ನುಡಿ ಬೆಂಗಳೂರು

ರಾಜ್ಯ ಬಿಜೆಪಿ ವಿಶೇಷ ಕಾರ್ಯಕಾರಿ ಸಭೆ ಫೆ. 19 ಕ್ಕೆ ನಡೆಯಲಿದೆ. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ಸಭೆಯಲ್ಲಿ ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಹಮ್ಮಿಕೊಳ್ಳಬಹುದಾದ ಹೋರಾಟದ ಬಗ್ಗೆ ರೂಪುರೇಷೆ ಸಿದ್ಧಗೊಳ್ಳುವ ಸಾಧ್ಯತೆ ಇದೆ. ಈ ಕುರಿತಾಗಿ ಬೆಳಗಾವಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ."ಮುಂದಿನ ಕೆಲವು ಸಂಘಟನಾತ್ಮಕ ವಿಚಾರಗಳನ್ನು ಚರ್ಚಿಸಲಿದ್ದೇವೆ. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಗಳು, ಜಿಬಿಎ ಚುನಾವಣೆ , ಉಪ ಚುನಾವಣೆಗಳು, ಎಂಎಲ್ಸಿ ಚುನಾವಣೆಗಳು, ರಾಜ್ಯ ಸರಕಾರದ ವೈಫಲ್ಯಗಳು, ಕೇಂದ್ರ ಸರಕಾರದ ಸಾಧನೆ– ಇವೆಲ್ಲವನ್ನೂ ಸಮಗ್ರವಾಗಿ ಚರ್ಚಿಸಲಿದ್ದೇವೆ" ಎಂದು ವಿವರಿಸಿದ್ದಾರೆ.



ರಾಜ್ಯ ಕಾರ್ಯಕಾರಿಣಿಯ ಉದ್ಘಾಟನೆಗೆ ಕೇಂದ್ರದ ಹಿರಿಯ ಸಚಿವರು ಬರಲಿದ್ದಾರೆ. ಸಮಾರೋಪ ಕಾರ್ಯಕ್ರಮಕ್ಕೆ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಸಂತೋಷ್ ಜೀ ಅವರು ಆಗಮಿಸುತ್ತಾರೆ ಎಂದು ನುಡಿದಿದ್ದಾರೆ.




# ಜನರ ಸಂಕಟ, ಅಧಿಕಾರಿ ದಲ್ಲಾಳಿಯಾಟ..!

• ಮಲ್ಲಮ್ಮ ನುಡಿ ರಾಜ್‌ಕುಮಾರ್ ಹಡಪದ, ಚಿಟಗುಪ್ಪ

ತಾಲೂಕ ತಹಸೀಲ್ ಕಚೇರಿಯಲ್ಲಿ ಸಿಬ್ಬಂದಿ ಮತ್ತು ಅಧಿಕಾರಿಗಳು ಸರಿಯಾದ ಸಮಯಕ್ಕೆ ಬರದೆ ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

ಕಚೇರಿ ಸಮಯದಲ್ಲಿ ಕಚೇರಿಯಲ್ಲಿ ಇರುವುದಿಲ್ಲ. ಕೇವಲ ದಲ್ಲಾಳಿಗಳ ಕೆಲಸ ಮಾಡುತ್ತಿದ್ದಾರೆ. ಎಂದು ಜಿಲ್ಲಾ ಸಹಕಾರಿ ಒಕ್ಕೂಟದ ನಿರ್ದೇಶಕ ವೀರೇಶ್ ತುಗಾಂವ ದಂಡಾಧಿಕಾರಿಗೆ ಬರೆದ ಪತ್ರದಲ್ಲಿ ದೂರಿದ್ದಾರೆ. ಕಚೇರಿಯಲ್ಲಿ ಬಯೋಮ್ಯಾಟ್ರಿಕ್ ಮತ್ತು ಸಿಸಿಟಿವಿ ಅಳವಡಿಸಬೇಕೆಂದು ಮನವಿ ಮಾಡಿದ್ದಾರೆ. ಜಾತಿ ಆದಾಯ ಪ್ರಮಾಣ ಪತ್ರ, ವಿಧವಾ ವೇತನ, ಅಂಗವಿಕಲರ, ರೇಷನ್ ಕಾರ್ಡನಲ್ಲಿ ಹೆಸರು ಸೇರ್ಪಡೆ ಹಾಗೂ ಹೊಸದಾಗಿ ರೇಷನ್ ಕಾರ್ಡ ಸೇರಿದಂತೆ ಇತರೆ ಕೆಲಸಗಳಿಗೆ 2ಸಾವಿರದಿಂದ 4 ಸಾವಿರದ ವರೆಗೆ ಹಣ ಕೇಳುತ್ತಿದ್ದಾರೆ ಹಣ ಕೊಡದಿದ್ದರೆ ಅರ್ಜಿ ತಿರಸ್ಕರಿಸುತ್ತಿದ್ದಾರೆ. ಎಲ್ಲಾ ದಾಖಲೆಗಳು ಸರಿ ಇದ್ದರೂ ರಿಜೆಕ್ಟ್ ಮಾಡುತ್ತಿದ್ದಾರೆ. ಹಣ ಕೊಟ್ಟರೆ ನಯ ವಿನಯದಿಂದ ಕೆಲಸ ಮಾಡಿಕೊಡುತ್ತಾರೆ ಎಂದು ವಿವರಿಸಿದ್ದಾರೆ.

### ಕಚೇರಿಗೆ ಬರದೆ, ಅಲ್ಲಿಂದಲೇ ಕಾರ್ಯ..!

ಕೆಲವು ಅಧಿಕಾರಿಗಳು ಕಚೇರಿಗೆ ಬರದೆ ಹುಮನಾಬಾದ ಕಚೇರಿಯಲ್ಲಿಯೇ ಕುಳಿತುಕೊಂಡು ಫೈಲ್ ಅನುಮೋದನೆ ಕೊಡುತ್ತಿದ್ದಾರೆ. ವಾರದಲ್ಲಿ3ದಿನ ಚಿಟಗುಪ್ಪಕ್ಕೆ ಬಂದು ದಾಖಲೆಗಳು ಸರಿಯಾಗಿ ಇವೇ ಇಲ್ಲ ಎಂದು ಪರಿಶೀಲಿಸಬೇಕು ಒಂದು ವೇಳೆ ದಾಖಲೆಗಳು ಸರಿಯಾಗಿ ಇದ್ದರೂ ರಿಜೆಕ್ಟ್ ಮಾಡಿದಲ್ಲಿ ನಾವು ಕಾನೂನಿನ ಸೇವೆಯನ್ನು ಪಡೆಯಬೇಕಾಗುತ್ತದೆ ಎಂದು ದೂರು ನೀಡಿದ ಪತ್ರದಲ್ಲಿವೀರೇಶ್ ವಿವರಿಸಿದ್ದಾರೆ.






**ಪಕ್ಷ ಸಂಘಟನೆಗೆ ನಾವು ಶ್ರಮ ಪಟ್ಟಿದ್ದಕ್ಕೆ ಪ್ರತಿಫಲ ಸಿಗುವ ಕಾಲ ದೂರವಿಲ್ಲ: ಡಿ.ಕೆ ಸುರೇಶ್**

# ಮಕ್ಕಳಿಗೆ ಶಿಕ್ಷಣದ ಜೊತೆಗೆ ಒಳ್ಳೆ ಸಂಸ್ಕಾರ ಕೊಡಿ: ಮೀತಾರೆ



• ಮಲ್ಲಮ್ಮ ನುಡಿ ವಾರ್ತೆ ಬೀದರ:

ಮಕ್ಕಳಿಗೆ ಶಿಕ್ಷಣದ ಜೊತೆಗೆ ಒಳ್ಳೆ ಸಂಸ್ಕಾರ ನೀಡಿ ಎಂದು ಶರಣಪ್ಪಾ ಮೀತಾರೆ ಅವರು ತಿಳಿಸಿದ್ದಾರೆ, ಜ್ಞಾನ ಕಾರಂಜಿ ಚಾರಿಟೇಬಲ್ ಟ್ರಸ್ಟ್ ಹಾಗೂ ನೈಟಿಂಗಲ್ ಪಬ್ಲಿಕ್ ಶಾಲೆ ಸಂಯುಕ್ತಾಶ್ರಯದಲ್ಲಿ ಮಾತ್ರ ಪಿತೃ ಪೂಜೆ ಹಾಗೂ ಕೈತುತ್ತು ಕಾರ್ಯಕ್ರಮವು ಗಣೇಶ್ವರ ಕಮರಿ ಮಠ ಸಂಗೋಳಗಿಯಲ್ಲಿ ನಡೆಯಿತು, ಉದ್ಘಾಟಕರಾಗಿ ಮಾತನಾಡಿದ ಶರಣಪ್ಪಾ ಮೀತಾರೆ ಮಕ್ಕಳಿಗೆ ಚಿಕ್ಕಂದಿನಿಂದಲೇ ಒಳ್ಳೆ ಸಂಸ್ಕೃತಿಯನ್ನು ಬೆಳೆಸಬೇಕು ,ಮಕ್ಕಳಿಗಾಗಿ ಆಸ್ತಿ ಮಾಡಬೇಡಿ,ಮಕ್ಕಳನ್ನೇ ಆಸ್ತಿಯಾಗಿ ಮಾಡಬೇಡಿ ಒಳ್ಳೆಯ ಜ್ಞಾನ ಮಕ್ಕಳಲ್ಲಿ ಸಂಸ್ಕಾರ, ಮಕ್ಕಳು ನಮ್ಮ ಭವಿಷ್ಯದ ಶಿಲ್ಪಿಗಳು. ಅವರಿಗೆ ಉತ್ತಮ ಶಿಕ್ಷಣ ನೀಡಿ ಮಕ್ಕಳನ್ನು ಕೇವಲ ಓದಿನಲ್ಲಿ ಮಾತ್ರವಲ್ಲ, ಜೀವನ ಮೌಲ್ಯಗಳಲ್ಲಿ ಬೆಳೆಸೋಣ. ಪ್ರೀತಿ, ಶಿಸ್ತು ಮಕ್ಕಳ ಪ್ರತಿಭೆಯನ್ನು ಗುರುತಿಸಬೇಕು,

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಸುರೇಶ್ ಚನ್ನಶೆಟ್ಟಿ ಮಾತನಾಡಿ ಶಿಕ್ಷಣ ಜೊತೆಗೆ ಮಕ್ಕಳಿಗೆ ಸಂಸ್ಕೃತಿ ಬೆಳೆಸುವ ಸಂಸ್ಥೆಯ ಉದ್ದೇಶವಾಗಿದೆ, ಮಕ್ಕಳ ಬಗ್ಗೆ ತಂದೆ ತಾಯಿ ಅವರು ಗಮನ ಹರಿಸಬೇಕು ಎಲ್ಲಾ ಶಾಲೆಗಳಲ್ಲಿ ಶಿಕ್ಷಣ ಸಿಗ್ತಾಯಿದೆ, ಆದರೆ ಮೌಲ್ಯ ಸಿಗ್ತಾಯಿಲ್ಲ, ನಿಮ್ಮ ಮಕ್ಕಳನ್ನು ಯಾವುದೇ ದೊಡ್ಡ ಹುದ್ದೆಗೆ ಕರೆದುಕೊಂಡು ಹೋಗುವುದಕ್ಕೆ ತಂದೆ ತಾಯಿಯರ ಕೈಯಲ್ಲಿದೆ,

ಮೊಬೈಲ್ ನಿಂದ ಮಕ್ಕಳನ್ನು ದೂರ ಇಡಿ,ಒಳ್ಳೆ ಸಂಸ್ಕೃತಿಯನ್ನು ಬೆಳೆಸಬೇಕು, ಜ್ಞಾನದ ಬೆಳಕನ್ನು ಬೆಳಗಿಸುವ ಉದ್ದೇಶವಾಗಿದೆ,

ಇದೆ ಸಂದರ್ಭದಲ್ಲಿ ಕಮರಿ ಮಠದ ಪೂಜ್ಯ ಗುರುಗಳಾದ ಶರಣಯ್ಯ ಮುತ್ಯಾ,ಮುಖ್ಯ ಅತಿಥಿಯಾಗಿ ಕನ್ನಡ ಸೇನೆ ಕರ್ನಾಟಕ ಗ್ರಾಮ ಘಟಕದ ಅಧ್ಯಕ್ಷರಾದ ಲಕ್ಷ್ಮಣ ಅಲ್ಲೂರೆ, ಅತಿಥಿ ಸ್ಥಾನವನ್ನು ನೈಟಿಂಗಲ್ ಪಬ್ಲಿಕ ಶಾಲೆ ಸಂಗೋಳಗಿಯ ಮುಖ್ಯ ಗುರುಗಳಾದ ಶೀಲಾ ಪಾಂಚಾಳ, ಶಾಲೆಯ ಆಡಳಿತ ಅಧಿಕಾರಿಯಾದ ರವಿ ಚೌಹಾಣ್,ರಾಜೇಶ್, ಕಾರ್ತಿಕ್ ಜಿಲ್ಲಾ ಸಂಚಾಲಕ ಬೀದರ್, ಶಿಕ್ಷಕಿಯರಾದ ದೀಪಿಕಾ, ರಾಣಿ ಹುಮನಾಬಾದೆ ,ಶಕುಂತಲಾ ಬಿ ಮಡಿವಾಳ, ರಾಣಿ ನರ್ಸಗೊಂಡ,ಅನೇಕ ಪೋಷಕರು, ವಿದ್ಯಾರ್ಥಿಗಳು ಭಾಗವಹಿಸಿದರು.

# ಶಿಕ್ಷಣದೊಂದಿಗೆ ಸ್ವಂಕೃತಿ ಅರಿಯಲು ಬಿಇಓ ರಂಗೇಶ ಸಲಹೆ

• ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:




ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿಯುವುದೂ ಅವಶ್ಯವಾಗಿದೆ ಎಂದು ಕ್ಷೇತ್ರಶಿಕ್ಷಣಾಧಿಕಾರಿ ಬಿ.ಜಿ.ರಂಗೇಶ ಸಲಹೆ ನೀಡಿದರು. ಪಟ್ಟಣದ ಶಾಂತಿವರ್ಧಕ ಪ್ರೌಢ ಶಾಲೆಯಲ್ಲಿ ಹತ್ತನೇ ತರಗತಿ ಮಕ್ಕಳಿಗೆ ಬುಧವಾರ ವಿಜ್ಞಾನ–ಇಂಗ್ಲೀಷ ವಿಷಯಗಳ ಕುರಿತು ಹಮ್ಮಿಕೊಂಡಿದ್ದ ಕಾರ್ಯಾಗಾರವನ್ನು ಅವರು ಉದ್ಘಾಟಿಸಿ, ಮಾತನಾಡಿದರು.ನಮ್ಮ ಅನನ್ಯವಾದ ಭಾರತೀಯ ಸಂಸ್ಕೃತಿಯಲ್ಲಿ ಶಿಕ್ಷಣ(ಶಿಕ್ಷಾ) ಮತ್ತು ಸಂಸ್ಕಾರ ಎಂಬ ಪದಗಳನ್ನು ನಾವು ಪದೇ ಪದೇ ಬಳಸುತ್ತೇವೆ. ಈ ಅವಳಿ ಪದಗಳು ಒಂದೇ ನಾಣ್ಯದ ಎರಡು ಮುಖಗಳಂತೆ, ಎರಡು ಎಳೆಗಳು ಸೇರಿ ನೇಯ್ದು ಒಂದೇ ಬಟ್ಟೆಯಂತೆ ಸದಾ ಒಟ್ಟಿಗೆ ಇರುತ್ತವೆ. 'ಶಿಕ್ಷಾ' ವನ್ನು ಸಾಮನ್ಯವಾಗಿ ಶಿಕ್ಷಣ ಅಥವಾ ಕಲಿಕೆ ಎಂದು ಪರಿಭಾವಿಸಲಾಗುತ್ತದೆ ಎಂದರು.ಶಿಕ್ಷಣ ತಜ್ಞೆ ಶಾಂತಿ ದೇಸಾಯಿ ಅವರು ಮಾತನಾಡಿ, ಸಂಸ್ಕಾರವು ಆಂತರಿಕವಾದ ರಚನೆ, ನೈತಿಕ ಪ್ರವೃತ್ತಿ, ನಮ್ರತೆ ಮತ್ತು ಔದಾರ್ಯಗಳನ್ನು ಒಳಗೊಂಡಿರುತ್ತದೆ. ಇದು ಇರುವ ಜ್ಞಾನವನ್ನು ಹೇಗೆ ಬಳಸುತ್ತದೆ ಎಂಬುದನ್ನು ನಿರೂಪಿಸುತ್ತದೆ. ಒಂದನ್ನು ಮತ್ತೊಂದರಿಂದ ನಾವು ಬೇರ್ಪಡಿಸಿದಾಗ,

ಚಾಣಕ್ಷವಾದ ಸಿನಿಕತೆಯ ಜನರು ಅಥವಾ ಸದುದ್ದೇಶದ ಆದರ್ಶವಾದಿಗಳು ಹುಟ್ಟುತ್ತಾರೆ. ನಮ್ಮ ಶಿಕ್ಷಣದ ನೈಜ ಗುರಿಯು ಜ್ಞಾನದ ಆತ್ಮಸಾಕ್ಷಿಯೊಂದಿಗೆ ಬದುಕುವ ಜನರನ್ನು ಬೆಳೆಸುವುದೇ ಆಗಿದೆ ಎಂದು ಹೇಳಿದರು.ಸರ್ಕಾರಿ ಪ್ರೌಢ ಶಾಲೆ ಶಿಕ್ಷಕರ ಸಂಘ ತಾಲ್ಲೂಕು ಘಟಕ ಅಧ್ಯಕ್ಷ ಸೂರ್ಯಕಾಂತ ಬಿರಾದಾರ, ಮುಖ್ಯಶಿಕ್ಷಕ ರಾಮೇಶ್ವರ ಬಿರಾದರ, ಮುಖ್ಯಗುರುಗಳು ಸಂಜುಕುಮಾರ ಡೋಂಗ್ರೆ, ಕನ್ನಡ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದ ಸಂಯೋಜಕ ಪುಂಡಲಿಕ ಮಾಸಿಮಾಡೆ, ನವನಾಥ ಗಾಯಕವಾಡ್, ಬಿ.ಬಿ ಹೆಡೆ, ಸತೀಷ ಮಟಕೆ, ಡಿ.ಎಂ.ಭೂರೆ, ಬಿ.ಆರ್. ಕದಂ, ಸತ್ಯಮ್ಮ, ರೋಹಿತ ಬಿರಾದಾರ, ಬಂಟಿ ರಾಂಪುರೆ, ಪರಮೇಶ್ವರ ಪಟವಾರಿ, ಮಲ್ಲಿನಾಥ ಶಿವಪುರೆ ಸೇರಿದಂತೆ ಮಕ್ಕಳು ಇದ್ದರು.

ಕಾರ್ಯಾಗಾರದಲ್ಲಿ ಪಟ್ಟಣದ ಪ್ರಜ್ಞಾಭವನ ಪ್ರೌಢ ಶಾಲೆ, ಡಾ. ಚನ್ನಬಸವ ಪಟ್ಟದ್ದೇವರ ಪ್ರೌಢ ಶಾಲೆ, ಲತಾಮಂಗೇಶ್ಕರ್ ಕನ್ಯಾ ಪ್ರೌಢ ಶಾಲೆ, ಗೋಲ್ಡನ್ ವ್ಯಾಲಿ ಪ್ರೌಢ ಶಾಲೆ ಮಕ್ಕಳು, ಖತಗಾಂವ್, ಹೊಳಸಮುದ್ರ, ಮದನೂರು ಶಾಲೆಗಳ ಮಕ್ಕಳು ಹಾಗೂ ಶಿಕ್ಷಕ ಸಿಬ್ಬಂದಿ ಪಾಲ್ಗೊಂಡಿದ್ದರು.

# ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



## ಗ್ರಾಮೀಣ ಪ್ರದೇಶಗಳಲ್ಲಿನ ಬಡಜನತೆಗೆ ಮೂಲಭೂತ ಸೌಕರ್ಯಗಳು ಸಿಗುವಂತಾಗಲಿ

**ದೇಶದ ಅಭಿವೃದ್ಧಿಯ ನಿಜವಾದ ಪ್ರತಿಬಿಂಬ ಗ್ರಾಮೀಣ ಭಾರತದಲ್ಲಿದೆ. ಆದರೆ ಇಂದಿಗೂ ಅನೇಕ ಹಳ್ಳಿಗಳಲ್ಲಿ ಕುಡಿಯುವ ನೀರು, ಉತ್ತಮ ರಸ್ತೆ, ವಿದ್ಯುತ್ ಸಂಪರ್ಕ, ಆರೋಗ್ಯ ಸೇವೆ, ಶಿಕ್ಷಣ ಸೌಲಭ್ಯಗಳ ಕೊರತೆ ಜನಜೀವನವನ್ನು ಕಂಗೆಡಿಸುತ್ತಿದೆ. ನಗರಗಳ ಕಡೆಗೆ ಅಭಿವೃದ್ಧಿಯ ಹೊಳೆ ಹರಿಯುತ್ತಿರುವಾಗ, ಗ್ರಾಮೀಣ ಭಾಗಗಳು ನಿರ್ಲಕ್ಷ್ಯಕ್ಕೆ ಒಳಗಾಗುತ್ತಿರುವುದು ವಿಷಾದಕರ ಸಂಗತಿ.**

**ಕುಡಿಯುವ ನೀರು ಪ್ರತಿಯೊಬ್ಬರ ಮೂಲಭೂತ ಹಕ್ಕು. ಬೇಸಿಗೆ ಬಂದಾಗ ಅನೇಕ ಹಳ್ಳಿಗಳಲ್ಲಿ ನೀರಿಗಾಗಿ ಮಹಿಳೆಯರು ಮೈಲುಗಳಷ್ಟು ದೂರ ನಡೆದು ಹೋಗುವ ಸ್ಥಿತಿ ಇಂದಿಗೂ ಮುಂದುವರಿದಿದೆ. ಶುದ್ಧ ನೀರಿನ ವ್ಯವಸ್ಥೆ ಇಲ್ಲದ ಕಾರಣ ಅನಾರೋಗ್ಯವೂ ಹೆಚ್ಚುತ್ತಿದೆ. ಸರ್ಕಾರಗಳು ಘೋಷಣೆಗಳಷ್ಟರಲ್ಲಿ ಸೀಮಿತವಾಗದೆ, ಶಾಶ್ವತ ನೀರು ಸರಬರಾಜು ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕಾಗಿದೆ.**

**ಗ್ರಾಮೀಣ ರಸ್ತೆಗಳ ದುಸ್ಥಿತಿ ಕೃಷಿಕರ ಬದುಕಿಗೂ ಮಾರಕವಾಗಿದೆ. ಉತ್ತಮ ರಸ್ತೆ ಇಲ್ಲದಿದ್ದರೆ ಬೆಳೆಗಳನ್ನು ಮಾರುಕಟ್ಟೆಗೆ ತಲುಪಿಸುವುದು ಕಷ್ಟ, ತುರ್ತು ಸಂದರ್ಭದಲ್ಲಿ ಆಸ್ಪತ್ರೆಗೂ ಹೋಗಲು ತೊಂದರೆ. ಹಳ್ಳಿಹಳ್ಳಿಗಳನ್ನು ಸಂಪರ್ಕಿಸುವ ಸುಸಜ್ಜಿತ ರಸ್ತೆ ಜಾಲ ನಿರ್ಮಾಣವೇ ಗ್ರಾಮೀಣ ಆರ್ಥಿಕತೆಯ ಬೆನ್ನೆಲುಬಾಗಿದೆ.**

**ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿಯೂ ಗ್ರಾಮೀಣ ಭಾಗಗಳು ಹಿಂದೆ ಬಿದ್ದಿವೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಇಲ್ಲ, ಔಷಧಿಗಳ ಕೊರತೆ, ಮೂಲಭೂತ ಉಪಕರಣಗಳ ಅಭಾವ ಜನರನ್ನು ಖಾಸಗಿ ಆಸ್ಪತ್ರೆಗಳತ್ತ ತಳ್ಳುತ್ತಿದೆ. ಅದೇ ರೀತಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ, ಮೂಲಸೌಕರ್ಯದ ಅಭಾವದಿಂದ ಮಕ್ಕಳ ಭವಿಷ್ಯ ಮಂಕಾಗುತ್ತಿದೆ. ಸರ್ಕಾರವು ಗ್ರಾಮೀಣ ಪ್ರದೇಶಗಳಿಗೆ ವಿಶೇಷ ಗಮನ ನೀಡಿ, ಗುಣಮಟ್ಟದ ಸೇವೆಗಳನ್ನು ತಲುಪಿಸಬೇಕಾಗಿದೆ.**

**ವಿದ್ಯುತ್, ಇಂಟರ್‌ನೆಟ್ ಸಂಪರ್ಕವೂ ಇಂದಿನ ಕಾಲದಲ್ಲಿ ಅಗತ್ಯ ಮೂಲಸೌಕರ್ಯಗಳಾಗಿವೆ. ಡಿಜಿಟಲ್ ಸೇವೆಗಳ ಯುಗದಲ್ಲಿ ಗ್ರಾಮೀಣ ಜನರು ಹಿಂದುಳಿಯಬಾರದು ಎಂದರೆ ಪ್ರತಿಹಳ್ಳಿಗೂ ವಿಶ್ವಾಸಾರ್ಹ ವಿದ್ಯುತ್ ಮತ್ತು ಜಾಲ ಸಂಪರ್ಕ ಕಲ್ಪಿಸಬೇಕು.**

**ಒಟ್ಟಿನಲ್ಲಿ ಗ್ರಾಮೀಣ ಅಭಿವೃದ್ಧಿ ಎಂದರೆ ಕೇವಲ ಯೋಜನೆಗಳ ಘೋಷಣೆ ಅಲ್ಲ, ಅವುಗಳ ನೈಜ ಅನುಷ್ಠಾನವೇ ಮುಖ್ಯ. ರಾಜಕೀಯ ನಾಯಕರು ಗ್ರಾಮೀಣ ಪ್ರದೇಶಗಳನ್ನು ಮತಬ್ಯಾಂಕ್ ಆಗಿ ಮಾತ್ರ ನೋಡದೆ, ದೇಶದ ಅಭಿವೃದ್ಧಿಯ ಕೇಂದ್ರಬಿಂದುವಾಗಿ ಪರಿಗಣಿಸಬೇಕು. ಹಳ್ಳಿಗಳು ಬಲಿಷ್ಠವಾದಾಗಲೇ ರಾಜ್ಯವೂ ದೇಶವೂ ಸಮೃದ್ಧಿಯಾಗುತ್ತದೆ.**

**ಗ್ರಾಮೀಣ ಜನತೆಗೆ ಸಮರ್ಪಕ ಮೂಲಭೂತ ಸೌಕರ್ಯಗಳು ಒದಗಿಸುವುದು ದಯೆಯಲ್ಲ -ಅದು ಸರ್ಕಾರದ ಕರ್ತವ್ಯ. ಈ ಕರ್ತವ್ಯ ನಿಷ್ಠೆಯಿಂದ ನೆರವೇರಿದಾಗ ಮಾತ್ರ ನಿಜವಾದ "ಸಮಗ್ರ ಅಭಿವೃದ್ಧಿ" ಸಾಧ್ಯವಾಗುತ್ತದೆ.**

# ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಶ್ರಮಿಸಬೇಕು: ಡಾ. ಬಸವಲಿಂಗ ಪಟ್ಟದೇವರು

ಮಲ್ಲಮ್ಮ ನುಡಿ ವಾರ್ತೆ,ಚಿಟಗುಪ್ಪ:



ಮಕ್ಕಳು ಚೆನ್ನಾಗಿ ಓದಿ ಹೆಚ್ಚು ಅಂಕಗಳಿಸಿದರೆ ಮಾತ್ರ ಬದುಕು ಸಾರ್ಥಕವಾಗದು, ಶಿಕ್ಷಣದ ಜೊತೆಗೆ, ಸಂಸ್ಕಾರ, ಆರೋಗ್ಯವೂ ಮುಖ್ಯವಾಗುತ್ತದೆ. ಆದ್ದರಿಂದ ಪೋಷಕರು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಬೇಕಾದ ಮಾರ್ಗದರ್ಶನ, ಸಹಕಾರ, ಸಲಹೆ, ನೀಡಬೇಕು ಎಂದು ನಾಡೋಜ ಪೂಜ್ಯ ಶ್ರೀ ಡಾ. ಬಸವಲಿಂಗ ಪಟ್ಟದೇವರು ಸಲಹೆ ನೀಡಿದರು. ತಾಲೂಕಿನ ಕಂದಗುಳ ಗ್ರಾಮದಲ್ಲಿರುವ ಡಾ. ಚನ್ನಬಸವ ಪಟ್ಟದೇವರು ಗುರುಕುಲ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಮೂರ್ತಿ ಅನಾವರಣ, 21ನೇ ಶಾಲಾ ವಾರ್ಷಿಕೋತ್ಸವ ಹಾಗೂ 10ನೇ ತರಗತಿಯ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ನಮ್ಮಲ್ಲಿ ಆಧುನಿಕತೆ ಬೆಳೆದಂತೆ ಮಾನವೀಯ ಮೌಲ್ಯಗಳು ಮರೆಯಾಗುತ್ತಿದ್ದು, ಆರೋಗ್ಯದ ಬಗ್ಗೆ ಕಾಳಜಿ ವಹಿಸುತ್ತಿಲ್ಲ. ಮಕ್ಕಳು ಊಟ ಮಾಡಲು ಹಠ ಮಾಡಿದರೆ ಮೊಬೈಲ್ ಕೊಡುತ್ತಾರೆ. 10ನೇ ತರಗತಿ ಮುಗಿಸುವವರೆಗೂ ಮಕ್ಕಳಿಗೆ ಮೊಬೈಲ್ ನೀಡಲೇಬಾರದು. ಮೊಬೈಲ್ ನೀಡುವುದರಿಂದ ಮಕ್ಕಳ ಕಣ್ಣು ಮತ್ತು ಮಿದುಳಿನ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ ಎಂದರು.

ಬಸವಕಲ್ಯಾಣ ಸಹಾಯಕ ಆಯುಕ್ತ ಪ್ರಕಾಶ ಕುದರೆ ಬಸವಣ್ಣನವರ ಮೂರ್ತಿ ಅನಾವರಣಗೊಳಿಸಿ ಮಾತನಾಡಿದ ಅವರು, ಶಿಕ್ಷಕರು ಪುಸ್ತಕದಲ್ಲಿರುವ ಶಿಕ್ಷಣ ಕೊಡುವುದಷ್ಟೇ ಅವರ ಕೆಲಸವಲ್ಲ. ಪ್ರತಿಭಾವಂತ ವಿದ್ಯಾರ್ಥಿಗಳನ್ನಾಗಿ ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ, ಅದು ಕಂದಗುಳ ಗುರುಕುಲ ಶಾಲೆಯಲ್ಲಿ ಶಿಕ್ಷಕರು ನೀಡುತ್ತಿದ್ದಾರೆ. 12ನೇ ಶತಮಾನ ಬಹಳ ಪ್ರಸಿದ್ಧಿ ಪಡೆದಿರುವ ಶತಮಾನವಾಗಿದೆ. ಹಲವಾರು ಶರಣರು ವಚನ ಸಾಹಿತ್ಯಗಳನ್ನು ಕೊಡುಗೆ ನೀಡಿದ್ದಾರೆ. ಶರಣರ ಇತಿಹಾಸ ಹಾಗೂ ವಚನಗಳನ್ನು ವಿದ್ಯಾರ್ಥಿಗಳು ಅಧ್ಯಯನ ಮಾಡಬೇಕು ಎಂದು ಹೇಳಿದರು. ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವಪಟ್ಟದೇವರು, ಮಹಾಲಿಂಗ ಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ಸ್ಥಾನಿಕ ಕಮಿಟಿ ಅಧ್ಯಕ್ಷ ಮಾಣಿಕರಾವ ಹೌಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಾಲೆಯ ಮುಖ್ಯ ಶಿಕ್ಷಕಿ ರೇಖಾ ಪಿ.ಎಂ. ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಸಂಗಮೇಶ ಜವಾದಿ, ವಿರೇಶಪ್ಪ, ಮೋಹನರೆಡ್ಡಿ, ಅಮೃತಪ್ಪ ದೇವಣಿ, ಗೌರಮ್ಮ ಪೊಲೀಸ್ ಪಾಟೀಲ್, ಶಿವಶರಣಪ್ಪ ಪಾಟೀಲ್, ಶಂಭುಲಿಂಗ ಪೊಲೀಸ್ ಪಾಟೀಲ್ ಸೇರಿದಂತೆ ಸಿಬ್ಬಂದಿ ವರ್ಗದವರು, ಪೋಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪೂರ್ಣಿಮಾ ಗಿರೀಶ್, ತನುಶ್ರೀ ರಾಜರೆಡ್ಡಿ, ಕೀರ್ತನಾ ಚಂದ್ರಶೇಖರ್ ಪೂಜ್ಯರು ನಡೆದು ಬಂದ ದಾರಿ ಬಗ್ಗೆ ಮಾತನಾಡಿದರು. ಬಂಡೆಪ್ಪ ಮೂಲಗೆ ಸ್ವಾಗತಿಸಿದರು. ದಿಲೀಪಕುಮಾರ್ ಚವ್ಹಾಣ ನಿರೂಪಿಸಿದರು, ಮಹಾದೇವ ಶಟಗಾರ ವಂದಿಸಿದರು.

ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಕಂಗನಕೋಟ: ಸಿದ್ದೇಶ್ವರ ಜಾತ್ರಾ ಮಹೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಬೀದರ್:



ಬೀದರ ತಾಲೂಕಿನ ಕಂಗನಕೋಟ್ ಗ್ರಾಮದಲ್ಲಿ ಮಹಾ ಶಿವರಾತ್ರಿ ನಿಮಿತ್ಯ 15, 16, ಮತ್ತು 17 ರಂದು ಶ್ರೀ ಸಿದ್ದೇಶ್ವರ ಜಾತ್ರಾ ಮಹೋತ್ಸವ ಬಹಳ ವೈಭವಪೂರ್ಣವಾಗಿ ಜರುಗಲಿದೆ. ಎಂದು ಶ್ರೀ ಸಿದ್ದೇಶ್ವರ ದೇವಾಲಯದ ಟ್ರಸ್ಟ್ ನ ಆಡಳಿತ ಮಂಡಳಿಯವರು ತಿಳಿಸಿದ್ದಾರೆ.

ಫೆಬ್ರುವರಿ 15ರಂದು ಸಾಯಂಕಾಲ ಸಾಮೂಹಿಕ ಇಷ್ಟಲಿಂಗ ಪೂಜೆ ಹೆಣ್ಣುಮಕ್ಕಳಿಂದ ಕೋಲಾಟ ತುಕಾರಾಂ ಡೋಲೆ ಅವರಿಂದ ಜಾದು,ಮತ್ತು ಕಂಗನಕೋಟ್ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಹಾಗು ಫೆಬ್ರವರಿ 16 ಮತ್ತು 17 ರಂದು ಸಾಯಂಕಾಲ 4 ಗಂಟೆಗೆ ಪೂಜ್ಯ ಶ್ರೀ ಗಣೇಶಾನಂದ ಮಹಾರಾಜರ ಸಾನಿಧ್ಯದಲ್ಲಿ ಪ್ರವಚನ ಹಾಗು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಗೈದ ಮಹನೀಯರಿಗೆ ವಿಶೇಷ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮಕ್ಕೆ ವಿವಿಧ ಗಣ್ಯರು ಆಗಮಿಸಿತಿದ್ದು ಎಲ್ಲ ಸದ್ಭಕ್ತರು ಕಾರ್ಯಕ್ರಮಕ್ಕೆ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಶ್ರೀ ಸಿದ್ದೇಶ್ವರ ದೇವಾಲಯದ ಟ್ರಸ್ಟ್ ಆಡಳಿತ ಮಂಡಳಿಯವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# 16ಕ್ಕೆ ಖಂಡ್ರೆ ಅಭಿನಂದನಾ ಸಮಾರಂಭಕ್ಕೆ ತೀರ್ಮಾನ

• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ:

> **ಸಮುದಾಯದ ಸೇವೆ ನಿಷ್ಠೆಗೆ ಈಶ್ವರ ಖಂಡ್ರೆ ಅವರಿಗೆ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷ ಸ್ಥಾನ ಒಲಿದು ಬಂದಿದೆ. ಅವರ ಅಭಿನಂದನಾ ಸಮಾರಂಭಕ್ಕೆ ಜಿಲ್ಲೆಯ ಭಕ್ತರು, ಎಲ್ಲ ಸಮುದಾಯ, ಸಂಘ ಸಂಸ್ಥೆ ಮುಖಂಡರು, ಖಂಡ್ರೆ ಅವರ ಅಭಿಮಾನಿಗಳು, ಹಿತೈಷಿಗಳು ಸಾಕ್ಷಿಯಾಗಬೇಕು.**
> – **ಗುರುಬಸವ ಪಟ್ಟದ್ದೇವರು** ಹಿರೇಮಠ ಸಂಸ್ಥಾನ ಭಾಲ್ಕಿ



ಪಟ್ಟಣದಲ್ಲಿ ಫೆ.16ರಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ 24ನೇ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಖಂಡ್ರೆ ಅವರ ಅಭಿನಂದನಾ ಸಮಾರಂಭ ಆಯೋಜಿಸಲು ಒಮ್ಮತದ ತೀರ್ಮಾನ ಕೈಗೊಳ್ಳಲಾಯಿತು. ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯಲ್ಲಿ ವಿವಿಧ ಸಮುದಾಯ, ಸಂಘ ಸಂಸ್ಥೆಗಳ ಮುಖಂಡರು ಮಾತನಾಡಿ ಅಭಿನಂದನಾ ಸಮಾರಂಭದ ಯಶಸ್ವಿಗೆ ಅಗತ್ಯ ಸಲಹೆಗಳನ್ನು ನೀಡಿದರು. ಸಾನ್ನಿಧ್ಯ ವಹಿಸಿದ್ದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಗಡಿ ಜಿಲ್ಲೆ ಬೀದರ್ ನ ಪ್ರಗತಿಯಲ್ಲಿ ಖಂಡ್ರೆ ಮನೆತನದ ಕೊಡುಗೆ ದೊಡ್ಡದಿದೆ. ಈಶ್ವರ ಖಂಡ್ರೆ ಅವರು ಶಾಸಕ, ಸಚಿವರಾಗಿ ಜಿಲ್ಲೆ ಮತ್ತು ರಾಜ್ಯದ ಏಳಿಗೆಗೆ ಶ್ರಮಿಸುತ್ತಿದ್ದಾರೆ. ಜತೆಗೆ ಲಿಂಗಾಯತ ಸಮಾಜದ ಪ್ರಭಾವಿ ನಾಯಕರಾಗಿ ಸಮುದಾಯವನ್ನು ಸಂಘಟಿಸಲು ಹಗಲಿರುಳು ಶ್ರಮಿಸುತ್ತಿದ್ದಾರೆ.

ಅಂತವರು ವೀರಶೈವ ಲಿಂಗಾಯತ ಮಹಾಸಭೆಯ 24ನೇ ರಾಷ್ಟ್ರೀಯ ಅಧ್ಯಕ್ಷರಾಗಿ ಆಯ್ಕೆ ಆಗಿರುವುದು ನಮ್ಮೆಲ್ಲರಿಗೂ ಹೆಮ್ಮೆ ತರಿಸಿದೆ. ಎಲ್ಲೆಡೆ ಸನ್ಮಾನ, ಗೌರವ ನಡೆದರೂ ಕೂಡ ತಾವು ಪ್ರತಿನಿಧಿಸುವ ಕ್ಷೇತ್ರದಲ್ಲಿ ತೋರುವ ಪ್ರೀತಿ, ಗೌರವ, ಅಭಿನಂದನೆ ಹೆಚ್ಚು ಮಹತ್ವ ಕೊಡುತ್ತದೆ. ಹಾಗಾಗಿ ಹಿರೇಮಠ ಸಂಸ್ಥಾನ ಜತೆಗೆ ವಿವಿಧ ಸಮುದಾಯ, ಸಂಘ ಸಂಸ್ಥೆಗಳ ಸಹಯೋಗದಲ್ಲಿ ಮಹಾಸಭೆಯ ಅಧ್ಯಕ್ಷ ಈಶ್ವರ ಖಂಡ್ರೆ ಅಭಿನಂದನಾ ಸಮಾರಂಭ ನೆರವೇರಿಸಲು ಎಲ್ಲರೂ ಒಮ್ಮತದ ನಿರ್ಧಾರ ಕೈಗೊಂಡಿರುವುದು ಸಂತಸ ತರಿಸಿದೆ. ಚನ್ನಬಸವಾಶ್ರಮ ಪರಿಸರದಲ್ಲಿ ಅಂದು ಸಾಯಂಕಾಲ 5 ಗಂಟೆಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ದಿವ್ಯ ಸಾನ್ನಿಧ್ಯದಲ್ಲಿ ಅಭಿನಂದನಾ ಸಮಾರಂಭ ನೆರವೇರಲಿದ್ದು ಜಿಲ್ಲೆಯ ಭಕ್ತರು, ವಿವಿಧ ಸಮುದಾಯ, ಸಂಘ ಸಂಸ್ಥೆಗಳ ಮುಖಂಡರು, ಸಮುದಾಯದ ಅಭಿಮಾನಿಗಳು, ಹಿತೈಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು. ಪ್ರಮುಖರಾದ ಚಂದ್ರಶೇಖರ ಬನ್ನಾಳೆ, ವಿಲಾಸ ಮೋರೆ, ಬಸವರಾಜ ಮರೆ, ಪ್ರಭು ಡಿಗ್ಗೆ, ಕಪಿಲ ಕಲ್ಯಾಣೆ, ರಾಜಪ್ಪ ಪಾಟೀಲ್, ಶಿವಾನಂದ ಗುಂದಗೆ, ಶರಣಪ್ಪ ಬಿರಾದಾರ್, ವಿಶ್ವನಾಥಪ್ಪ ಬಿರಾದಾರ್, ಸಂತೋಷ ಬಿಜಿ ಪಾಟೀಲ್, ಸಂಗಮೇಶ ಗುಮ್ಮೆ, ಸುನಿತಾ ಮಮ್ಮಾ, ಮಹಾನಂದಾ ಮಾಶೆಟ್ಟೆ ಸೇರಿದಂತೆ ಹಲವರು ಇದ್ದರು. ಹಾನಗಲ್ ಕುಮಾರೇಶ್ವರ ಉಚಿತ ಪ್ರಸಾದ ನಿಲಯದ ವಿದ್ಯಾರ್ಥಿಗಳಾದ ಚನ್ನವೀರ, ಸುಂದರ ಪ್ರಾರ್ಥನೆ ಗೀತೆ ನಡೆಸಿ ಕೊಟ್ಟರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು.

# ಡಿವೈಎಸ್ಪಿಗೆ ಹಿಂದೂಪರ ಸಂಘಟನೆ ಪದಾಧಿಕಾರಿಗಳ ಮನವಿ ಅವಹೇಳನಕಾರಿ ಹೇಳಿಕೆ: ಆರೋಪಿ ವಿರುದ್ಧ ಕ್ರಮಕ್ಕೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:



**ಭಾಲ್ಕಿಯ ಡಿವೈಎಸ್ಪಿ ಕಚೇರಿಯಲ್ಲಿ ಅವಹೇಳನಕಾರಿ ಹೇಳಿಕೆ ನೀಡಿರುವ ಆರೋಪಿಗಳ ಬಂಧನಕ್ಕೆ ಆಗ್ರಹಿಸಿ ಹಿಂದುಪರ ಸಂಘಟನೆಗಳ ಪದಾಧಿಕಾರಿಗಳು ಡಿವೈಎಸ್ಪಿಗೆ ಮನವಿ ಪತ್ರ ಸಲ್ಲಿಸಿದರು.**

ಹಿಂದುಪರ ದೇವರ ಮತ್ತು ರಾಷ್ಟ್ರಪೀತ ಮಹಾತ್ಮ ಗಾಂಧಿಜೀ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿರುವ ಆರೋಪಿಗಳನ್ನು ಕೂಡಲೇ ಬಂಧಿಸಿ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಹಿಂದುಪರ ಸಂಘಟನೆಗಳ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಈ ಕುರಿತು ಪಟ್ಟಣದ ಡಿವೈಎಸ್ಪಿ ಕಚೇರಿಯಲ್ಲಿ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳ ತಾಲೂಕು ಘಟಕದ ಪದಾಧಿಕಾರಿಗಳು ಡಿವೈಎಸ್ಪಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಚಲಿಸುವ ರೈಲಿನಲ್ಲಿ ಅಟ್ಟರ್ಗಾ ಗ್ರಾಮದ ನಿವಾಸಿ ಕಾಳಿದಾಸ ಅರ್ಜುನ ಸೂರ್ಯವಂಶಿ, ವರವಟ್ಟಿ ಗ್ರಾಮದ ಕಪಿಲಗೋಡಬಲೆ ಮತ್ತು ರಾಹುಲ ಖಂಡಾರೆ ಎಂಬುವರ ಗುಂಪು ವಿಡಿಯೋ ಚಿತ್ರಕರಿಸಿ ಹಿಂದುಪರ ಆರಾಧ್ಯ ದೈವರಾದ ಶ್ರೀರಾಮಚಂದ್ರ, ಶ್ರೀಕೃಷ್ಣ ಮತ್ತು ಮಹಾತ್ಮ ಗಾಂಧೀಜಿ ಅವರ ಅವಹೇಳನಕಾರಿ ಹೇಳಿಕೆ ನೀಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು ಸಮಾಜದ ಶಾಂತಿ ಮತ್ತು ಸುವ್ಯವಸ್ಥೆಗೆ ಧಕ್ಕೆ ತರುವ ಕೆಲಸ ಮಾಡುವುದರ ಜತೆಗೆ ರಾಷ್ಟ್ರೀಯ ಗೌರವಕ್ಕೆ ಚ್ಯುತಿ ತಂದಿದ್ದಾರೆ.

ಸಮಾಜದಲ್ಲಿ ದ್ವೇಷ ಭಾವನೆ ಬಿತ್ತುತ್ತಿರುವ ಇಂತಹ ಆರೋಪಿಗಳನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಜರುಗಿಸಿ ತಾಲೂಕಿನಲ್ಲಿ ಶಾಂತಿ ಮತ್ತು ಸೌಹಾರ್ದತೆಯನ್ನು ಕಾಪಾಡಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಸಂದರ್ಭದಲ್ಲಿ ಹಿಂದುಪರ ಸಂಘಟನೆಗಳ ಅಧ್ಯಕ್ಷ ಶಿವು ಲೋಖಂಡೆ, ತಾಲೂಕು ವಿಶ್ವಹಿಂದು ಪರಿಷತ್ ಅಧ್ಯಕ್ಷ ಸಚಿನ ಜಾಧವ, ತಾಲೂಕು ಬಜರಂಗದಳ ಸಂಯೋಜಕ ದೇವರಾಜಸಿಂಗ ಠಾಕೂರ, ಪ್ರಮುಖರಾದ ರವಿಕಾಂತ ಕುಂಬಾರ, ಶೈಲೇಶ ಮಾಲಪಾನಿ, ಜೈರಾಜ ಕೊಳ್ಳಾ, ಪಾಂಡುರಂಗ ಕನಸೆ, ಸಂದೀಪ ತೇಲಗಾಂವಕರ, ಪ್ರೀತಮ ಜಾಧವ, ಕೃಷ್ಣಕಾಂತ, ಮಲ್ಲಿಕಾರ್ಜುನ ಸೋಲಾಪುರೆ, ಸಾಗರ ಗುಬ್ಬೆ, ಪ್ರಕಾಶ ಪಾಟೀಲ್, ಬಸವ, ನವನಾಥ ಪಾಟೀಲ್, ವಿಜಯಕುಮಾರ ಸೇರಿದಂತೆ ಹಲವರು ಇದ್ದರು.

# ಬಸ್ಸುಗಳ ಮೇಲೆ ಗುಟಕಾ ತಂಬಾಕು ಜಾಹೀರಾತು ವಿರೋಧಿಸಿ ಪ್ರತಿಭಟನೆ



• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ(ಕೆಕೆಆರ್‌ಟಿಸಿ) ಬೀದರ್ ಜಿಲ್ಲೆಯ ಬಸ್ಸುಗಳ ಮೇಲೆ ಗುಟಕಾ, ತಂಬಾಕು ಹಾಗೂ ಸಿಗರೇಟ್ ಉತ್ಪನ್ನಗಳ ಜಾಹೀರಾತು ಪೋಸ್ಟರ್‌ಗಳನ್ನು ಅಂಟಿಸಿರುವುದನ್ನು ಖಂಡಿಸಿ ಕನ್ನಡ ಸೇನೆ ಇಂದು ಬೀದರ್ ಕೇಂದ್ರ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿತು. ಕನ್ನಡ ಸೇನೆಯ ಜಿಲ್ಲಾ ಅಧ್ಯಕ್ಷರಾದ ಸುಭಾಷ್ ಕೆನಾಡೆ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ಬಸ್ಸುಗಳ ಮೇಲೆ ಅಂಟಿಸಿದ್ದ ಮಾದಕ ವಸ್ತುಗಳ ಜಾಹೀರಾತು ಪೋಸ್ಟರ್‌ಗಳನ್ನು ತೆರವುಗೊಳಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಕೆಕೆಆರ್‌ಟಿಸಿ ಸರ್ಕಾರದ ಅಂಗ ಸಂಸ್ಥೆಯಾಗಿದ್ದು, ಜನಸೇವೆ ಮತ್ತು ಸಾರ್ವಜನಿಕ ಆರೋಗ್ಯ ಕಾಪಾಡುವುದು ಅದರ ಮೂಲ ಕರ್ತವ್ಯ ಎಂದು ಕನ್ನಡ ಸೇನೆ ಮುಖಂಡರು ತಿಳಿಸಿದರು. ಆದರೆ, ಸರ್ಕಾರವೇ ಜೀವಕ್ಕೆ ಹಾನಿಕಾರಕವೆಂದು ಎಚ್ಚರಿಕೆ ನೀಡಿರುವ ಮಾದಕ ವಸ್ತುಗಳ ಜಾಹೀರಾತುಗಳನ್ನು ಸಾರ್ವಜನಿಕ ಸಾರಿಗೆ ಬಸ್ಸುಗಳ ಮೇಲೆ ಪ್ರದರ್ಶಿಸುವುದು ಕಾನೂನು ಹಾಗೂ ನೈತಿಕತೆಗೆ ವಿರುದ್ಧ ಎಂದು ಅವರು ಆರೋಪಿಸಿದರು. ಗ್ರಾಮೀಣ ಹಾಗೂ ಹಳ್ಳಿಭಾಗಗಳಲ್ಲಿ ಸಂಚರಿಸುವ ಬಸ್ಸುಗಳ ಮೇಲಿನ ಇಂತಹ ಜಾಹೀರಾತುಗಳು ಯುವಜನರನ್ನು ವ್ಯಸನದತ್ತ ಆಕರ್ಷಿಸಿ ಸಾಮಾಜಿಕ ಹಾನಿಗೆ ಕಾರಣವಾಗುತ್ತಿದೆ ಎಂದು ಅಭಿಪ್ರಾಯಪಟ್ಟರು. ಆದ್ದರಿಂದ, ಸಾಮಾಜಿಕ ಸ್ವಸ್ಥತೆ ಹಾಗೂ ಯುವಜನರ ಭವಿಷ್ಯವನ್ನು ಕಾಪಾಡುವ ಹಿತದೃಷ್ಟಿಯಿಂದ ತಂಬಾಕು ಗುಟಕಾ ಜಾಹೀರಾತುಗಳನ್ನು ಕೂಡಲೇ ಸಂಪೂರ್ಣವಾಗಿ ತೆರವುಗೊಳಿಸಬೇಕು ಎಂದು ಕೆಕೆಆರ್‌ಟಿಸಿ ಅಧಿಕಾರಿಗಳಿಗೆ ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಕನ್ನಡ ಸೇನೆ ರಾಜ್ಯ ಉಪಾಧ್ಯಕ್ಷ ರವಿ ಸ್ವಾಮಿ ನಿರ್ಣಾ, ತಾಲೂಕ ಅಧ್ಯಕ್ಷ ರಾಜು ಮಂಗಲ್‌ಪೇಟ್, ಜಿಲ್ಲಾ ಉಪಾಧ್ಯಕ್ಷ ಪ್ರಭು ಶೆಟ್ಟಿ ಪಸರಗಿ, ಮಳಸಕಾಂತ ವಾಗೆ, ಸೋಮನಾಥ್ ವರಟ್ಟಿ, ಪರಶುರಾಮ್ ಮೈಸೂರು, ಚನ್ನಬಸವ ಘಾಳೆ, ನಾಗಶೆಟ್ಟಿ ಸಜ್ಜನ್ ಶೆಟ್ಟಿ, ಲಕ್ಷ್ಮಣ್ ಅಲ್ಲುರೆ, ತಿಪ್ಪಾರೆಡ್ಡಿ, ರಮೇಶ್ ಧೂಳು, ಉದಯ ಹೀಬಾರೆ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಬೇಸಿಗೆ ಬಂತು ಕುಡಿಯುವ ನೀರು ಬಿಸಿಗಾಳಿ ಜಾನುವಾರಗಳ ಮೇವಿನ ಬಗ್ಗೆ ಮುಂಜಾಗ್ರತೆ ಇರಲಿ: ಜಿಲ್ಲಾಧಿಕಾರಿ




• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಕಲಬುರಗಿ ಜಿಲ್ಲೆಯಲ್ಲಿ ಮುಂಬರುವ ಬೇಸಿಗೆ ಸಮಯದಲ್ಲಿ ಕುಡಿಯುವ ನೀರು, ಜಾನುವಾರಗಳ ಮೇವು ಹಾಗೂ ಬಿಸಿಗಾಳಿ ಬೀಸಿದಲ್ಲಿ ಅಗತ್ಯ ಮುಂಜಾಗ್ರತ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವತಿಯಿಂದ ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಈ ಕುರಿತಂತೆ ಜಿಲ್ಲಾ ಮತ್ತು ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಚರ್ಚಿಸಲು ಹಮ್ಮಿಕೊಳ್ಳಲಾಗಿದ್ದ ವಿಡಿಯೋ ಕಾನ್ಫರೆನ್ಸ್ ನಲ್ಲಿ ಮಾತನಾಡಿದ ಅವರು, ಕಲಬುರಗಿ ಜಿಲ್ಲೆಯಲ್ಲಿ ಜನವರಿ 2025 ರಿಂದ ಡಿಸೆಂಬರ್ ವರೆಗೆ ವಾಡಿಕೆಯಂತೆ 770 ಮಿ.ಮಿ ಮಳೆಯಾಗಬೇಕಾಗಿದ್ದು, 1068 ಮಿ.ಮಿ ಮಳೆಯಾಗುವ ಮೂಲಕ ಶೇ 39 ರಷ್ಟು ಹೆಚ್ಚು ಮಳೆಯಾಗಿತ್ತು. ಆದರೆ, 2026 ರ ಜನವರಿಯಿಂದ ಫೆಬ್ರವರಿ 11 ರ ವರೆಗೆ ವಾಡಿಕೆಯಂತೆ 6.1 ಮಿ.ಮಿ ಮಳೆಯಾಗಬೇಕಾಗಿದ್ದು, ಈವರೆಗೆ ಯಾವುದೇ ಮಳೆಯಾಗದಿರುವುದು ಆತಂಕ ಮೂಡಿಸಿದೆ ಎಂದರು.

ಸಂಬಂಧಿಸಿದ ಅಧಿಕಾರಿಗಳಿಂದ ಕಲಬುರಗಿ ಜಿಲ್ಲೆಯ ಕುಡಿಯುವ ನೀರಿನ ಮೂಲಗಳಾದ ಬೆಣ್ಣಿತೊರ, ಭೀಮಾ, ಚಂದ್ರಂಪಳ್ಳಿ, ಗಂಡೋರಿನಾಲ ಸೇರಿದಂತೆ ಇತರೆ ಸ್ಥಳಗಳಲ್ಲಿ ಹಾಗೂ ಕೆರೆಗಳಲ್ಲಿ ಪ್ರಸ್ತುತವಾಗಿ ಲಭ್ಯವಿರುವ ನೀರಿನ ಮಾಹಿತಿಯನ್ನು ಪಡೆದ ಅವರು ಭವಿಷ್ಯದಲ್ಲಿ ಎದುರಾಗಬಹುದಾದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಕೈಗೊಳ್ಳಬಹುದಾದ ಅಂಶಗಳ ಕುರಿತು ಚರ್ಚಿಸಿದರು.

ಮುಂಬರುವ ಬೇಸಿಗೆ ಸಮಯದಲ್ಲಿ ಕಲಬುರಗಿ ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಜನ-ಜಾನುವಾರಗಳಿಗೆ ಸೇರಿದಂತೆ ಕುಡಿಯುವ ನೀರಿನ ಸಲುವಾಗಿ ಒಟ್ಟು 4 ಟಿಎಂಸಿ ನೀರಿನ ಅಗತ್ಯವಿದ್ದು ಸದರಿ 4 ಟಿಎಂಸಿ ನೀರಿನ ಪ್ರಮಾಣವನ್ನು ಕಾಯ್ದಿರಿಸುವಂತೆ ನೀರಾವರಿ ಸಲಹಾ ಸಮಿತಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಬೇಸಿಗೆಯ ಸಂದರ್ಭದಲ್ಲಿ ಕುಡಿಯುವ ನೀರಿನ ಅಭಾವಕ್ಕೆ ಒಳಗಾಗುವ 170 ಕ್ಕೂ ಹೆಚ್ಚು ಗ್ರಾಮಗಳಿಗೆ ಲಭ್ಯವಿರುವ ನೀರಿನ ಮೂಲಗಳಾದ ಕೊಳವೆ/ತೆರೆದ ಭಾವಿ, ಹೊಸ ಬೋರವೆಲ್, ಟ್ಯಾಂಕರ್ ಸೇರಿದಂತೆ ಖಾಸಗಿ ಮಾಲೀಕರ ಕೊಳವೆ/ತೆರೆದ ಭಾವಿಗಳನ್ನು ಬಳಸಿಕೊಂಡು ಸಾರ್ವಜನಿಕರಿಗೆ ನೀರು ಒದಗಿಸಲು ಈಗಲೇ ಸೂಕ್ತ ಮುಂಜಾಗ್ರತ ಕ್ರಮಕೈಗೊಳ್ಳುವಂತೆ ಸೂಚಿಸಿದರು.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಯಾವುದೇ ತಾಲೂಕುಗಳನ್ನು ಬರ ಪೀಡಿತ ತಾಲೂಕುಗಳೆಂದು ಘೋಷಿಸಿ ಆದೇಶಿಸಿರುವುದಿಲ್ಲ, ಹೀಗಾಗಿ ಈ ವರ್ಷ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಎಸ್.ಡಿ.ಆರ್.ಎಫ್ ಅನುದಾನವನ್ನು ಬಳಸಿಕೊಳ್ಳಲು ಅವಕಾಶವಿರುವುದಿಲ್ಲ. ಆದ್ದರಿಂದ, ಜಿಲ್ಲೆಯ ಯಾವುದೇ ತಾಲೂಕಿನಲ್ಲಿ ಕುಡಿಯುವ ನೀರಿಗಾಗಿ ತೆಗೆದುಕೊಂಡ ಖಾಸಗಿ ಕೊಳವೆ/ತೆ-ರೆದ ಬಾವಿಯ ಮತ್ತು ಟ್ಯಾಂಕರ್ ಸಾಗಾಣಿಕೆ ವೆಚ್ಚವನ್ನು ಗ್ರಾಮ ಪಂಚಾಯತಿಯ 15ನೇ ಹಣಕಾಸು ಯೋಜನೆಯಡಿಯಲ್ಲಿ ಲಭ್ಯವಿರುವ ಅನುದಾನದಿಂದ ಭರಿಸತಕ್ಕದ್ದು.

ಈ ವರ್ಷ ಅಂತರ್ಜಲ ಮಟ್ಟವು ಸುಧಾರಣೆಯಾಗಿರುವುದರಿಂದ ಅವಶ್ಯಕತೆ ಇದ್ದಲ್ಲಿ ಮಾತ್ರ ಹೊಸ ಕೊಳವೆ ಭಾವಿಗಳನ್ನು ಕೊರೆಯಿಸುವ ಕುರಿತು ಸ್ಥಳಗಳನ್ನು ಗುರುತಿಸಿಟ್ಟುಕೊಳ್ಳುವುದು. ಕೆರೆ/ಶೇಖರಣಾ ಜಲಾಶಯಗಳ ಗೇಟ್ಗಳಿಂದ ನೀರು ಸೋರಿಕೆಯನ್ನು ತಡೆಗಟ್ಟುವ ಕುರಿತು ಅವಶ್ಯಕ ಕ್ರಮ ತೆಗೆದುಕೊಳ್ಳುವುದು. ಕಾರ್ಯನಿರ್ವಾಹಕ ಅಭಿಯಂತರರು ಕುಡಿಯುವ ನೀರು ಅವಶ್ಯಕತೆ ಇರುವ ಕಡೆಗೆ ವಿವಿಧ ಪ್ರಸ್ತಾವನೆಗಳಿಗೆ ಶೀಘ್ರ ಅನುಮೋದನೆ ಪಡೆದುಕೊಳ್ಳುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ತೀವ್ರ ಉಷ್ಣಾಂಶದ ಹೆಚ್ಚಳ ಹಾಗೂ ಬಿಸಿಗಾಳಿ ಪರಿಸ್ಥಿತಿಯನ್ನು ನಿಭಾಯಿಸಲು ಸಂಬಂಧಪಟ್ಟ ಇಲಾಖೆಗಳು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗ ಸೂಚಿಯಲ್ಲಿ ತಿಳಿಸಿರುವ ಮಾನದಂಡಗಳನ್ನು ಅನುಸರಿಸುವಂತೆ ಸೂಚಿಸಿದರು.

ತೀವ್ರ ಉಷ್ಣಾಂಶದ ಹೆಚ್ಚಳ ಹಾಗೂ ಬಿಸಿಗಾಳಿ ಪರಿಸ್ಥಿತಿ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ವಿದ್ಯುನ್ಮಾನ ಹಾಗೂ ದೈನಂದಿನ ಪತ್ರಿಕೆಗಳು, ಸಾಮಾಜಿಕ ಮಾಧ್ಯಮಗಳು, ಸರ್ಕಾರೇತರ ಸಂಘ-ಸಂಸ್ಥೆಗಳು, ವೈದ್ಯರು ಹಾಗೂ ಆರೋಗ್ಯ ಸಹಾಯಕರ ಅಗತ್ಯ ನೆರವು ಮತ್ತು ಜಾಗೃತಿ ಅಭಿಯಾನ ಕೈಗೊಳ್ಳವುದು.

ತೀವು ಉಷ್ಣಾಂಶದ ಹೆಚ್ಚಳ ಹಾಗೂ ಬಿಸಿಗಾಳಿ ಹಿನ್ನಲೆಯಲ್ಲಿ ಆಕಸ್ಮಿಕ ಸಂದರ್ಭಗಳಲ್ಲಿ ಚಿಕಿತ್ಸೆ ನೀಡಲು ವೈದ್ಯರುಗಳು, ಆರೋಗ್ಯ ಸಹಾಯಕರುಗಳನ್ನು ಮತ್ತು ಸ್ವಯಂ ಸೇವಕರುಗಳನ್ನು ನಿಯೋಜಿಸುವುದು ಮತ್ತು ಮತ್ತು ಅಗತ್ಯ ತರಬೇತಿಗಳನ್ನು ಹಮ್ಮಿಕೊಳ್ಳುವುದು. ಅಗತ್ಯ ಸಂದರ್ಭಗಳಲ್ಲಿ ವೈದ್ಯಕೀಯ ಕಾಲೇಜುಗಳು ಮತ್ತು ಇ.ಎಸ್.ಐಗಳು ಔಷಧಾಲಯಗಳನ್ನು ಸಾರ್ವಜನಿಕರಿಗೆ ಚಿಕಿತ್ಸೆ ನೀಡುವುದು.

ಸಾರ್ವಜನಿಕ ಸ್ಥಳಗಳಲ್ಲಿ ಬಸ್ಸು ನಿಲ್ದಾಣಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವುದು. ಈ ಬಗ್ಗೆ ದಾನಿಗಳಿಗೆ, ಸರ್ಕಾರೇತರ ಸಂಘ ಸಂಸ್ಥೆಗಳಿಗೆ ಮತ್ತು ಖಾಸಗಿ ಸಂಸ್ಥೆಯವರಿಗೆ ಕುಡಿಯುವ ನೀರಿನ ಅಖಖ (Corporate Social Responsibility) ಅನುದಾನದಾನದಲ್ಲಿ ನೀರಿನ ಕಿಯೋಸ್ಕಳನ್ನು ತರೆಯಲು ಪ್ರೋತ್ಸಾಹ ನೀಡಲಾಗುವುದು.

ತೀವ್ರ ಬಿಸಿಲಿನ ಶಾಖದ ಸಮಯದಲ್ಲಿ ಬಿಸಿಲಿನ ಝಳ ತಪ್ಪಿಸಲು ಕಾರ್ಮಿಕ ಕೆಲಸಗಾರರಿಗೆ ಕೆಲಸದ ವೇಳಾ ಪಟ್ಟಿಯಲ್ಲಿ ಬದಲಾವಣೆ ಮಾಡಲಾಗುವುದು. ಉದ್ಯೋಗದಾರರನು ಉದ್ಯೋಗ ಸ್ಥಳಗಳಲ್ಲಿ ಕುಡಿಯುವ ನೀರು ಪೂರೈಕೆ, ORS ಪೊಟ್ಟಣಗಳ ಪೂರೈಕೆ ಮತ್ತು ನೆರಳಿನ ಶಡ್ ನಿರ್ಮಾಣ ಮಾಡುವುದು ಸೇರಿದಂತೆ ಅಗತ್ಯ ಇದ್ದಲ್ಲಿ ಶಾಲಾ ಕಾಲೇಜ್ ಮತ್ತು ಸರ್ಕಾರಿ ಕಛೇರಿ ಕೆಲಸದ ವೇಳೆಯನ್ನು ಬದಲಾವಣೆ ಮಾಡುವುದು.

ಕುಡಿಯವ ನೀರಿನ ಪರಿಸ್ಥಿತಿ ಎದುರಿಸುತ್ತಿರುವ ಪ್ರತಿ ಗ್ರಾಮಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಪೂರೈಕೆ ಕಾರ್ಯ ಕೈಗೊಳ್ಳುವುದು. ಕುಡಿಯುವ ನೀರಿನ ಸಂಬಂಧ ದೂರುಗಳನ್ನು ಸ್ವೀಕರಿಸಲು ಜಿಲ್ಲಾ/ತಾಲೂಕು ಮಟ್ಟದಲ್ಲಿ ದಿನದ 24 ಗಂಟೆಗಳು ಕೆಲಸ ನಿರ್ವಹಿಸುವ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸುವುದು.

ತೀವು ಬಿಸಿಲಿನ ಶಾಖದಿಂದ ಉದ್ಭವಿಸಬಹುದಾದ ಘಟನೆಗಳನ್ನು ಪರಿಶೀಲಿಸಲು ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮತ್ತು ತಾಲೂಕಿನಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಸಭೆ ಜರುಗಿಸುವುದು, ಮುಂದಿನ ಕ್ರಮಗಳ ಬಗ್ಗೆ, ವಿಮರ್ಶೆ ಕೈಗೊಳ್ಳುವುದು ಮತ್ತು ಮುಂದಿನ ಕ್ರಿಯಾ ಯೋಜನೆ ಕುರಿತು ಚರ್ಚಿಸುವುದನ್ನು ನಿರಂತರವಾಗಿ ಮಾಡಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ. ಭಂವರ ಸಿಂಗ್ ಮೀನಾ, ಉಪಅರಣ್ಯ ಸಂರಕ್ಷಣಾಧಿಕಾರಿ ಸುಮಿತ ಪಾಟೀಲ್, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯ ಆಲದ್‌ಕಟ್ಟಿ, ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಆಹಾರ ವಾಹಿನಿ ಯೋಜನೆಯಡಿ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಆಹಾರ ವಾಹಿನಿ (ಆಹಾರ ಕಿಯೋಸ್ಕ್) ಯೋಜನೆಯಡಿ ಸಾಲ ಸೌಲಭ್ಯ ಪಡೆಯಲು ಸೇವಾಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಕಲಬುರಗಿ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

ಆಹಾರ ವಾಹಿನಿ (ಆಹಾರ ಕಿಯೋಸ್ಕ್) ಯೋಜನೆಯಡಿ ಸ್ಥಳಾಂತರಿಸಬಹುದಾದ ತಿಂಡಿ ಮಳಿಗೆಗಳನ್ನು ನಾಲ್ಕು ಚಕ್ರಗಳ ಇ.ವಿ. (ಇಗಿ) ಗೂಡ್ಸ್ ವಾಹನಗಳನ್ನು ಅಗತ್ಯಕ್ಕೆ ತಕ್ಕಂತೆ ನವೀಕರಿಸಿ ಫಲಾನುಭವಿಗಳಿಗೆ ವಿತರಿಸುವ ಯೋಜನೆಯಾಗಿದೆ. ನಿಗಮದಿಂದ ವಾಹನ ಖರೀದಿಗೆ 3 ಲಕ್ಷ ರೂ. ಗಳ ಸಹಾಯಧನವನ್ನು ಬಿಡುಗಡೆ ಮಾಡಲಾಗುವುದು. ಉಳಿಕೆ ಮೊತ್ತವನ್ನು ಬ್ಯಾಂಕ್‌ಗಳ/ಹಣಕಾಸು ಸಂಸ್ಥೆಗಳಿಂದ ಸಾಲ ಪಡೆಯಬಹುದಾಗಿದೆ. ನಗರ ಪ್ರದೇಶದ ಕಲಬುರಗಿ ಉತ್ತರ ವಿಧಾನಸಭಾ ಕ್ಷೇತ್ರದ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ಸೌಲಭ್ಯ ಪಡೆಯಬಯಸುವವರು ಹಿಂದುಳಿದ ವರ್ಗಗಳ ಪ್ರವರ್ಗ-2(ಎ) ಅಡಿ ಬರುವ ವಿಶ್ವಕರ್ಮ ಸಮುದಾಯ ಹಾಗೂ ಅದರ ಉಪಜಾತಿಗೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ವರಮಾನ 3,00,000 ರೂ. ದೊಳಗಿರಬೇಕು. ಅರ್ಜಿದಾರರ ವಯೋಮಿತಿ 21 ರಿಂದ 45 ವರ್ಷದೊಳಗಿರಬೇಕು. ಹಿಂದುಳಿದ ವರ್ಗಗಳ ವಿಶ್ವಕರ್ಮ ಸಮುದಾಯ ಹಾಗೂ ಅದರ ಉಪಜಾತಿಗೆ ಸೇರಿದ ಅರ್ಜಿದಾರರು ಸೇವಾಸಿಂಧು https://sevasindhu.karnataka.gov.in ಪೋರ್ಟಲ್‌ದಲ್ಲಿ, ಗ್ರಾಮಒನ್, ಗುಲಬರ್ಗಾ ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ 2026ರ ಮಾರ್ಚ್ 7 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಿಗಮದ www.kvcdc.karnataka.gov.in ವೆಬ್‌ಸೈಟ್‌ನ್ನು ಅಥವಾ ನಿಗಮದ ಸಹಾಯವಾಣಿ ಸಂಖ್ಯೆ: 080-22374848 ಮತ್ತು 7899899039 ಅಥವಾ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಕಲಬುರಗಿ-585105 ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ: 08472-278635ಗೆ ಸಂಪರ್ಕಿಸಲು ಕೋರಲಾಗಿದೆ.

## ಮಹಾಶಿವರಾತ್ರಿ ಹಾಗೂ ಶ್ರೀಶೈಲಂನಲ್ಲಿ ಶ್ರೀ ಮಲ್ಲಿಕಾರ್ಜುನ ದೇವರ ರಥೋತ್ಸವ:

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

2026ನೇ ಸಾಲಿನ ಮಹಾಶಿವರಾತ್ರಿ ಹಾಗೂ ಶ್ರೀ. ಶ್ರೀಶೈಲ ಮಲ್ಲಿಕಾರ್ಜುನ ದೇವರ ರಥೋತ್ಸವ ನಿಮಿತ್ತ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ತಾಲ್ಲೂಕು/ ಜಿಲ್ಲಾ ಕೇಂದ್ರಗಳಿಂದ ಬೆಂಗಳೂರು, ಶ್ರೀಶೈಲಂ ಮತ್ತು ಇತರೆ ಪ್ರಮುಖ ಸ್ಥಳಗಳಿಗೆ ಒಟ್ಟು 450 ಕ್ಕೂ ಹೆಚ್ಚುವರಿ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು,

# ಗ್ಯಾರಂಟಿ ಉತ್ಸವ ಕಾರ್ಯಾಗಾರ: ಗುತ್ತಿ



• **ಮಲ್ಲಮ್ಮ ನುಡಿ ವಾರ್ತೆ ಕುಕನೂರ:**

ಇದೇ ತಿಂಗಳು 17ನೇಯ ದಿನಾಂಕದಂದು ಕೊಪ್ಪಳ ನಗರದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಗ್ಯಾರಂಟಿ ಉತ್ಸವ ಹಾಗೂ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಪಂಚ ಗ್ಯಾರಂಟಿಗಳ ಅನುಷ್ಠಾನ ಸಮಿತಿ ಕುಕನೂರು ತಾಲೂಕಾಧ್ಯಕ್ಷ ಸಂಗಮೇಶ ಗುತ್ತಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕುಕನೂರು ತಾಲೂಕ ಪಂಚಾಯಿತಿ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನ ಸಭೆ ಹಾಗೂ ಗ್ಯಾರಂಟಿ

ಯೋಜನೆಗಳ ಕಾರ್ಯಗಾರ -ಗ್ಯಾರಂಟಿ ಉತ್ಸವದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಸಂಗಮೇಶ ಗುತ್ತಿ ಮಾತನಾಡುತ್ತಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ರಾಜ್ಯಾಧ್ಯಕ್ಷ ರೇವಣ್ಣನವರ

ಅಧ್ಯಕ್ಷತೆಯಲ್ಲಿ ಫೆಬ್ರವರಿ 17ರಂದು ಕೊಪ್ಪಳ ನಗರದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಉತ್ಸವ ಮತ್ತು ಕಾರ್ಯಕ್ರಮವನ್ನು ಆಯೋಜಿಸಿದ್ದು ಈ ಉತ್ಸವದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲು ಅಧಿಕಾರಿಗಳು ಸಿಬ್ಬಂದಿಗಳನ್ನು ನಿಯೋಜಿಸಲಾಗಿದ್ದು ಈ ಕಾರ್ಯಕ್ರಮದಲ್ಲಿ ಪಂಚ ಗ್ಯಾರೆಂಟಿಯ ಸದ್ಬಳಕೆ ಮಾಡಿಕೊಂಡು ಸಾಧನೆ ಮಾಡಿದ ಪ್ರತಿ ತಾಲೂಕಿನ ಪ್ರತಿ ಗ್ಯಾರಂಟಿ ಯೋಜನೆಯ 5 ಫಲಾನುಭವಿಗಳನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ತಿಳಿಸಿದರು.

ನಂತರ ತಾಲೂಕಿನಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಆಗಿರುವ ಅಭಿವೃದ್ಧಿಯ ಕುರಿತು ಆಯಾ ಇಲಾಖೆಯ ಅಧಿಕಾರಿಗಳು ಸ್ಪಷ್ಟನೆಯನ್ನು ನೀಡುತ್ತಾ ಸಮಿತಿ ಸದಸ್ಯರ ಪ್ರಶ್ನೆಗಳಿಗೆ ಉತ್ತರಿಸಿದ್ದರು.

ಈ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಖಾಸಿಂಸಾಬ್ ತಳಕಲ್, ಜಿಲ್ಲಾ ಸಮಿತಿ ಸದಸ್ಯ ಮಲ್ಲಿಕಾರ್ಜುನ ಜಕ್ಕಲಿ ಯಲಬುರ್ಗಾ ತಾಲೂಕ ಅಧ್ಯಕ್ಷ ಸುಧೀರ್ ಕೂರ್ಲಹಳ್ಳಿ, ಕುಕನೂರು ತಾಲೂಕ ಸಮಿತಿಯ ಸದಸ್ಯರು, ಕುಕನೂರು ಹಾಗೂ ಯಲಬುರ್ಗಾ

ತಾಲೂಕ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಂತೋಷ್ ಬಿರಾದರ ಹಾಗೂ ನೀಲಪ್ರಭ ಬಬಲಾದಿ ಹಾಗೂ ತಾಲೂಕ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಪ್ರಾಣಿ ಕಲ್ಯಾಣ ಮತ್ತು ಪಶುಸಂಗೋಪನೆಗೆ ಸಮಗ್ರ ಯೋಜನೆ ಅಗತ್ಯ: ಜಿಲ್ಲಾಧಿಕಾರಿ ಸುರೇಶ್ ಇಟ್ನಾಳ

**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :**



ಪ್ರಾಣಿ ಕಲ್ಯಾಣ ಮತ್ತು ಪಶುಸಂಗೋಪನೆಗೆ ಸಮಗ್ರ ಯೋಜನೆ ಅಗತ್ಯವಾಗಿದೆ ಎಂದು ಕೊಪ್ಪಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪ್ರಾಣಿ ದಯಾ ಸಂಘದ ಅಧ್ಯಕ್ಷರಾದ ಡಾ. ಸುರೇಶ್ ಬಿ. ಇಟ್ನಾಳ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಕರ್ನಾಟಕ ಪ್ರಾಣಿ ಕಲ್ಯಾಣ ಮಂಡಳಿ ಬೆಂಗಳೂರು, ಜಿಲ್ಲಾ ಪ್ರಾಣಿ ದಯಾ ಸಂಘ, ಕೊಪ್ಪಳ ಹಾಗೂ ಹ್ಯೂಮೇನ್ ವರ್ಲ್ಡ್ ಫಾರ್ ಇಂಡಿಯಾ ಫೌಂಡೇಶನ್ ರವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ "ಪಶುಸಂಗೋಪನೆ ಹಾಗೂ ಪ್ರಾಣಿ ಕಲ್ಯಾಣ ಮಾಸಾಚರಣೆ" ಅಂಗವಾಗಿ ವಿಭಾಗ ಮಟ್ಟದ ಒಂದು ದಿನದ ತಾಂತ್ರಿಕ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಪ್ರಾಣಿ ಕಲ್ಯಾಣವು ಕೇವಲ ಪ್ರಾಣಿಗಳ ರಕ್ಷಣೆಗಷ್ಟೇ ಸೀಮಿತವಲ್ಲ, ಅದು ಸಾರ್ವಜನಿಕ ಆರೋಗ್ಯ, ಪರಿಸರ ಸಂರಕ್ಷಣೆ ಮತ್ತು ಗ್ರಾಮೀಣ ಆರ್ಥಿಕತೆಯೊಂದಿಗೆ ನೇರವಾಗಿ ಸಂಬಂಧಿಸಿದೆ. ಪ್ರಾಣಿಗಳ ಮೇಲೆ ಹಿಂಸೆ ತಡೆಯುವುದು ಹಾಗೂ ಅವುಗಳಿಗೆ ಸೂಕ್ತ ಆಶ್ರಯ, ಆಹಾರ ಮತ್ತು ಚಿಕಿತ್ಸೆಯನ್ನು ಒದಗಿಸುವುದು ನಮ್ಮ ಸಮಾಜದ ಜವಾಬ್ದಾರಿಯಾಗಿದೆ. ಜಿಲ್ಲೆಯಲ್ಲಿ ಬೀದಿ ನಾಯಿಗಳ ಜನಸಂಖ್ಯೆ ನಿಯಂತ್ರಣ, ನಿಯಮಿತ ಲಸಿಕಾ ಕಾರ್ಯಕ್ರಮ, ರೇಬೀಸ್ ತಡೆ ಹಾಗೂ ಪಶು ವೈದ್ಯಕೀಯ ಶಿಬಿರಗಳನ್ನು ಸಮನ್ವಯದೊಂದಿಗೆ ನಡೆಸುವ ಅಗತ್ಯವಿದೆ ಎಂದರು.

ಕಪಪಮಿವಿವಿ ಬೀದರ ಪಶುವೈದ್ಯಕೀಯ ಮಹಾವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಡಾ. ವಿವೇಕ ಕಸರಳಿಕರ ಅವರು ತಾಂತ್ರಿಕ ಉಪನ್ಯಾಸ ನೀಡಿ ಮಾತನಾಡಿ, ಪಶುಗಳ ಉತ್ತಮ ಪೋಷಣೆ ಮತ್ತು ಸ್ವಚ್ಛ ಪರಿಸರವು ಉತ್ಪಾದಕತೆ ಹೆಚ್ಚಿಸುವಲ್ಲಿ ಪ್ರಮುಖ ಅಂಶಗಳಾಗಿವೆ ಎಂದು ತಿಳಿಸುತ್ತಾ, ಪ್ರಾಣಿ ಕಲ್ಯಾಣ ಸಂಸ್ಥೆಗಳು ಎಡಬ್ಲ್ಯೂಬಿಐ (ಂಘಃಖ) ನಲ್ಲಿ ಲಭ್ಯವಿರುವ ದಾಖಲೆಗಳ ಪ್ರಕಾರ 3000 ರಿಂದ 4000 ಎಡಬ್ಲ್ಯೂಬಿಐ. ಗಳು, 1500 ಗೋಶಾಲೆಗಳು (ಗೋ ಆಶ್ರಯಗಳು), 400 ಎನ್.ಜಿ.ಓ.ಗಳು ನೋಂದಣಿ ಮಾಡಲಾಗಿದೆ. ಪ್ರಾಣಿ ಹಿಂಸೆ ತಡೆ ಕಾಯ್ದೆಗಳ ಪರಿಣಾಮಕಾರಿ ಜಾರಿಗೆ ಸಂಬಂಧಿಸಿದಂತೆ ಎಲ್ಲಾ ಇಲಾಖೆಗಳು ಸಮಗ್ರವಾಗಿ ಕಾರ್ಯನಿರ್ವಹಿಸಬೇಕು. ಪ್ರಾಣಿ ದಯಾ ಸಂಘಗಳ ಪಾತ್ರ ಮಹತ್ವದ್ದಾಗಿದ್ದು, ಸಾರ್ವಜನಿಕ ಸಹಭಾಗಿತ್ವದ ಮೂಲಕವೇ ದೀರ್ಘಕಾಲೀನ ಫಲಿತಾಂಶ ಸಾಧಿಸಬಹುದು ಎಂದು ಹೇಳಿದರು.

ಈ ಕಾರ್ಯಗಾರದಲ್ಲಿ ಪ್ರಾಣಿ ಕಲ್ಯಾಣ ಮತ್ತು ಪಶುಸಂಗೋಪನೆಗೆ ಸಂಬಂಧಿಸಿದಂತೆ ವಿವಿಧ ಸಲಹೆಗಳು ಹಾಗೂ ಶಿಫಾರಸುಗಳನ್ನು ರೂಪಿಸಲಾಗಿದ್ದು, ಸಂಬಂಧಿತ ಇಲಾಖೆಗಳು ಅವುಗಳನ್ನು ಜಾರಿಗೆ ತರಲು ಕ್ರಮ ಕೈಗೊಳ್ಳುವ ನಿರ್ಧಾರ ಕೈಗೊಳ್ಳಲಾಗುವುದು. ಈ ತಾಂತ್ರಿಕ ಕಾರ್ಯಗಾರವು ಪ್ರಾಣಿ ಕಲ್ಯಾಣ, ಸಾರ್ವಜನಿಕ ಜಾಗೃತಿ ಹಾಗೂ ಪಶುಸಂಗೋಪನೆ ಕ್ಷೇತ್ರದಲ್ಲಿ ಸಮಗ್ರ ಅರಿವು ಮೂಡಿಸುವ ಮಹತ್ವದ ವೇದಿಕೆಯಾಗಿದೆ ಎಂದರು.

ಮುಂದುವರೆದು ಮಾತನಾಡಿ, ಪ್ರಾಣಿ ಕಲ್ಯಾಣದ ಅಂತರಾಷ್ಟ್ರೀಯ ಮಾನದಂಡಗಳು, ಪಶು ಆರೋಗ್ಯ ನಿರ್ವಹಣೆಯ ವೈಜ್ಞಾನಿಕ ವಿಧಾನಗಳು ಹಾಗೂ ಪ್ರಾಣಿ ಹಿಂಸೆ ತಡೆ ಕಾಯ್ದೆಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದರು. ಹಾಗೂ ರೋಗಗಳ ಮುಂಚಿತ ಪತ್ತೆ ಮತ್ತು ಲಸಿಕಾ ಕಾರ್ಯಕ್ರಮಗಳ ಮಹತ್ವವನ್ನು ಉದಾಹರಣೆಗಳೊಂದಿಗೆ ವಿವರಿಸಿದರು.

ರಾಯಚೂರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ (ರಾಜ್ಯವಲಯ) ಜಂಟಿನಿರ್ದೇಶಕ ಡಾ. ರಮೇಶ ದೊಡ್ಡಮನಿ ಅವರು ಕಾರ್ಯಾಗಾರದ ಅಧ್ಯಕ್ಷತೆವಹಿಸಿ ಮಾತನಾಡಿ, ಪ್ರಾಣಿ ಕಲ್ಯಾಣ ಮತ್ತು ಪಶುಸಂಗೋಪನೆಯಲ್ಲಿ ಕರ್ನಾಟಕದ 31 ಜಿಲ್ಲೆಗಳಲ್ಲಿ ಕೊಪ್ಪಳವು ನಂಬರ್ 1 ಜಿಲ್ಲೆಯಾಗಿದೆ. ಹಾಗಾಗಿ ವಿಭಾಗ ಮಟ್ಟದ ಒಂದು ದಿನದ ತಾಂತ್ರಿಕ ಕಾರ್ಯಾಗಾರ ಕೊಪ್ಪಳ ಜಿಲ್ಲೆಯಿಂದಲೆ ಪ್ರಾರಂಭಿಸಲಾಗಿದೆ.

ಜನವರಿ 14 ರಿಂದ ಫೆಬ್ರುವರಿ 13 ರವರರೆಗೆ ಪಶುಸಂಗೋಪನೆ ಮತ್ತು ಪ್ರಾಣಿ ಕಲ್ಯಾಣ ಮಾಸಾಚರಣೆ ಮಾಡಬೇಕೆಂಬ ಕರ್ನಾಟಕ ಪ್ರಾಣಿ ಕಲ್ಯಾಣ ಮಂಡಳಿಯವರ ನಿರ್ದೇಶನದ ಮೂಲಕ ಹಮ್ಮಿಕೊಳ್ಳಲಾಗುತ್ತಿದ್ದು, ಪಂಶುಸಂಗೋಪನೆಯಲ್ಲಿ ಆಧುನಿಕರಣದ ಮಹತ್ವದ ಕುರಿತು ರೈತರಿಗೆ ಅರಿವು ಮೂಡಿಸುವ ಮುಖ್ಯ ಉದ್ದೇಶದಿಂದ ಸಂಬಂಧಿಸಿದ ಎಲ್ಲಾ ಪಶುವೈದ್ಯಾಧಿಕಾರಿಗಳಿಗೆ ಈ ಕಾರ್ಯಾಗಾರದಲ್ಲಿ ತರಬೇತಿ ನೀಡಲಾಗುತ್ತಿದೆ. ಇದರ ಸದುಪಯೋಗ ಪಡೆದುಕೊಂಡು ಪಶುವೈದ್ಯಾಧಿಕಾರಿಗಳಿಗೆ ತಮ್ಮ ವ್ಯಾಪ್ತಿಯ ಗ್ರಾಮೀಣ ಭಾಗದ ರೈತರಿಗೆ ಮಾಹಿತಿ ತಲುಪಿಸಲು ಶ್ರಮೀಸಬೇಕು ಎಂದು ಹೇಳಿದರು.

ಪ್ರಶಂಸಾ ಪತ್ರ ವಿತರಣೆ: ಬೀದಿ ನಾಯಿಗಳ ನಿಯಂತ್ರಣದ ಕುರಿತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸೂಚನೆಯಂತೆ ಕಾರ್ಯನಿರ್ವಹಿಸಿ ಶೇ. 100 ರಷ್ಟು ಪ್ರಗತಿ ಸಾಧಿಸಿರುವುದಕ್ಕಾಗಿ ಯಲಬುರ್ಗಾ ಮತ್ತು ಕುಕನೂರು ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ನಾಗೇಶ ಹಾಗೂ ಕಾರಟಗಿ ಪುರಸಭೆಯ ಮುಖ್ಯಾಧಿಕಾರಿ ಸಾಬಣ್ಣ ಕಟ್ಟೇಕಾರ ಅವರಿಗೆ ಕಾರ್ಯಾಗಾರದಲ್ಲಿ ಪ್ರಶಂಸಾ ಪತ್ರ ವಿತರಣೆ ಮಾಡಲಾಯಿತು.

ಸನ್ಮಾನ: ಪಶುಸಂಗೋಪನೆ ಹಾಗೂ ಪ್ರಾಣಿ ಕಲ್ಯಾಣ ಮಾಸಾಚರಣೆ ಅಂಗವಾಗಿ ತಾಂತ್ರಿಕ ತರಬೇತಿ ನೀಡಿದ ಆಹ್ವಾನಿತ ವಿಷಯ ತಜ್ಞರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಕೊಪ್ಪಳ ಉಪ ಅರಣ್ಯ ಸಂರಕ್ಷಣಾಧಿಕಾರಿ ಎನ್.ಕೆ. ನಿರ್ಮಲಾ, ಶಿವಮೊಗ್ಗ ಪಶುವೈದ್ಯಕೀಯ ಮಹಾವಿದ್ಯಾಲಯ ಔಷಧ ಶಾಸ್ತ್ರ ಹಾಗೂ ವಿಷ ಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಎನ್.ಬಿ. ಶ್ರೀಧರ ಹಾಗೂ ಹ್ಯೂಮೇನ್ ವರ್ಲ್ಡ್ ಫಾರ್ ಇಂಡಿಯಾ ಫೌಂಡೇಶನ್ ಹಿರಿಯ ತಜ್ಞರಾದ ರಮೇಶ ಭಜಂತ್ರಿ, ಕೊಪ್ಪಳ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ ಹಾಗೂ ಕೊಪ್ಪಳ ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ. ಶರಣಬಸಪ್ಪ ರೋಣ ಸೇರಿದಂತೆ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳ ಪಶು ಉಪನಿರ್ದೇಶಕರು, ಮುಖ್ಯ ಪಶುವೈದ್ಯಾಧಿಕಾರಿಗಳು ಮತ್ತು ಸ್ಥಳೀಯ ಸಂಸ್ಥೆಗಳ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಪಿಂಜಾರ್ ಸಮುದಾಯದ ನೋವಿಗೆ ಸ್ಪಂದಿಸದ ರಾಜಕಾರಣಿಗಳು: ರಫಿ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ, :**

ಮುಸ್ಲಿಂ ಸಮಾಜದ ಉಪ ಜಾತಿ ಪಿಂಜಾರ್ ಸಮುದಾಯವನ್ನು ರಾಜಕಾರಣಿಗಳು,ಪಕ್ಷಗಳು, ಎಲೆಕ್ಷನ್ ಹಾಗೂ ತಮಗೆ ಬೇಕಾದಾಗ ಕೆಲಸ ಮಾಡಿಸಿ ಕೊಂಡು ದೂರ ಇಡುತ್ತಾರೆ, ಬಳ್ಳಾರಿ ಜಿಲ್ಲೆಯಲ್ಲಿ ಪಿಂಜಾರ್ ಸಮುದಾಯ ಹೆಚ್ಚು ಇರುವ ತೆಕ್ಕಲಕೋಟೆ, ಎಮ್ಮಿಗನೂರು, ಕುರುಗೋಡು, ದರೂರ್, ಹಚ್ಚೊಳ್ಳಿ, ರೂಪನಗುಡಿ ಸುತ್ತ ಮುತ್ತ ಹಳ್ಳಿಗಳು, ಬಳ್ಳಾರಿ ನಗರದ ಹುಸೇನ್ ನಗರ, ಬಳ್ಳಾರಪ್ಪ ಕಾಲೋನಿ ಸಮೀಪ ಇರುವ ಗುಂತ್ಕಲ್ ಗುಡಿಸಲಿ, ಬಂಡಿಹಟ್ಟಿ, ಪಿಂಜರ್ ಓಣಿ ಅಲ್ಲದೆ ಪಿಂಜಾರ್ ಸುಮುದಾಯದ ಜನತೆ ಇರುವ ನಗರ ಸುತ್ತ ಮುತ್ತ ವಾರ್ಡನ ಸಮಸ್ಯೆಗಳ ಬಗ್ಗೆ ಜನ ಪ್ರತಿನಿಧಿಗಳ ಬಳಿ ಯತ್ತರ ಕೇಳಿ ಹೇಳಿ ಬೇಸತ್ತಿದೆ ಎಂದು ಅಖಿಲ ಕರ್ನಾಟಕ ಜಮಾತ್ ಎ ಮನ್ಸೂರಿ ಪಿಂಜರ್ ಸಮುದಾಯದ ಜಿಲ್ಲಾ ಅಧ್ಯಕ್ಷ ಬಿ.ಎಂ. ರಫಿ ಅವರು ಹೇಳಿದ್ದಾರೆ.



ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು. ಪಿಂಜಾರ್ ಅಶ್ರು ಖಾನದ 103 ಎಕರೆ ಸ್ಥಳದ ಬಗ್ಗೆ ಇನ್ನು ನಮ್ಮ ಸಮುದಾಯಕ್ಕೆ ಬಹಳ ವರ್ಷ ಗಳಿಂದ ಹಿನ್ನಡೆ ಆಗುತ್ತ ಇದೆ, ಇದುವರೆಗೂ ಯಾವ ಪಕ್ಷ ಪಿಂಜರ್ ಸಮುದಾಯದ ಹಿರಿಯರಿಗೆ, ಯುವಕರಿಗೆ ಸರ್ಕಾರದ ಪರವಾಗಿ ಜನರ ಸೇವೆ ಮಾಡಲು. ನಮ್ಮ ಸಮುದಾಯ ಸಮಸ್ಯೆ ಆಲಿಸಲು ಸ್ಥಾನಮಾನ ಕೊಟ್ಟಿಲ್ಲ, ನಮ್ಮ ಕೆಲಸಗಳ ಬಗ್ಗೆ ಶಾಸಕರುಗಳು ಗಮನ ಕೊಡುತ್ತಾ ಇಲ್ಲ ಎಂದಿದ್ದಾರೆ.

# 11 ಜನ ಅಪರಾಧಿಗಳಿಗೆ 3 ವರ್ಷ ಜೈಲು – ದಂಡ ವಿಧಿಸಲಾಗಿದೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಯಾದಗಿರಿ ಜಿಲ್ಲೆಯ ಸೈದಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 2014ರಲ್ಲಿ ನಡೆದ ಪ್ರಕರಣವೊಂದರಲ್ಲಿ 11 ಜನ ಅಪರಾಧಿಗಳಿಗೆ ಯಾದಗಿರಿ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಈರಣ್ಣ ಅವರು ಮೂರು ವರ್ಷ ಜೈಲು ಶಿಕ್ಷೆ ಮತ್ತು 177 ಸಾವಿರ ವಂಡ ವಿಧಿಸಿದ್ದಾರೆ. ಪ್ರಕರಣದ ಹಿನ್ನೆಲೆ: ಜಿಲ್ಲೆಯ ನೀಲಹಳ್ಳಿ ಗ್ರಾಮದ ಹನುಮ ಮಂದಿರದ ಎದುರಿನ ಸ್ಥಳದಲ್ಲಿ ಶರಣಯ್ಯತ್ರಿಪೂರಾಂತಮ್ ಸ್ವಾಮಿ ಅವರು ತಮ್ಮ ಪುತ್ರನಿಗೆ ಹೋಟೆಲ್ ನಿರ್ಮಿಸಿಕೊಟ್ಟಿದ್ದರು ಮತ್ತು ಅವರ ಸಹೋದರ ಬನ್ನಯ್ಯ ಸ್ವಾಮಿ ಕಿರಾಣಿ ಅಂಗಡಿ ನಡೆಸುತ್ತಿದ್ದರು. ಆದರೆ, ಈ ಸ್ಥಳ ಹನುಮಾನ ಮಂದಿರದ್ದಾಗಿದ್ದು, ಕೂಡಲೇ ಖಾಲಿ ಮಾಡುವಂತೆ ಈ ಅಪರಾಧಿಗಳು ತಕರಾರು ಮಾಡುತ್ತಿದ್ದರು. ಶಾಂತುರೆಡ್ಡಿ ಪೊಲೀಸ್ ಪಾಟೀಲ, 2014ರ ಮಾರ್ಚ್ 18ರಂದು ರಾತ್ರಿ ಶಂಕ್ರೆಪ್ಪಗೌಡ ಪೊಲೀಸ್ ಪಾಟೀಲ, ಬಸನಗೌಡ ಗಿರಿಯಪ್ಪನೋರ, ಚೆನ್ನರೆಡ್ಡಿ ಮುನಗಲೋರ, ರೆಡ್ಡೆಪ್ಪ ಶೇಕಸಿಂದಿ, ಬನ್ನಪ್ಪ ಶೇಕಸಿಂದಿ, ಹಣಮಂತ ಬಾಗಲಿ, ಹುಸೇನಪ್ಪ ಬಾಗಲಿ, ಮಲ್ಲಪ್ಪ ಉಪ್ಪಾರ, ಮಾರಾಯ ಉಪ್ಪಾರ, ಭೀಮಣ್ಣ ಹೂಗಾರ ಅವರು ಹೋಟೆಲ್ ಮತ್ತು ಕಿರಾಣಿ ಅಂಗಡಿಗೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದ ಕುರಿತು ಸೈದಾಪುರ ಠಾಣೆಯಲ್ಲಿ ವಿವಿಧ ಕಾಯ್ದೆಗಳಡಿ ಪ್ರಕರಣ ದಾಖಲಾಗಿತ್ತು. ಅದರಂತೆ ಹನ್ನೊಂದು ಜನರ ವಿರುದ್ಧ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲಾಗಿದೆ. ಸರ್ಕಾರದ ಪರವಾಗಿ ಪ್ರಧಾನ ಸರ್ಕಾರಿ ಅಭಿಯೋಜಕ ಗುರುಲಿಂಗಪ್ಪ ಶ್ರೀಮಂತ ತೇಲಿವಾದ ಮಂಡಿಸಿದ್ದರು.

# ಹಂಪಿ ಉತ್ಸವ ಕವಿಗೋಷ್ಠಿಗೆ ಸುವರ್ಣ ರಾಥೋಡ್ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಗಿರಿನಗರ ಯಾದಗಿರಿಯ ಗಜಲ್ ಕವಯತ್ರಿ, ಲೇಖಕಿ, ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕಿ ಪುರಸ್ಕಾರ ಪಡೆದಿರುವ ಸಾಹಿತ್ತಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ಗುರುತಿಸಿಕೊಂಡಿರುವ ಶ್ರೀಮತಿ ಸುವರ್ಣ ವೆಂಕಟೇಶ್ ಚವ್ಹಾಣ ರವರು ಭಾರತೀಯರ ಸ್ವಾಭಿಮಾನದ ಕನ್ನಡದ ಹೆಮ್ಮೆಯ ವಿಜಯನಗರದ ವೈಭವದ ಸ್ಮರಣಾರ್ಥವಾಗಿ ಆಚರಿಸಲ್ಪಡುವ 2026 ಹಂಪಿ ಉತ್ಸವದ ಕವಿಗೋಷ್ಠಿಗೆ ಆಯ್ಕೆಯಾಗಿದ್ದಾರೆ. ಶ್ರೀಮತಿ ಸುವರ್ಣ ವೆಂಕಟೇಶ ಚವ್ಹಾಣ ರವರ ಆಯ್ಕೆಗೆ ಕವಯತ್ರಿಯರಾದ ಶ್ರೀಮತಿ ನೀಲಮ್ಮ ಬಿ ಮಲ್ಲೆ, ಶ್ರೀಮತಿ ಜೋತಿ ತಡಿಬಿಡಿ, ಶ್ರೀಮತಿ ಭಾಗ್ಯ ಧೊರೆ, ಶ್ರೀಮತಿ ಮೀನಾಕ್ಷಿ ಹೊಸಮನಿ ಹಾಗೂ ರಾಜ್ಯ ಮಹಿಳಾ ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷೇ ಶ್ರೀಮತಿ ಚಂದ್ರಕಲಾ ನಗನೂರ್, ಶಾಲಾ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಹಾಗೂ ಯಾದಗಿರಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ಜಿಲ್ಲೆಯ ಸಾಹಿತಿಗಳು ಹಾಗೂ ಯುವ ಕವಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

# ಸ್ಲೀಪರ್ ಅಮೋಘವರ್ಷ ದರ ನಿಗದಿಪಡಿಸಿದೆ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಶಹಾಪೂರ ಘಟಕ ಶಹಾಪೂರದಿಂದ ಬೆಂಗಳೂರು ಮಾರ್ಗದ ನಾನ್ ಎಸಿ ಸ್ಲೀಪರ್ (ಅಮೋಘವರ್ಷ) ಸಾರಿಗೆಯ ಪ್ರೋತ್ಸಾಹದಾಯಕ ಪ್ರಯಾಣ ದರವನ್ನು ನಿಗದಿಪಡಿಸಲಾಗಿದೆ ಎಂದು ಯಾದಗಿರಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಜಿ.ಬಿ ಮಂಜುನಾಥ ಅವರು ತಿಳಿಸಿದ್ದಾರೆ. ಶಹಾಪೂರ ಘಟಕದ ಶಹಾಪೂರದಿಂದ ಬೆಂಗಳೂರು ಮಾರ್ಗದ ನಾನ್ ಎಸಿ ಸ್ಲೀಪರ್ (ಅಮೋಘವರ್ಷ) ಸಾರಿಗೆಯ ಪ್ರಯಾಣ ದರವನ್ನು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಕಡಿಮೆ ಮಾಡಿ, ಪ್ರೋತ್ಸಾಹದಾಯಕ ಪ್ರಯಾಣ ದರವನ್ನು ನಿಗದಿಪಡಿಸಲಾಗಿರುತ್ತದೆ. ಈ ನಾನ್ ಎಸಿ ಸ್ಲೀಪರ್ (ಅಮೋಘವರ್ಷ) ಸಾರಿಗೆಯ ಶಹಾಪೂರ ದಿಂದ ಸಂಜೆ 6.15 ಗಂಟೆಗೆ ನಿರ್ಗಮಿಸಿ, ನಂತರ ಬೆಳಿಗ್ಗೆ 6.15 ಗಂಟೆಗೆ ಬೆಂಗಳೂರನ್ನು ಆಗಮಿಸಲಿದೆ. ಅದೇ ದಿನ ಸಂಜೆ 7.45 ಗಂಟೆಗೆ ಬೆಂಗಳೂರಿದಿಂದ ನಿರ್ಗಮಿಸಿ ಶಹಾಪೂರ ಬೆಳಿಗ್ಗೆ 6.30 ಗಂಟೆಗೆ ಆಗಮಿಸಲಿದೆ. ಯಾದಗಿರಿ ವಿಭಾಗ ಶಹಾಪೂರ ಘಟಕದಿಂದ ಶಹಾಪೂರದಿಂದ ಬೆಂಗಳೂರು ವರೆಗೆ ಸಾರಿಗೆ ನಾನ್‌ಎಸಿ ಸ್ಲೀಪರ್ (ಅಮೋಘವರ್ಷ) ಮೊದಲಿನ ಪ್ರಯಾಣ ದರ 983 ರೂ.ಗಳ ಪರಿಷ್ಕರಿಸಿದ ಪ್ರಯಾಣದರ 850 ರೂ.ಗಳ ದರ ನಿಗದಿಪಡಿಸಿದೆ. ಈ ಸಾರಿಗೆ ರಿಜರ್ವೇಶನ್ ಮಾಡಿಸಲು ಶಹಾಪೂರ ಬಸ್ ನಿಲ್ದಾಣ ಸೇರಿದಂತೆ ವಿವಿಧ ಬಸ್ ನಿಲ್ದಾಣಗಳ ರಿಜರ್ವೇಶನ್ ಕೌಂಟರ್‌ಗಳಲ್ಲಿ ವೆಬ್‌ಸೈಟ್ ಇಡಿಣಥಿ. ಏಟಿ ನಲ್ಲಿ ಹಾಗೂ ಸಂಸ್ಥೆಯ ಅಂಗಿಕೃತ ವಿವಿಧ ಏಜಂಟ್‌ರುಗಳಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಶಹಾಪೂರ ಘಟಕ ವ್ಯವಸ್ಥಾಪಕರು ದೂ.ಸಂ.7760992464, ಸುರಪುರ ಘಟಕ ವ್ಯವಸ್ಥಾಪಕರು ದೂ.ಸಂ.7760992463, ಶಹಾಪೂರ ಬಸ್ ನಿಲ್ದಾಣಾಧಿಕಾರಿ ದೂ.ಸಂ.7760992458, ವಿಭಾಗೀಯ ಕಛೇರಿ ದೂ.ಸಂ.6366423882, ವಿಭಾಗೀಯ ಸಂಚಲನಾಧಿಕಾರಿ ದೂ.ಸಂ.7760992452ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಜನರ ಸ್ವಾವಲಂಬಿ ಬದುಕಿಗೆ ಸಹಕಾರ ಕ್ಷೇತ್ರ ವರದಾನ: ನಾರಾಯಣ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ, ಬೆಂಗಳೂರು ಹಾಗೂ ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿ ಯಾದಗಿರಿ. ಹಾಗೂ ಸಹಕಾರ ಇಲಾಖೆ ಯಾದಗಿರಿ ಹಾಗೂ ನೀರು ಬಳಕೆದಾರರ ಸಹಕಾರ ಸಂಘ ನಿ, ದೋರನಹಳ್ಳಿ. ಇವರುಗಳ ಸಂಯುಕ್ತಾಶ್ರಯದಲ್ಲಿ ಕ್ಲಸ್ಟರ ಕಾರ್ಯಕ್ರಮವನ್ನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ. ದೋರನಹಳ್ಳಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಯಿತು ಜ್ಯೋತಿ ಬೆಳಗುವುದರ ಮುಖಾಂತರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಸಹಕಾರ ಸಂಘಗಳ ಬದಲಾದ ಕಾಯ್ದೆ ಕಾನೂನು ತಿಳಿದು ತಮ್ಮ ಸಂಘದ ವ್ಯಾಪ್ತಿಗೆ ಬರುವ ಜನಗಳ ನಡುವೆ ಸಮನ್ವಯ ಸಾಧಿಸಿ ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಇದ–ರಿಂದ ಸಂಘದ ಏಳಿಗೆ ಸಮಾಜದ ಏಳಿಗೆಯ ಜೊತೆ ಜೊತೆಗೆ ತಮ್ಮ ಅಭಿವೃದ್ಧಿಯನ್ನು ಸಾಧಿಸಬಹುದು ಎಂದು ಎಂ ನಾರಾಯಣ ಉಪಾಧ್ಯಕ್ಷರು ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿ,ಯಾದಗಿರಿ ಇವರು ಉದ್ಘಾಟಿಸಿ ಮಾತನಾಡಿದರು ಎಲ್ಲ ರೈತರನ್ನು ಸದಸ್ಯರನ್ನಾಗಿ ಮಾಡುವುದು ಮತ್ತು ಕೊನೆಯ ಭಾಗದ ರೈತರಿಗೂ ನೀರನ್ನು ತಲುಪಿಸುವುದು ಮತ್ತು ನೀರನ್ನು ಮಿತವಾಗಿ ಬಳಸುವುದು ಸವಳು ಮತ್ತು ಜವಳು ಆಗದಂತೆ ನೀರನ್ನು ಮಿತವಾಗಿ ಬಳಸಬೇಕು ನಿಗಮದ ಜೊತೆ ಒಪ್ಪಂದ ಮಾಡಿಕೊಂಡು ಅಗತ್ಯವಾಗಿ ಕೆಲಸವನ್ನು ನಿರ್ವಹಿಸುವುದು ನೀರಿನ ಬೇಡಿಕೆಯಂತೆ ಕರ ವಸೂಲಿ ಮಾಡಿ ನಿಗಮಕ್ಕೆ ಕಟ್ಟುವುದು ಹಾಗೂ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಕುರಿತು ಶಿವಶಂಕರ ಹಿರಿಯ ನಿರೀಕ್ಷಕರು ಕೃಷ್ಣ ಕಾಡ ಬಿ,ಗುಡಿ ಇವರು ವಿಶೇಷವಾಗಿ ಉಪನ್ಯಾಸ ನೀಡಿದರು ನೀರು ನಿರ್ವಹಣೆ ಕುರಿತು ಮತ್ತು ರೈತರ ಸಹಭಾಗಿತ್ವ ಕುರಿತು ಮಹೇಶ್ ಶಿವಾಜಿ ಅಧೀಕ್ಷಕರು ಕೃಷ್ಣ ಕಾಡ ಬಿ.ಗುಡಿ ಇವರು ಸಹ ವಿಶೇಷವಾಗಿ ಉಪನ್ಯಾಸ ನೀಡಿದರು ವೆಂಕಟೇಶ್ ಕಸಟ್ಟಿ ನಿರ್ದೇಶಕರು ನೀರು ಬಳಕೆದಾರ ಸಹಕಾರ ಸಂಘ ನಿ,ದೋರನಹಳ್ಳಿ ಇವರು ಅಧ್ಯಕ್ಷತೆಯನ್ನು ವಹಿಸಿದ್ದರು. ಮಹಾಮಂಡಳ ಮತ್ತು ಒಕ್ಕೂಟದ ಕಾರ್ಯಕ್ರಮಗಳ ಕುರಿತು ಪ್ರಾಸ್ತವಿಕ ನುಡಿ ಹಾಗೂ ಕಾರ್ಯಕ್ರಮದ ನಿರೂಪಣೆಯನ್ನು ಶ್ರೀಮತಿ ಸುಜಾತ ಮಠ ಜಿಲ್ಲಾ ಸಹಕಾರ ಶಿಕ್ಷಕರು ಇವರು ನೆರವೇರಿಸಿದರು ಒಕ್ಕೂಟದ ದ್ವಿತೀಯ ದರ್ಜೆ ಸಹಾಯಕರಾದ ಸಿದ್ದನಗೌಡ ಚಾಮನಾಳ ಇವರು ಸರ್ವರನ್ನು ಸ್ವಾಗತಿಸಿದರು ಕೊನೆಯಲ್ಲಿ ಪರಸುರಾಮ ದೋರನಹಳ್ಳಿ ಸಂಘದ ಕಾರ್ಯದರ್ಶಿ ವಂದಿಸಿದರು ಹಾಗೂ ದೋರನಹಳ್ಳಿಯ ಎಲ್ಲಾ ನೀರು ಬಳಕೆದಾರರ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕರು ಕಾರ್ಯದರ್ಶಿಗಳು,ಸದಸ್ಯರು, ಹಾಗೂ ದೋರನಹಳ್ಳಿಯ ಪತ್ರಿಕೆ ಮಾಧ್ಯಮದವರ ಕೂಡ ಉಪಸ್ಥಿತರಿದ್ದರು.

# ಪ್ರತಿಜ್ಞೆ ಮಾಡಿ ಕುಷ್ಠರೋಗ ಮುಕ್ತ ಮಾಡಲು ಎಲ್ಲರೂ ಸಹಕರಿಸಿ: ಚವ್ಹಾಣ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ತಾರತಮ್ಯವನ್ನು ಕೊನೆಗೊಳಿಸುವುದು, ಘನತೆಯನ್ನು ಕಾಪಾಡುವುದು ಎಂಬ ಪ್ರತಿಜ್ಞೆ ಮಾಡಿ ಕುಷ್ಠರೋಗ ಮುಕ್ತ ಮಾಡಲು ಎಲ್ಲರೂ ಸಹಕರಿಸಬೇಕು ಎಂದು ಯಾದಗಿರಿ ನಗರಸಭೆ ಪೌರಾಯುಕ್ತರಾದ ಉಮೇಶ ಚವ್ಹಾಣ ಅವರು ಹೇಳಿದರು. ಯಾದಗಿರಿ ನಗರದ ನಗರಸಭೆ ಸಭಾಂಗಣದಲ್ಲಿ ಫೆ.12 ರಂದು ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ತಾರತಮ್ಯವನ್ನು ಕೊನೆಗೊಳಿಸುವುದು, ಘನತೆಯನ್ನು ಕಾಪಾಡುವುದು" ಎಂಬ ಪ್ರತಿಜ್ಞೆ ಮಾಡಿ ಕುಷ್ಠರೋಗ ಮುಕ್ತ ಮಾಡಲು ಎಲ್ಲರೂ ಕೈ ಜೋಡಿಸಬೇಕು. ಪಾದಗಳಲ್ಲಿ ಶೀತ, ಬಿಸಿ, ಸಂವೇದನೆ ನಷ್ಟವಾಗಿರುವುದು, ಕೈಗಳಲ್ಲಿ ವಸ್ತುಗಳನ್ನು ಹಿಡಿಯಲು ಹಾಗೂ ಪಾದರಕ್ಷೆ ತೊಡುವಲ್ಲಿ ಬಲಹೀನತೆ ಇವುಗಳೆಲ್ಲವೂ ಕುಷ್ಠರೋಗದ ಲಕ್ಷಣಗಳಾಗಿವೆ ಎಂದರು. ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ.ಸಂಜೀವಕುಮಾರ ರಾಯಚೂರಕರ್ ಅವರು ಮಾತನಾಡಿ, ಕುಷ್ಠರೋಗ ಲಕ್ಷಣಗಳಾದ ಚರ್ಮದ ಮೇಲಿನ ಯಾವುದೇ ತಿಳಿ–ಬಿಳಿ ತಾಮ್ರ ಬಣ್ಣದ ಮಚ್ಚೆ, ದಪ್ಪವಾದ ಎಣ್ಣೆ ಪಸರಿಸಿದಂತಹ ಹೊಳೆಯುವ ಚರ್ಮ, ದೇಹದ ಮೇಲಿನ ಘಂಟುಗಳು, ಕಣ್ಣಿನ ರೆಪ್ಪೆಗಳನ್ನು ಮುಚ್ಚುವಲ್ಲಿ ತೊಂದರೆ, ಕೈ ಅಥವಾ ಕಾಲುಗಳಲ್ಲಿನ ಬಹುದಿನದ ಗಾಯ, ಕೈ ಅಥವಾ ಕಾಲುಗಳಲ್ಲಿ ಬೆರಳು ಮಡಿಚಿಕೊಂಡಿರುವುದು, ನಡೆಯುವಾಗ ಕಾಲು ಎಳೆಯುವುದು, ಕೈ ಅಥವಾ ಕಾಲುಗಳಲ್ಲಿ ಜುಮ್ಮೆನುಸುವಿಕೆ ಮತ್ತು ಮರುಗಟ್ಟುವಿಕೆ, ಅಂಗೈ ಅಥವಾ ಪಾದಗಳಲ್ಲಿ ಶೀತ, ಬಿಸಿ, ಸಂವೇದನೆ ನಷ್ಟವಾಗಿರುವುದು, ಕೈಗಳಲ್ಲಿ ವಸ್ತುಗಳನ್ನು ಹಿಡಿಯಲು ಹಾಗೂ ಪಾದರಕ್ಷೆ ತೊಡುವಲ್ಲಿ ಬಲಹೀನತೆ ಇವುಗಳೆಲ್ಲವೂ ಕುಷ್ಠರೋಗದ ಲಕ್ಷಣಗಳಾಗಿವೆ. ಇಂತಹ ಲಕ್ಷಣಗಳು ಕಂಡು ಬಂದರೆ ಸರ್ಕಾರಿ ಆಸ್ಪತ್ರೆಗೆ ತೆರಳಿ ವೈದ್ಯರಿಗೆ ತೋರಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ.ಹಣಮಂತರಡ್ಡಿ, ಡಾ.ವಿನುತಾ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಹಿಪಾಲರಡ್ಡಿ, ಆರೋಗ್ಯ ಇಲಾಖೆಯ ಅಧಿಕಾರಿ ಭಾಗಪ್ಪ ಕೋರೆ, ಬಸ್ಸಯ್ಯ ಗುತ್ತೇದಾರ, ನಾಗರಾಜ, ಸಿಬ್ಬಂದಿಗಳು, ನಗರಸಭೆ ಅಧಿಕಾರಿಗಳು, ಶಿವಶರಣಯ್ಯ ಗದ್ದಿಗಿ ನಿರೂಪಿಸಿದರು ಸಿಬ್ಬಂದಿ ಜಗದೀಶ ಕುರುಕುಂದಿ ವಂದನಾರ್ಪಣೆ ನೆರವೇರಿಸಿದರು.

# ಕಂದಳ್ಳಿಯ ಭೀಮಾ ಬ್ರಿಡ್ಜ್ ಸೇತುವೆಯ ರಸ್ತೆ ದುರಸ್ತಿಗೆ: ಅಬ್ದುಲ್ ಚಿಗಾನೂರ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಕಳೆದ ಸುಮಾರು ದಿನಗಳ ಹಿಂದೆ ಬಾರಿ ಸುರಿದ ಮಳೆ ಮತ್ತು ಅತಿವೃಷ್ಟಿಯಿಂದ ತಾಲೂಕಿನ ಕಂದಳ್ಳಿ ಗ್ರಾಮದಿಂದ ಸೈದಾಪುರ ಹಾಗೂ ರಾಯಚೂರಿಗೆ ಸಂಪರ್ಕ ಕಲ್ಪಿಸುವ ಭೀಮಾ ಬ್ರಿಡ್ಜ್ ಸೇತುವೆಯ ಎರಡೂ ಭಾಗದ ರಸ್ತೆಯು ಸಂಪೂರ್ಣ ಹಾಳಾಗಿದ್ದು ಅದನ್ನು ಕೂಡಲೆ ದುರಸ್ತಿಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ಅಬ್ದುಲ್ ಚಿಗಾನೂರ ಆಗ್ರಹಿಸಿದ್ದಾರೆ.

ಕಂದಳ್ಳಿಯ ಭೀಮಾ ಬ್ರಿಜ್ ಸೇತುವೆ ಕೆಟ್ಟು ಸುಮಾರು ನಾಲ್ಕು ತಿಂಗಳು ಕಳೆದರೂ ಕೂಡಾ ಇನ್ನುವರೆಗೂ ಸೇತುವೆಯನ್ನು ದುರಸ್ತಿಗೊಳಿಸದೆ ಜನಪ್ರತಿನಿಧಿಗಳು ಜಿಲ್ಲಾಡಳಿತ ನಿರ್ಲಕ್ಷ್ಯ ವಹಿಸುತ್ತಿರುವುದು ಸರಿಯಲ್ಲ ಎಂದು ಅವರು ಆರೋಪಿಸಿದ್ದಾರೆ.

ಈ ಭಾಗದ ವಿದ್ಯಾರ್ಥಿಗಳಿಗೂ ರೈತರು ಕೂಲಿ ಕಾರ್ಮಿಕರಿಗೆ ಸೈದಾಪುರ ಹಾಗೂ ರಾಯಚೂರು ಇನ್ನಿತರ ಪಟ್ಟಣಗಳಿಗೆ ಶೈಕ್ಷಣಿಕ ಮತ್ತು ವ್ಯವಹಾರಿಕ ಆಸ್ಪತ್ರೆ ಕೆಲಸ ಕಾರ್ಯಗಳಿಗೆ ಓಡಾಡಲು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿದೆ ದೊಡ್ಡದಾದ ಕಂದಕಗಳು ಇರುವ ಕಾರಣ ಆಟೋ ಇನ್ನಿತರ ಸಣ್ಣ ವಾಹನಗಳು ಓಡಾಡಲು ಹರಸಾಹಸ ಪಡುವಂತಾಗಿದೆ ಅಧಿಕಾರಿಗಳು ನಾಮಕೆವಾಸ್ತೆ ಎಂಬಂತೆ ಮರಮ ಹಾಕಿ ಅಲ್ಲಿಗೆ ಕೈಬಿಟ್ಟಿದ್ದಾರೆ ಎಂದು ಹಿರೆನೂರು ಗ್ರಾಮಸ್ಥ ಶಿವರಾಜ್ ಗುತ್ತೇದಾರ್ ಕಿಡಿ ಕಾರಿದ್ದಾರೆ.

ಈ ರಸ್ತೆಯ ಮೇಲೆ ದೊಡ್ಡ ಗಾತ್ರದ ವಾಹನ ಬಸ್ಸುಗಳು ಓಡಾಡುತ್ತಿಲ್ಲ ಕಾರಣ ರಸ್ತೆ ಕೆಟ್ಟು ಸುಮಾರು ತಿಂಗಳುಗಳೆ ಕಳೆದಿವೆ ವಡಗೇರಾ ಸೈದಾಪುರ ರಾಯಚೂರು ಮಾರ್ಗದ ಸರ್ಕಾರಿ ಬಸ್ಸುಗಳ ಓಡಾಟ ಇಲ್ಲದ ಕಾರಣ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದೆ ಆದ್ದರಿಂದ ಕೂಡಲೇ ಸೇತುವೆಯ ಎರಡೂ ಭಾಗದ ರಸ್ತೆ ನಿರ್ಮಾಣಕ್ಕೆ ಸರ್ಕಾರ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಒಂದು ವೇಳೆ ವಿಳಂಬ ಮಾಡಿದ್ದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ವಡಗೇರಾ ತಾಲೂಕು ಘಟಕದ ವತಿಯಿಂದ ಉಗ್ರ ಹೋರಾಟ ಮಾಡುವುದಾಗಿ ತಾಲೂಕ ಅಧ್ಯಕ್ಷ ಅಬ್ದುಲ್ ಚಿಗಾನೂರ, ಹಣಮಂತರಾಯ ತೇಕರಾಳ,ಸಿದ್ದು ತುಮಕೂರ,ಮಲ್ಲು ಅಂಗಡಿ ಜಡಿ, ಮಹಮ್ಮದ್ ಖಾಲಿ,ಪಿಡ್ಡಪ್ಪ ನಾಯಕ್ ಗೊಂದೇನೂರ,ಸತೀಶ್ ಜಡಿ, ಬಸವರಾಜ್, ಸುರೇಶ್ ಹಾಗೂ ಇನ್ನಿತರರು ಎಚ್ಚರಿಸಿದ್ದಾರೆ

## ಸಂಭ್ರಮ, ಸಾಂಸ್ಕೃತಿಕ ಇತಿಹಾಸ ಮರುಕಳಿಸಿದ ವೈಭವ ಮೆರವಣಿಗೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಐತಿಹಾಸಿಕ ಇತಿಹಾಸವಿರುವ ವಿಜಯನಗರ ಸಾಮ್ರಾಜ್ಯದ ಹೆಬ್ಬಾಗಿಲು ಕಂಪ್ಲಿ ಪಟ್ಟಣದಲ್ಲಿ ಎರಡು ದಿನಗಳ ಕಾಲ ಆಯೋಜಿಸಿರುವ ಕಂಪ್ಲಿ ಉತ್ಸವದ ಮೊದಲ ದಿನ ಬುಧವಾರ ಕಲಾತಂಡಗಳ ಮೆರವಣಿಗೆ ಜನಮನ ಸೆಳೆಯಿತು. ಕಂಪ್ಲಿ ಉತ್ಸವದ ಅಂಗವಾಗಿ ಕಂಪ್ಲಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳನ್ನೊಳಗೊಂಡ ಸಂಭ್ರಮದ ಭವ್ಯ ಮೆರವಣಿಗೆ ಅದ್ದೂ–ರಿಯಾಗಿ ನಡೆಯಿತು. ಕಲಾ ವಾದ್ಯಗಳ ವೈಭವದ ಮೆರವಣಿಗೆಯು ಪಟ್ಟಣದ ಸಾಂಸ್ಕೃತಿಕ ಕಲಾ ವೈಭವವನ್ನು ಮರುಕಳಿಸಿತು. ಕಂಪ್ಲಿ ಉತ್ಸವದ ಅಂಗವಾಗಿ ಏರ್ಪಡಿಸಿದ್ದ ಕಲಾ ತಂಡಗಳ ಮೆರವಣಿಗೆಗೆ ಕಂಪ್ಲಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳಿ ನಿಯಮಿತ (ಕಾವೇರಿ ಹ್ಯಾಂಡ್‌ಲೂಮ್ಸ್) ದ ಅಧ್ಯಕ್ಷರೂ ಆಗಿರುವ ಜೆ.ಎನ್. ಗಣೇಶ್ ಅವರು ಪಟ್ಟಣದ ಕೋಟೆ ಪ್ರದೇಶದಲ್ಲಿ ಕಂಪಿಲರಾಯ, ಗಂಡುಗಲಿ ಕುಮಾರರಾಮ ಉತ್ಸವ ಮೂರ್ತಿಗೆ ಪುಷ್ಪಾರ್ಚನೆ ಮಾಡುವುದರ ಮೂಲಕ ಚಾಲನೆ ನೀಡಿದರು.*ಅದ್ದೂರಿಯಾಗಿ ನಡೆದ ಮೆರವಣಿಗೆ:ವಿವಿಧ ಸಾಂಸ್ಕೃತಿಕ ಕಲಾ ತಂಡದೊಂದಿಗೆ ಮೆರವಣಿಗೆಯು ಪಟ್ಟಣದ ಕೋಟೆ ಪ್ರದೇಶದಿಂದ ಆರಂಭವಾಗಿ ಡಾ.ರಾಜ್ ಕುಮಾರ್ ರಸ್ತೆಯ ಮೂಲಕ ಮಾರ್ಕೆಟ್ ಮಾರ್ಗವಾಗಿ ಮಸೀದಿ ಮೂಲಕ ಅಂಬೇಡ್ಕರ್ ವೃತ್ತದಿಂದ ಸೋಮೇಶ್ವರ ದೇವಸ್ಥಾನದವರೆಗೆ ಸಾಗಿತು.



ಬಸವಕಲ್ಯಾಣ :– ಇಲ್ಲಿನ ಹಿರಿಯ ಸಂಗೀತ ಕಲಾವಿದರಾದ ರಾಜಕುಮಾರ ಹೂಗಾರ ಅವರನ್ನು ಹೂಗಾರ ಸಮಾಜದ ಜಿಲ್ಲಾಧ್ಯಕ್ಷರಾದ ಕಾರಣ ಅವರನ್ನು ನೇಮಕ ಪತ್ರ ಹುಬ್ಬಳ್ಳಿಯಲ್ಲಿ ನಡೆದ ರಾಜ್ಯಮಟ್ಟದ ಹೂಗಾರ ಸಮಾಜದ ಕಾರ್ಯಕಾರಿಣಿ ಸಭೆಯಲ್ಲಿ ನೀಡುತ್ತಿರುವ ದೃಶ್ಯ ಕಾಣಬಹುದು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)


ದಿನಾಂಕ:12/02/2026

## ಸಾರ್ವಜನಿಕ ಸೂಚನೆ

ಈ ಸಾರ್ವಜನಿಕ ಪ್ರಕಟಣೆ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ,ಬೀದರ ಪಟ್ಟಣದ ಕೆ.ಎ.ಬಿ ಕಾಲೊನಿಯಲ್ಲಿರುವ Plot No.34 its CMC No.8–8–11/11 total measuring 2400Sqfts located in Sy.No.10 situated at KHB Colony, Bidar ವನ್ನು ಶ್ರೀ **ರವೀಂದ್ರ ತಂದೆ ಕಾಶಿನಾಥ ರಾಸೂರೆ** ಸಾ.ಹುಡಕೋ ಕಾಲೋನಿ, ಬೀದರರವರ ಹೆಸರಿನ ಅನಧಿಕೃತ ಹಕ್ಕು ಬದಲಾವಣೆ ಮಾಡಿಕೊಂಡಿರುತ್ತಾರೆ ಅದರ ಮ್ಯೂಟೇಶನ ಸಂ; Mutation File No.BMC/MUTN/B/58/93-94) ಅಗಿರುತ್ತದೆ.

ಸದರಿ ಮೇಲ್ಕಂಡ ನಿವೇಶನವು ಜಂಟಿ ಕುಟುಂಬದ ಆಸ್ತಿಯಾಗಿದ್ದು ಈ ಆಸ್ತಿಯು ದಿವಂಗತ ನಮ್ಮ ತಂದೆಯವರಾದ ಕಾಶಿನಾಥ ರಾಸೂರೆ ಅವರು ಖರಿದಿ ಮಾಡಿದ್ದು ಈ ಆಸ್ತಿಗೆ ಕಾಶಿನಾಥ ರಾಸೂರೆ ರವರ ಕುಟುಂಬದ ನಾಲ್ವರು ಮಕ್ಕಳು ವಾರಸ್ಸು ಹಕ್ಕುದಾರರು ಆಗಿರುತ್ತಾರೆ. ಸದರಿ ಆಸ್ತಿಯ ಹಂಚಿಕೆ ಬಗ್ಗೆ ನ್ಯಾಯಾಲಯದಲ್ಲಿ ದಾವೆ ನಡೆಯುತ್ತಿದೆ. ಕಾರಣ ಮೇಲ್ಕಂಡ ಆಸ್ತಿಯ ಖರಿದಿ ಮಾಡುವುದು ಈ ಆಸ್ತಿಯ ಮೇಲೆ ಯಾವುದೇ ಹಣದ ವ್ಯವಹಾರ ಅಥವಾ ಇನ್ನಾವುದೇ ವ್ಯವಹಾರ ಮಾಡಬಾರದೆಂದು ತಮ್ಮಲ್ಲಿ ಸೂಚಿಸಲಾಗುತ್ತಿದೆ.
ಸೂಚನೆದಾರರು

**ಪ್ರಭುಲಿಂಗತಂದೆಕಾಶಿನಾಥ ರಾಸೂರೆ**
**ಸಾ.ಬಸವಕಲ್ಯಾಣ ಜಿ.ಬೀದರ**
**ಮೋ:9019243789**



## CHANGE OF NAME

I, **ANUPKUMAR S/O VASANTRAO** Old name resident of R/o; At. Bheemnagar Tq, Basavakalyan. Dist. Bidar. have changed my new name as **ANUP KUMAR S/O VASANT RAO** sworn before affidavit Rathod Vijykumar Advocate & Notary Basavakalyan. Date 11/02/2026



## CITATION

IN THE COURT OF THE III ADDL. J.M.F.C AT KALABURAGI Cri. Misc.No. 111/2026

**MADARSHA S/O DHOLAPPA**
Age: 46 years, Occ; coolie
R/o H.No. 9/882/19 Filter bed road, Shahabazar thanda, Near Shivalala temple, Tq. & Dist. Kalaburagi
**...Petitioner..**

**…V/s…**

The Registration of Birth & Deaths
The Mahanagar palike Kalaburagi
**...Respondent..**

**PETITION U/SEC. 13(3) OF BIRTH & DEATH REGISTRATION ACT**

Whereas, the petitioners herein have filed the above petition for Issue of directions to the respondent office for issuing the death certificate that, the mother of the deponent deceased mother by name i.e, Late. Tangamma W/o Dhulappa, was expired on: 28-11-2005 in natural death at in the above said address.

Therefore, the persons interested in the matter relating to issue of directions for issue death certificate of Late. Tangamma W/o Dhulappa, was expired on: 28-11-2005, are hereby directed to appear in person or pleader duly instructed on:18/03/2026 at 11:00am failing which the matter will be heard and decided on merits

***Given under my hand and seal of the court on this the 11th day of Feb 2026 at Kalaburagi.***

**By order of court**
**Chief Ministerial officer,**
**III Addl JMFC Court, Kalaburagi.**

**Kusumakar S M**
**Advocate for petitioners**


ಬಸವಕಲ್ಯಾಣ :– :ಇತ್ತೀಚೆಗೆ ಹಿಂದಿ ಪ್ರೌಢ ಶಾಲಾ ಶಿಕ್ಷಕರ ಸಂಘದ ತಾಲೂಕಾ ಅಧ್ಯಕ್ಷರಾಗಿ ಆಯ್ಕೆಯಾದ ನಾಗಪ್ಪ ನಿಣ್ಣೆ ಅವರನ್ನು ಮಾಜಿ ವಿಧಾನ ಪರಿಷತ್ ಸದ್ಯಸರಾದ ವಿಜಯ್ ಸಿಂಗ್ ಸನ್ಮಾನಿಸಿ ಗೌರವಸಿದರು. ಈ ಸಂಧರ್ಭದಲ್ಲಿ ಸಂಘದ ಮಾಜಿ ಅಧ್ಯಕ್ಷರಾದ ಜಗದೀಶ್ ಶುಕ್ಲಾ. ರಾಜ್ಯ ಉಪನ್ಯಾಸಕರ ಸಂಘದ ಕಾರ್ಯದರ್ಶಿಗಳಾದ ನರಸಿಂಗರೆಡ್ಡಿ ಗದಲೇಗಾಂವ. ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ವಿಜಯಕುಮಾರ ಮಾನೆ. ಉದ್ಧವರಾವ್ ಉಪಾಸೆ. ಅನೀಲ್ ಕಾಂಬ್ಳೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.
(ಮಲ್ಲಮ್ಮ ನುಡಿ ಚಿತ್ರ)




## ಸೆಲ್ ಡೀಡ್ ದಾಖಲಾತಿ ಕಳೆದಿವೆ

ನಾನು ರಮೇಶ್ ತಂದೆ ನಾರಾಯಣ ತ್ರಿಮುಖೆ ಸಾ. ಘೋರಗಲ್ಲಿ ಬಸವಕಲ್ಯಾಣ, ಜಿಲ್ಲೆ ಬೀದರ ನಿವಾಸಿಯಾಗಿದ್ದು, ಹೌಸ್ ಬೇರಿಂಗ್ ನಂ.11–22 ಮತ್ತು ಹೊಸ ಸಂಖ್ಯೆ 11–24 ಶಂಕರರಾವ ತಂದೆ ಮಾಧವರಾವ ತ್ರಮುಖೆ ಸಾ. ಘೋರಗಲ್ಲಿ ಬಸವಕಲ್ಯಾಣ ರವರ ಹೆಸರಿಗೆ ಇದ್ದ ಶೆಲ್ ಡೀಡ್ ದಿನಾಂಕ; 27/09/2005 ರಂದು ಖರಿದಿ ಆಗಿರುತ್ತದೆ. ದಿನಾಂಕ 11/02/2026 ರಂದು 17;00 ಗಂಟೆಗೆ ಬಸವಕಲ್ಯಾಣ ನಗರದಲ್ಲಿರುವ ಅಂಬೇಡ್ಕರ ವೃತ್ತದಲ್ಲಿ ಹೋಗುವಾಗ ಅಕಸ್ಮೀಕವಾಗಿ ಕಳೆದುಹೋಗಿರುತ್ತವೆ. ಆದ್ದರಿಂದ ಸದರಿ ದಾಖಲಾತಿಗಲೂ ಯಾರಿಗಾದರೂ ಸಿಕ್ಕರೆ ಈ ವಿಳಾಸಕ್ಕೆ ತಲುಪಿಸಲು ವಿನಂತ್ತಿ.

**ವಿಳಾಸ: ರಮೇಶ ತಂದೆ ನಾರಾಯಣ ತ್ರಿಮುಖೆ**
**ಸಾ; ಸದಾನಂದ ಕಾಲೋನಿ, ಬಸವಕಲ್ಯಾಣ. ತಾಲೂಕ ಬಸವಕಲ್ಯಾಣ.**
**ಜಿಲ್ಲೆ: ಬೀದರ. ಮೋ: 9590167777**

# ಕೇಂದ್ರ ಸರ್ಕಾರ ರೈತ ವಿರೋಧಿ ನೀತಿಗಳ ವಿರುದ್ಧ ಹೋರಾಟ

ಬಳ್ಳಾರಿ. ಕೇಂದ್ರ ಕಾರ್ಮಿಕ ಸಂಘಟನೆಗಳು ಕರೆ ನೀಡಿರುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರದ ಅಂಗವಾಗಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯಿಂದ (ಎಆಖಿಗ) ಬಳ್ಳಾರಿಯಲ್ಲಿ ಬೃಹತ್ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿತ್ತು. ರೈತ ಸಂಘಟನೆಗಳನ್ನು ಒಳಗೊಂಡ ಸಂಯುಕ್ತ ಹೋರಾಟ ಕರ್ನಾಟಕವು ಮುಷ್ಕರಕ್ಕೆ ಬೆಂಬಲ ನೀಡಿ, ಮೆರವಣಿಗೆಯಲ್ಲಿ ಪಾಲ್ಗೊಂಡಿತ್ತು. ನಗರದ ನಾರಾಯಣ್ ರಾವ್ ಉದ್ಯಾನವನದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಮೆರವಣಿಗೆಯಲ್ಲಿ ಸಾಗಿದ ಕಾರ್ಮಿಕರು, ರೈತರು ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ಲೇಬರ್ ಕೋಡ್ , ವಿಬಿಜಿರಾಮ್ ಜಿ ಇನ್ನಿತರ ಕಾರ್ಮಿಕ–ರೈತ ವಿರೋಧಿ ನೀತಿಗಳ ವಿರುದ್ಧ ಧಿಕ್ಕಾರ ಕೂಗಿದರು. ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ ಸಭೆಯನ್ನು ಸಂಘಟಿಸಲಾಗಿತ್ತು. ಈ ಸಂದರ್ಭದಲ್ಲಿ ಎಆಖಿಗ ಹಾಗೂ ಸಂಯುಕ್ತ ಹೋರಾಟ ಕರ್ನಾಟಕದ ಮುಖಂಡರು ಮಾತನಾಡಿದರು.




"ಲೇಬರ್ ಕೋಡ್‌ಗಳಿಂದ ದುಡಿಯುವವರ ಬದುಕು ಬಂಗಾರವಾಗುತ್ತದೆಯೆಂದು ಮಾಧ್ಯಮಗಳಲ್ಲಿ ತುತ್ತೂರಿ ಊದಲಾಗುತ್ತಿದೆ. ಮುಷ್ಕರದ ಹಕ್ಕನ್ನು ಕಸಿದುಕೊಳ್ಳುವ, ಕಾರ್ಮಿಕರ ಸಾಮೂಹಿಕ ಚೌಕಾಸಿ ಹಕ್ಕನ್ನು ಮೊಟಕುಗೊಳಿಸುವ, ನಿಗದಿತ ಅವಧಿಗೆ ಉದ್ಯೋಗದ ಮೂಲಕ ಖಾಯಂ ಸ್ವರೂಪದ ಕೆಲಸಗಳಿಗೆ ತಿಲಾಂಜಲಿ ನೀಡುತ್ತಿರುವುದು, ದಿನಕ್ಕೆ 12 ತಾಸು ಕೆಲಸದ ಅವಧಿ ಹೆಚ್ಚಿಸಿರುವುದು ಮತ್ತು ಮಹಿಳಾ ಉದ್ಯೋಗಿಗಳಿಗೆ ರಾತ್ರಿ ಪಾಳೀಯಲ್ಲೂ ದುಡಿಸಿಕೊಳ್ಳಲು ಅವಕಾಶ ನೀಡುವ ಈ ಲೇಬರ್ ಕೋಡ್ ಗಳು ಕಾರ್ಮಿಕರ ಆರೋಗ್ಯ, ಭದ್ರತೆ ಬಗ್ಗೆ ಕಿಂಚಿತ್ತೂ ಕಾಳಜಿ ತೋರದೆ, ತ್ಯಾಗ–ಬಲಿದಾನಗಳ ಮೂಲಕ ಗಳಿಸಿಕೊಂಡ ಹಕ್ಕುಗಳನ್ನು ಕಿತ್ತುಕೊಳ್ಳುತ್ತಿದೆ. ಒಟ್ಟಾರೆಯಾಗಿ ಬಂಡವಾಳಶಾಹಿಗಳ ವ್ಯಾಪಾರ ಸುಗಮಗೊಳಿಸುವ ಉದ್ದೇಶದಿಂದ 29 ಕಾರ್ಮಿಕ ಕಾಯ್ದೆಗಳನ್ನು ತಿದ್ದುಪಡಿ ಮಾಡಿ ಗರಿಷ್ಠ ಲಾಭಗಳಿಸಲು ಅವಕಾಶ ಕಲ್ಪಿಸಿ ಮತ್ತಷ್ಟು ಕಾರ್ಮಿಕರನ್ನು ಶೋಷಿಸಲು ಲೇಬರ್ ಕೋಡ್‌ಗಳನ್ನು ಜಾರಿಗೊಳಿಸಲಾಗುತ್ತಿದೆ. ಹಿಂದಿನ ಕಾಂಗ್ರೆಸ್ ಸರ್ಕಾರವು ಕಾರ್ಮಿಕ ಕಾಯ್ದೆಗಳನ್ನು ತರ್ಕಬದ್ಧಗೊಳಿಸಬೇಕು ಎಂದು ತಿದ್ದುಪಡಿ ಮಾಡಲು ಉದ್ದೇಶಿಸಿತ್ತು. ಅದನ್ನೇ ಇಂದಿನ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಸಂಹಿತೀಕರಣದ ರೂಪದಲ್ಲಿ ಜಾರಿಗೊಳಿಸುತ್ತಿದೆ ಅಷ್ಟೇ! ಈ ನೀತಿಗಳು ಸ್ಪಷ್ಟವಾಗಿ ಬಂಡವಾಳಶಾಹಿ ವರ್ಗದ ನೀತಿಗಳೇ ಹೊರತು ಈ ಪಕ್ಷ, ಆ ಪಕ್ಷದ ನೀತಿಗಳಲ್ಲ. ಹಾಗಾಗಿ ಶೋಷಕ ಬಂಡವಾಳಶಾಹಿ ಪರ ನೀತಿಗಳ ವಿರುದ್ಧ ಬಲಿಷ್ಠ ಹೋರಾಟ ಕಟ್ಟಲು ಕಾರ್ಮಿಕರು ರೈತರು ಮುಂಬರಬೇಕು ಹಾಗೂ ರಾಜ್ಯ ಸರ್ಕಾರ ಲೇಬರ್ ಕೋಡ್ ಕರ್ನಾಟಕದಲ್ಲಿ ಜಾರಿಗೆ ತರಬಾರದೆಂದು ಆಗ್ರಹಿಸಲಾಯಿತು."

ಇದಲ್ಲದೆ "ಎಲ್ಲಾ ಸಾರ್ವಜನಿಕ ವಲಯದ ಉದ್ಯಮಗಳು ಮತ್ತು ಸಾರ್ವಜನಿಕ ಸೇವೆಗಳಾದ ರೈಲ್ವೆ, ಬಂದರು ಮತ್ತು ಹಡಗುಕಟ್ಟೆಗಳು, ಕಲ್ಲಿದ್ದಲು ಗಣಿಗಳು, ತೈಲ, ಉಕ್ಕು, ರಕ್ಷಣಾ, ರಸ್ತೆಮಾರ್ಗಗಳು, ವಿಮಾನ ನಿಲ್ದಾಣಗಳು, ಬ್ಯಾಂಕುಗಳು, ವಿಮೆ, ದೂರಸಂಪರ್ಕ, ಅಂಚೆ, ಪರಮಾಣು ಶಕ್ತಿ, ವಿದ್ಯುತ್ ಉತ್ಪಾದನೆ ಮತ್ತು ಪೂರೈಕೆ ಇತ್ಯಾದಿಗಳನ್ನು ಖಾಸಗೀಕರಿಸುತ್ತ ಭಾರತೀಯ ಮತ್ತು ವಿದೇಶಿ ಮೂಲದ ದೊಡ್ಡ ಕಾರ್ಪೊರೇಟ್ ಕಂಪನಿಗಳಿಗೆ ಕೇಂದ್ರ ಸರ್ಕಾರವು ಮಾರಾಟ ಮಾಡುವುದನ್ನು ಮುಂದುವರೆಸಿದೆ. ನರೇಗಾ ಯೋಜನೆಯನ್ನು ವಿಬಿ–ಜಿ–ರಾಮ್ ಎಂದು ಬದಲಿಸಿ ಉದ್ಯೋಗ ಖಾತ್ರಿಯ ಹಕ್ಕನ್ನೇ ಕಸಿದುಕೊಂಡು, ಹಳ್ಳಿಯ ಬಡಜನರ ಆಸರೆಯನ್ನು ಕಿತ್ತುಕೊಂಡಿದೆ. ವಿದ್ಯುತ್ ತಿದ್ದುಪಡಿ ಮಸೂದೆ–2025ನ್ನು ಕಾಯ್ದೆ ಮಾಡಿ, ವಿದ್ಯುತ್ ಸರಬರಾಜು ಖಾಸಗೀಕರಣಗೊಳಿಸಲು ಮುಂದಾಗಿದ್ದು, ಇದುವರೆಗೂ ರಕ್ಷಿಸಲ್ಪಟ್ಟಿದ್ದ ವಿಮಾ ಕಂಪನಿಗಳನ್ನು ಶೇ. 100 ರಷ್ಟು ವಿದೇಶಿ ಮತ್ತು ದೇಶಿಯ ವ್ಯಾಪಾರಿ ಮನೆತನಗಳಿಗೆ ತೆರೆದಿದೆ" ಎಂದರು

ಕೇಂದ್ರ ಸರ್ಕಾರದ ವಿವಿಧ ಸ್ಕೀಂಗಳಲ್ಲಿ ದುಡಿಯುವ ಕೋಟ್ಯಾಂತರ ಆಶಾ, ಅಂಗನವಾಡಿ, ಬಿಸಿಯೂಟ ಕಾರ್ಮಿಕರನ್ನು ಸರ್ಕಾರಿ ನೌಕರರ ಸ್ಥಾನಮಾನ ನೀಡದೇ, ಕನಿಷ್ಠ ವೇತನ ಮತ್ತು ಪಿಎಫ್, ಇಎಸ್‌ಐ, ನಿವೃತ್ತಿ ಪರಿಹಾರಗಳನ್ನು ಒದಗಿಸದೇ ಬಿಡಿಗಾಸಿನಲ್ಲಿ ದುಡಿಸಿಕೊಂಡು ಶೋಷಿಸಲಾಗುತ್ತಿದೆ. ಆದ್ದರಿಂದ ಕಾರ್ಮಿಕ ವರ್ಗದ ಮೇಲೆ ನಡೆಯುತ್ತಿರುವ ಈ ಘೋರ ದಾಳಿಯನ್ನು ಹಿಮ್ಮೆಟ್ಟಿಸಲು ಹಾಗೂ ದುಡಿಯುವ ಜನರ ಹಕ್ಕುಗಳನ್ನು ಉಳಿಸಲು ಐಕ್ಯ ಹೋರಾಟ ಬಲಪಡಿಸಲು ಕರೆ ನೀಡಲಾಯಿತು.

ಈ ಪ್ರತಿಭಟನೆಯಲ್ಲಿ ಎಐಯುಟಿ–ಯುಸಿ ದೇವದಾಸ್ ಅಧ್ಯಕ್ಷತೆ ವಹಿಸಿದ್ದರು, ಖ.ಸೋಮಶೇಖರ್ ಗೌಡ, ,. ಸಿಐಟಿಯು ರಾಜ್ಯ ಉಪಾಧ್ಯಕ್ಷರಾದ ಸತ್ಯ ಬಾಬು, ಎಐ–ಟಿಯುಸಿ ಜಿಲ್ಲಾ ಅಧ್ಯಕ್ಷರಾದ ಆದಿ ಮೂರ್ತಿ, ಅಖಿಲ ಭಾರತ ವಿಮಾ ನೌಕರರ ಸಂಘಟನೆಯ ಸೂರ್ಯನಾರಯಣ, ಬ್ಯಾಂಕ್ ನೌಕರರ ಸಂಘಟನೆಯ ಘನ ಮಲ್ಲಿಕಾರ್ಜುನ, ಸುರೇಶ್, ಗೀತ, ರೈತ ಸಂಘಟನೆಯ ಮುಖಂಡರಾದ ಯು.ಬಸವರಾಜ್ , ಗೋವಿಂದ್, ಮಾಧವ ರೆಡ್ಡಿ, ಸಂಗನಕಲ್ಲು ಕೃಷ್ಣಪ್ಪ, ಹನುಮಂತಪ್ಪ, ಎರಿಸ್ವಾಮಿ, ನಾಗರತ್ನ, ಕಟ್ಟಿಬಸಪ್ಪ, ಮಲ್ಲಮ್ಮ, ಚಂದ್ರಕುಮಾರಿ, ಜಗದೀಶ್ , ಸೇರಿದಂತೆ ಇತರರು ಭಾಗವಹಿಸಿದ್ದರು.

# ರಾಯಚೂರು: ಪ್ರಗತಿ ಪರಿಶೀಲನೆ ನಡೆಸಿದ ಪ್ರಾದೇಶಿಕ ಆಯುಕ್ತ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ರಾಯಚೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಗಳು ಆಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಫೆ.11ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ರಾಯಚೂರು ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನೆ ನಡೆಸಿದರು.

ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಈಗಿನ ಮಹಾನಗರ ಪಾಲಿಕೆಯ ಕಚೇರಿಯ ಕೋರ್ಟ ಹಾಲನಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಆಯುಕ್ತರು, ರಾಯಚೂರು ಸಿಟಿ ಜನತೆಗೆ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಸೇರಿದಂತೆ ಯಾವುದೇ ರೀತಿಯ ಮೂಲಭೂತ ಸೌಕರ್ಯ ಕಾರ್ಯವು ಇನ್ಮುಂದೆ ಸಹ ಅಚ್ಚುಕಟ್ಟಾಗಿ ನಡೆಯಬೇಕು ಎಂದು ಸೂಚನೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆಯಿಂದ ಸಿಟಿಯಲ್ಲಿ ಈಗ ನಡೆಯುತ್ತಿರುವ ಸ್ವಚ್ಛತಾ ಕಾರ್ಯಗಳು ಮತ್ತು ನಗರ ಸೌಂದರ್ಯೀಕರಣ ಕಾರ್ಯಗಳನ್ನು ಯಥಾವತ್ತು ಮುಂದುವರೆಸಬೇಕು. ಸುಗಮ ಸಂಚಾರಕ್ಕೆ ತೊಂದರೆಯಾಗದ ರೀತಿಯಲ್ಲಿ ಸಿಟಿಯಲ್ಲಿನ ಎಲ್ಲ ಕಡೆಗೆ ರಸ್ತೆ ಬದಿಗಳಲ್ಲಿ ಸಸಿಗಳನ್ನು ನೆಡುವ ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು. ರಾಯಚೂರು ಸಿಟಿಯಲ್ಲಿ ಒಟ್ಟು 35 ವಾರ್ಡಗಳಿದ್ದು, ಕೃಷ್ಣಾ ಮತ್ತು ತುಂಗಭದ್ರಾ ನದಿಗಳು ನಗರದಿಂದ 20 ರಿಂದ 30 ಕಿ.ಮೀ ದೂರದಲ್ಲಿವೆ. ಕೃಷ್ಣನದಿಯಿಂದ ಶೇ.80ರಷ್ಟು ಮತ್ತು ತುಂಗಭದ್ರಾ ನದಿಯಿಂದ ಶೇ.20 ಪ್ರಮಾಣದಷ್ಟು ನೀರು ಪಡೆಯಲಾಗುತ್ತಿದೆ. ಚಿಕ್ಕಸೂಗೂರನಲ್ಲಿನ ಕುಡಿಯುವ ನೀರು ಶುದ್ಧೀಕರಣ ಘಟಕ ಮತ್ತು ರಾಂಪೂರ ಬಳಿಯಲ್ಲಿನ ಕುಡಿಯುವ ನೀರು ಶುದ್ಧೀಕರಣ ಘಟಕದ ಮೂಲಕ ನದಿ ನೀರನ್ನು ಶುದ್ಧೀಕರಣಗೊಳಿಸಿ ನಗರಕ್ಕೆ ನೀರು ಪೂರೈಸಲಾಗುತ್ತಿದೆ.

ರಾಯಚೂರು ಸಿಟಿಯಲ್ಲಿ ಒಟ್ಟು 650 ಕಿ.ಮೀ ರಸ್ತೆ ಜಾಲದ ವ್ಯವಸ್ಥೆಯಿದೆ. ಇತ್ತೀಚಿನ ಒಳಚರಂಡಿ ಜಾಲದ ಉದ್ದ 300 ಕಿ.ಮೀ ಇರುತ್ತದೆ. 73,000 ಮನೆಗಳು ಇರುತ್ತವೆ. ಸಿಟಿಯಲ್ಲಿ ಇದುವರೆಗೆ 431 ಕಿ.ಮೀ ನಷ್ಟು ಒಳಚರಂಡಿ ಜಾಲದ ವ್ಯವಸ್ಥೆ ಇದ್ದು ಈ ಪೈಕಿ 300 ಕಿ.ಮೀ ಜಾಲ ಕಾರ್ಯನಿರ್ವಹಿಸುತ್ತಿದೆ ಎಂದು ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸಭೆಗೆ ವಿವರಿಸಿದರು. ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಗರವನ್ನು ಸೌಂದರ್ಯೀಕರಣಗೊಳಿಸಲು ಬೇಸಿಗೆ ಕಾಲದಲ್ಲಿ ತಾಪಮಾನವನ್ನು ನಿಯಂತ್ರಿಸಿ ಪರಿಸರದ ಸಮತೋಲನವನ್ನು ವಾಯು ಗುಣಮಟ್ಟವನ್ನು ಹೆಚ್ಚಿಸಲು ಹಾಗೂ ವಿಶೇಷವಾಗಿ ವಾಯುಮಾಲಿನ್ಯ ನಿಯಂತ್ರಿಸಿ ನಗರವನ್ನು ಪರಿಸರ ಸ್ನೇಹಿ ನಗರವನ್ನಾಗಿ ರೂಪಿಸಲು ಹೆಚ್ಚಿನ ಸಂಖ್ಯೆಯಲ್ಲಿ ಗಿಡಮರ ನೆಡುವುದು ಅವಶ್ಯವಿರುವ ಕಾರಣ 99.99 ಲಕ್ಷ ರೂ ವೆಚ್ಚದಲ್ಲಿ ಕಾಮಗಾರಿ ನಿರ್ವಹಿಸಲು ಅಂದಾಜು ಪತ್ರಿಕೆಯನ್ನು ಸಿದ್ಧಪಡಿಸಿದ್ದು ಆಡಳಿತಾತ್ಮಕ ಅನುಮೋದನೆ ಪಡೆದು ಕಾರ್ಯಗತಗೊಳಿಸಲಾಗುವುದು ಎಂದು ಇದೆ ವೇಳೆ ಪಾಲಿಕೆಯ ಆಯುಕ್ತರು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಶರಣಪ್ಪ ಸತ್ಯಂಪೇಟೆ, ಸಂತೋಷ ರಾಣಿ ಸೇರಿದಂತೆ ಪಾಲಿಕೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಮಹಾಶಿವರಾತ್ರಿ: ವಿವಿಧ ಧಾರ್ಮಿಕ ಕಾರ್ಯಕ್ರಮ

ಗೋಕರ್ಣ : ದಕ್ಷಿಣದ ಕಾಶಿಯೆಂದೇ ಪ್ರಖ್ಯಾತಿ ಹೊಂದಿರುವ ಶ್ರೀಕ್ಷೇತ್ರ ಗೋಕರ್ಣ ಈಗ ಮಹಾಶಿವರಾತ್ರಿಗೆ ಸಕಲ ಸಿದ್ಧತೆಗಳು ನಡೆಯುತ್ತಿದ್ದು, 9 ದಿನಗಳವರೆಗೆ ನಡೆಯುವ ಮಹಾಶಿವರಾತ್ರಿಗೆ ಮುಖ್ಯ ಅರ್ಚಕ ವೇ. ನಂಕರಾಜು ದತ್ತಾತ್ರೇಯ ಅಡಿ ಅವರ ನೇತೃತ್ವದಲ್ಲಿ ಉಪಾಧಿವಂತ ಅರ್ಚಕರು, ವೃಷಭರೋಹಣ ಮಾಡುವ ಮೂಲಕ ಚಾಲನೆ ನೀಡಿದರು. ಗಣೇಶ ಪೂಜೆಯೊಂದಿಗೆ ಧಾರ್ಮಿಕ ವಿಧಿ ವಿಧಾನಗಳು ನಡೆದವು.

ಹೀಗೆ ವಿವಿಧ ಧಾರ್ಮಿಕ ಕಾರ್ಯಗಳು ಪ್ರತಿದಿನ ನಡೆಯಲಿದ್ದು, ಫೆ.15 ರಂದು ಮಹಾಶಿವರಾತ್ರಿ ನಡೆಯಲಿದೆ. ರಾಜ್ಯದ ವಿವಿಧ ಭಾಗಗಳಿಂದ ಲಕ್ಷಾಂತರ ಭಕ್ತರು ಹರಿದು ಬರಲಿದ್ದಾರೆ. ಇನ್ನು ಹೊರ ರಾಜ್ಯದಿಂದಲು ಕೂಡ ಭಕ್ತರ ಸಂಖ್ಯೆ ಸಾಕಷ್ಟು ಹೆಚ್ಚಲಿದೆ. ಫೆ.18 ರಂದು ಮಹಾರಥೋತ್ಸವ ನಡೆಯಲಿದ್ದು, 19 ರಂದು ಅಂಕರಾರ್ಪಣೆಯೊಂದಿಗೆ ಮಹಾಶಿವರಾತ್ರಿಯು ಸಂಪನ್ನಗೊಳ್ಳಲಿದೆ. ಮಹಾಶಿವರಾತ್ರಿ : ಸಿಸಿ ಕ್ಯಾಮರಾ ಅಳವಡಿಕೆ ಪ್ರತಿವರ್ಷ ಲಕ್ಷಾಂತರ ಭಕ್ತರು ಮಹಾಶಿವರಾತ್ರಿಗೆ ಆಗಮಿಸುತ್ತಾರೆ. ಹೀಗಾಗಿ ಪ್ರತಿಯೊಂದು ಕಡೆಯಲ್ಲಿಯೂ ಪೊಲೀಸ್ ಬಂಧೋಬಸ್ತ್ ಅಗತ್ಯವಿದ್ದು ಈಗಾಗಲೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಗೋಕರ್ಣ ಪೊಲೀಸ್ ಠಾಣೆಯ ನಿರೀಕ್ಷಕ ಶ್ರೀಧರ ಎಸ್.ಆರ್ ಅವರ ನೇತೃತ್ವದಲ್ಲಿ ಬಂಧೋಬಸ್ತ್ ಕಾರ್ಯ ನಡೆಯುತ್ತಿದೆ.

# ರಂಗೋಲಿಯಿಂದ ಕಂಗೊಳಿಸಿದ ರಸ್ತೆಗಳು



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕಂಪ್ಲಿ ಉತ್ಸವ ಅಂಗವಾಗಿ ಕಂಪ್ಲಿ ಪಟ್ಟಣದಲ್ಲಿ ಹಬ್ಬದ ವಾತಾವರಣದಂತಿದೆ.

ಉತ್ಸವದ ಅಂಗವಾಗಿ ಬುಧವಾರ ಹಮ್ಮಿಕೊಂಡಿದ್ದ ರಂಗೋಲಿ ಸ್ಪರ್ಧೆಯಲ್ಲಿ ಪ್ರಮುಖ ರಸ್ತೆಗಳು ರಂಗೋಲಿಮಯವಾಗಿ ಕಾಣಿಸಿಕೊಂಡವು.

ರಂಗೋಲಿ ಸ್ಪರ್ಧೆಯಲ್ಲಿ ಯುವತಿಯರು ಭಾಗವಹಿಸಿ ರಂಗೋಲಿ ಹಾಕುವುದು, ವಿಶೇಷವಾಗಿ ಕಂಡುಬಂತು.

ಪಟ್ಟಣದ ನೀರಾವರಿ ಇಲಾಖೆ ಮುಂಭಾಗದ ರಸ್ತೆಯಿಂದ ಕಮ್ಮಾರಿ ಭವನದವರೆಗಿನ ಒಂದು ಕಡೆಯ ರಸ್ತೆಯಲ್ಲಿ ಮಹಿಳೆಯರ ರಂಗು ರಂಗಿನ 132 ರಂಗೋಲಿ ಚಿತ್ತಾರ ಬಿಡಿಸಿದರು.

ನಂತರದಲ್ಲಿ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಮಾಣಪತ್ರ ವಿತರಣೆ ಮಾಡಲಾಯಿತು.

# ಮಕ್ಕಳಿಗೆ ಸ್ಪರ್ಧಾತ್ಮಕ ಮನೋಭಾವದ ಜೊತೆಗೆ ಸಂಸ್ಕಾರದ ಶಿಕ್ಷಣ ಅಗತ್ಯ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**

ತಾಲೂಕಿನ ಬೂದಗುಂಪಾ ಗ್ರಾಮದ ಶ್ರೀ ಕರಿಯಮ್ಮ ದೇವಿ ಗ್ರಾಮೀಣಾವೃದ್ಧಿ ಶಿಕ್ಷಣ ಸಂಸ್ಥೆಯ ಡಾ. ರಾಧಾಕೃಷ್ಣನ್ ಪಬ್ಲಿಕ್ ಸ್ಕೂಲ್ 8ನೇ ವರ್ಷದ ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಪ್ರಾಂಶುಪಾಲರಾದ

ಮಲ್ಲಿಕಾರ್ಜುನ್ ಚೌಕಿಮಠ ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳನ್ನು ಮಕ್ಕಳಿಗೆ ಈ ಶಿಕ್ಷಣ ಸಂಸ್ಥೆಯು ನೀಡುತ್ತಿದ್ದು, ಪ್ರಸ್ತುತ ದಿನಗಳಲ್ಲಿ ಮಕ್ಕಳಿಗೆ ಸ್ಪರ್ಧಾತ್ಮಕ

ಮನೋಭಾವದ ಜೊತೆಗೆ ಸಂಸ್ಕಾರಯುತ ಶಿಕ್ಷಣದ ಅವಶ್ಯಕತೆ ಇದೆ. ಮಕ್ಕಳ ಪ್ರತಿಭೆಗೆ ಶಾಲಾ ವಾರ್ಷಿಕೋತ್ಸವ ಸಮಾರಂಭವು ಸೂಕ್ತ ವೇದಿಕೆಯಾಗಲಿದೆ ಎಂದರು.

ಆಟೋಟಗಳಲ್ಲಿ ವಿಜೇತರಾದ ಪಾಲಕರಿಗೆ ಮತ್ತು ಮಕ್ಕಳಿಗೆ ಸನ್ಮಾನಿಸಲಾಯಿತು. ಮಕ್ಕಳ ಸಾಂಸ್ಕೃತಿಕ

ಕಾರ್ಯಕ್ರಮಗಳು ಎಲ್ಲರ ಗಮನ ಸೆಳೆದವು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಸಂಸ್ಥಾಪಕರಾದ ಕೆ.ಮಧುಸೂದನ್ ಡೊಳ್ಳಿನ ವಹಿಸಿಕೊಂಡಿದ್ದರು. ಇದೇ ವೇಳೆ ತಾಲೂಕ ಪಂಚಾಯತ್ ಮಾಜಿ ಅಧ್ಯಕ್ಷರಾದ ಬಸವರಾಜ ಬಾವಿಕಟ್ಟಿ,

ಮುಖಂಡರಾದ ಎ.ವಿ.ಗುರುರಾಜ್ ರಮೇಶ್ ಕೆ, ಮಂಜುನಾಥ ಚನ್ನದಾಸರ್, ರಾಮಣ್ಣ ದೊಡ್ಮನಿ, ಯಮನೂರಪ್ಪ ದೊಡ್ಮನಿ, ಹುಲುಗಪ್ಪ ಭಜಂತ್ರಿ, ಮಂಜುನಾಥ್

ದೊಡ್ಮನಿ ಒಣಬಳ್ಳಾರಿ ಹಾಗೂ ಶಿಕ್ಷಣ ಪ್ರೇಮಿಗಳು ಪಾಲಕರು ಮಕ್ಕಳು ಉಪಸ್ಥಿತಿ ಇದ್ದರು.

# ಪೊಲೀಸ್ ಇನ್ಸ್‌ಪೆಕ್ಟರ್‌ಗಳ ವರ್ಗಾವಣೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಪೊಲೀಸ್ ಇಲಾಖೆಯಿಂದ ನಿನ್ನೆ ಜಿಲ್ಲೆಯ ಹಲವು ಠಾಣೆಗಳ ಪೊಲೀಸ್ ಇನ್ಸ್ ಪೆಕ್ಟರ್ ಗಳನ್ನು ವರ್ಗ ಮಾಡಿದೆ.

ನಗರದಲ್ಲಿ ಪರಿಣಾಮಕಾರಿಯಾಗಿ ಅಲ್ಲದಿದ್ದರೂ ಸಮಸ್ಯೆ ಗಳು ಬಂದಾಗ ಅವನ್ನು ನಿಭಾಯಿಸುತ್ತಿದ್ದ ಸಂಚಾರಿ ಠಾಣೆಯ ಸಿಪಿಐ ಅಯ್ಯನಗೌಡ ಪಾಟೀಲ್ ಹೊಸಪೇಟೆಗೆ ವರ್ಗವಾಗಿದ್ದು. ಅವರ ಸ್ಥಾನಕ್ಕೆ ಪಿಡಿ ಹಳ್ಳಿ ಠಾಣೆಯ. ಇನ್ಸೆಕರ್ ರುದ್ರಪ್ಪ ಎಲ್ ವರ್ಗವಾಗಿ ಬಂದಿದ್ದಾರೆ. ಪಿ.ಡಿ.ಹ ಳ್ಳಿಗೆ ಶುಭಾಷ್ ಚಂದ್ರ ಟಿ ಆಗಮಿಸಲಿದ್ದಾರೆ.

ಇನ್ನು ಕುರುಗೋಡು ಠಾಣೆಯ ಇನ್ಸೆಕ್ಟರ್ ವಿಶ್ವನಾಥ ಹಿರೇಗೌಡರ್ ಅವರು ಕುಷ್ಠಿಗಿಗೆ ವರ್ಗವಾಗಿದ್ದು. ಇವರ ಸ್ಥಾನಕ್ಕೆ ಬಾಳನಗೌಡ ಎಸ್ ಮಾನ ಶೆಟ್ಟರ್ ಬರುತ್ತಿದ್ದಾರೆ.

ಬಳ್ಳಾರಿಯ ಸೈಬರ್ ಕ್ರೈಂ ಠಾಣೆಯ ಸಿಪಿಐ ರಮಾ ಕಾಂತ್ ಯಲ್ಲಪ್ಪ ಹುಲ್ಲೂರ್ ಅವರು ಆಂತರಿಕ ಭದ್ರತಾ ವಿಭಾಗಕ್ಕೆ ಬೆಂಗಳೂರಿಗೆ ವರ್ಗಗೊಂಡಿದ್ದಾರೆ.

# ಹೊಸ ಜಿಲ್ಲಾಡಳಿತ ಭವನದಲ್ಲಿ ಹಲವು ಸಮಸ್ಯೆ




• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ನಗರದ ರಾಜಕುಮಾರ್ ರಸ್ತೆಯಲ್ಲಿನ ನೂತನ ಜಿಲ್ಲಾಡಳಿತ ಭವನದಲ್ಲಿ ಅನೇಕ ಸಮಸ್ಯೆಗಳು ಎದುರಾಗಿವೆ.

ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ಸುಸಜ್ಜಿತವಾಗಿ ಈ ಜಿಲ್ಲಾಡಳಿತ ಭವನ ನಿರ್ಮಾಣವಾಗಿದೆ. ಇಲ್ಲಿರುವ ಶೌಚಾಲಯಗಳಲ್ಲಿ ನಲ್ಲಿಗಳು ಅನೇಕ ದಿನಗಳಿಂದ ಕೆಟ್ಟು ಹೋಗಿವೆ. ಕೆಲ ಶೌಚಾಲಯಗಳ ಬೀಗ ಸಹ ತೆರಿದಿಲ್ಲ. ಅವ್ಯವಸ್ಥೆ ಇರುವುದರಿಂದ ಕಚೇರಿಗೆ ಬಂದ ಜನತೆ ಶೌಚಾಲಯ ಬಳಸುವುದು ಸಮಸ್ಯೆಯಾಗಿದೆ.

> ಕೂಡಲೇ ಶೌಚಾಲಯದ ನಲ್ಲಿ ಮತ್ತು ಫಿಲ್ಟರ್ ರಿಪೇರಿ ಮಾಡಿಸಬೇಕು ಇಲ್ಲದಿದ್ದರೆ ಸಾರ್ವಜನಿಕರಿಗೂ ಸಿಬ್ಬಂದಿಗೂ ಸಮಸ್ಯೆ ಆಗುತ್ತದೆ.
> **ಆರ್.ವೆಂಕಟರೆಡ್ಡಿ.**
> **ಸಾಮಾಜಿಕ ಹೋರಾಟಗಾರ,**
> **ಬಳ್ಳಾರಿ,**

ಇಷ್ಟೇ ಅಲ್ಲದೆ ಕುಡಿಯುವ ನೀರಿನ ಫಿಲ್ಟರ್ ಗಳು ಕೂಡ ಕೆಟ್ಟುಹೋಗಿವೆ. ಇದರಿಂದಾಗಿ ಕುಡಿಯುವ ನೀರು ವ್ಯವಸ್ಥೆ ಇಲ್ಲದ ಪರಿಸ್ಥಿತಿ ಬಂದಿದೆ. ಅಲ್ಲದೆ ಲಿಫ್ಟ್ ಕೂಡಾ ಅನೇಕ ದಿನಗಳಿಂದ ಕೆಟ್ಟು ಹೋಗಿದೆ.

ಇನ್ನು ಇಲ್ಲಿ ಕ್ಯಾಂಟೀನ್ ಸೌಲಭ್ಯ ಇಲ್ಲದ ಕಾರಣ ಪ್ರತಿ ಕಚೇರಿಯಲ್ಲಿ ಹೋದಾಗ ಸಿಬ್ಬಂದಿ ಅಲ್ಲಿ ಇರಲ್ಲ. ಕೇಳಿದರೆ ಚಾಹಾ ಗೆ ಹೋಗಿದ್ದಾರೆ ಎಂದು ಹೇಳುತ್ತಾರೆ. ಅರ್ಧತಾಸು ಆದರೂ ಬರಲ್ಲ. ಕೇಳಿದರೆ ಇಲ್ಲಿ ಕ್ಯಾಂಟೀನ್ ಇಲ್ಲ. ದೂರ ಹೋಗಬೇಕು ಎನ್ನುತ್ತಾರೆ. ಜನರಿಗೂ ಇಲ್ಲಿ ಕ್ಯಾಂಟೀನ್ ನ ಅಗತ್ಯತೆ ಇದೆ.

# 19ಕ್ಕೆ ಛತ್ರಪತಿ ಶ್ರೀ ಶಿವಾಜಿ ಜಯಂತಿ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಫೆ.19 ರಂದು ಸಂಜೆ 06 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಸಭಾಂಗಣದಲ್ಲಿ ಛತ್ರಪತಿ ಶ್ರೀ ಶಿವಾಜಿ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

# ನಿಂಗೋಜಿ ಶಿಕ್ಷಣ ಸಂಸ್ಥೆ ಹೆಮ್ಮರವಾಗಿ ಬೆಳೆದು ಸಿಹಿ ಫಲ ನೀಡಿದೆ: ಉಳ್ಳಾಗಡ್ಡಿ




• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**

ಯಲಬುರ್ಗಾ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಕನಸನ್ನು ಹೊತ್ತು ಪ್ರಾರಂಭಗೊಂಡ ನಿಂಗೋಜಿ ಶಿಕ್ಷಣ ಸಂಸ್ಥೆ ಇಂದು ಹೆಮ್ಮರವಾಗಿ ಬೆಳೆದು ಸಿಹಿಫಲ ನೀಡಿದೆ ಎಂದು ರಾಯಚೂರ ಕೊಪ್ಪಳ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕಿನ ನಿರ್ದೇಶಕರಾದ ಶೇಖರಗೌಡ ಉಳ್ಳಾಗಡ್ಡಿ ರವರು ಹೇಳಿದರು.

ಪಟ್ಟಣದ ಎಸ್.ಎ. ನಿಂಗೋಜಿ ಸೆಂಟ್ರಲ್ ಪಬ್ಲಿಕ ಶಾಲೆಯ 12 ನೇ ವಾರ್ಷಿಕೋತ್ಸವ ದಿನಾಚರಣೆ ಹಾಗೂ ಮಲ್ಲಪ್ಪ ನಿಂಗೋಜಿ ಪ್ರತಿಷ್ಠಾನದಿಂದ "ಅವ್ವ_ಅಪ್ಪ" ಸಮಾಜ ರತ್ನ ಪ್ರಶಸ್ತಿಯನ್ನು ಸ್ವೀಕರಿಸಿದ ಸಹಕಾರಿ ಧುರೀಣರಾದ ಶೇಖರಗೌಡ ಉಳ್ಳಾಗಡ್ಡಿ ರವರು ಮಾತನಾಡುತ್ತಾ ಸಹಕಾರಿ ಕ್ಷೇತ್ರದಲ್ಲಿ ಗಣನೀಯ ಸೇವೆಗೈದ ಮಲ್ಲಪ್ಪ ನಿಂಗೋಜಿರವರು ಸ್ವಾತಂತ್ರ್ಯ ಹೋರಾಟದಲ್ಲಿ ಹಾಗೂ ತದ ನಂತರ ಹೈ. ಕ. ವಿಮೋಚನೆಗೆ ಶ್ರಮಿಸಿದ ಧೀಮಂತ ವ್ಯಕ್ತಿಯಾಗಿದ್ದರು ಅವರ ಹೆಸರಿನಲ್ಲಿ ಕೊಡುವ ಪ್ರಶಸ್ತಿ ನನಗೆ ಲಭಿಸಿರುವುದು ಪೂರ್ವ ಜನ್ಮದ ಸುಕೃತ ಎಂದು ಭಾವಿಸಿರುವೆ . ನಿಂಗೋಜಿ ಕುಟುಂಬವು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿದ್ದು ಸ್ಮರಣೀಯವಾಗಿದೆ. ನಮ್ಮ ಜಿಲ್ಲೆಯಲ್ಲಿ ಆ ಕುಟಂಬವು ಸಹಕಾರಿ ಶಿಕ್ಷಣ ಸಾಹಿತ್ಯ ಕೃಷಿ ರಾಜಕೀಯ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆಯನ್ನು ಸಲ್ಲಿಸಿ ಎಲ್ಲರ ಜನ ಮಾನಸದಲ್ಲಿ ಉಳಿದಿದ್ದಾರೆ ಎಂದು ಮನದಾಳದ ಮಾತನ್ನು ಬಿಚ್ಚಿಡುತ್ತಾ ಕೊಪ್ಪಳದಲ್ಲಿ ಬಿ.ಎ.ಎಂ.ಎಸ್. ಮಹಿಳಾ ಪದವಿ ಕಾಲೇಜು ಹಾಗೂ ಯಲಬುರ್ಗಾದಲ್ಲಿ ಬಿ.ಇಡಿ . ಕಾಲೇಜು ಸೆಂಟ್ರಲ್ ಪಬ್ಲಿಕ ಶಾಲೆಗಳನ್ನು ತೆರೆದು ಗುಣಮಟ್ಟದ ಶಿಕ್ಷಣ ಕೊಡುವದರ ಜೊತೆಗೆ ಮೌಲ್ಯಾಧಾರಿತ ಸಂಸ್ಕಾರವನ್ನು ವಿದ್ಯಾರ್ಥಿಗಳಿಗೆ ನೀಡುತ್ತಿರುವುದು ನಿಂಗೋಜಿ ಶಿಕ್ಷಣ ಸಂಸ್ಥೆಯ ಕಳಕಳಿಯಾಗಿದೆ ಎಂದರು .

ತಾ.ಪಂ. ಮಾಜಿ ಸದಸ್ಯೆ ಲಲಿತಾ ನಿಂಗೋಜಿ ಸ್ಮರಣಾರ್ಥ ಕೊಡಲ್ಪಡುವ "ಕಾಯಕ ರತ್ನ" ಪ್ರಶಸ್ತಿಯನ್ನು ಸ್ವಾವಲಂಬಿ ಜೀವನ ಸಾಗಿಸುವ ರೇಣುಕಾ ಸಂಗನಾಳ ರವರಿಗೆ ಇದೇ ಸಂದರ್ಭದಲ್ಲಿ ಪ್ರಶಸ್ತಿಯನ್ನು ವಿತರಿಸಲಾಯಿತು.

ಮುಖ್ಯ ಅತಿಥಿಗಳಾದ ಶಿವಶರಣಪ್ಪ ಬಳಿಗಾರ ಮಾತನಾಡಿ ಶಶಿಕಾಂತ ನಿಂಗೋಜಿರವರು ಗ್ರಾಮೀಣ ಪ್ರದೇಶದ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಓದಿ ಸಂಕಷ್ಟದ ಬದುಕನ್ನು ಸಾಗಿಸಿ ಯಶದ ದಾರಿಯನ್ನು ಕಂಡುಕೊಂಡವರಾಗಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ವಿದ್ಯಾ ಸಂಸ್ಥೆಯನ್ನು ಸ್ಥಾಪಿಸುವ ಮೂಲಕ ಶಿಕ್ಷಣ ಕ್ಷೇತ್ರದ ಮಹತ್ವವನ್ನು ಸಾಕಾರಗೊಳಿಸಿದವರಾಗಿದ್ದಾರೆ ಎಂದರು.

ಕೊಪ್ಪಳದ ರಾಮಕೃಷ್ಣ ಆಶ್ರಮದ ಚೈತನ್ಯಾನಂದ ಸ್ವಾಮೀಜಿರವರು ಸಾನಿಧ್ಯ ವಹಿಸಿ ಮಾತನಾಡುತ್ತಾ ನಿಂಗೋಜಿ ಶಿಕ್ಷಣ ಸಂಸ್ಥೆ ಜ್ಞಾನ ದಾಸೋಹದ ಜೊತೆಗೆ ಅನ್ನದಾಸೋಹಕ್ಕೂ ಹೆಸರಾಗಿದೆ. ಅವರಿಗೆ ಪೂರ್ವಜರ ಪರಿ ಶ್ರಮದ ಫಲ ತಟ್ಟಿದೆ ಉತ್ತರೋತ್ತರವಾಗಿ ಅವರ ಶಿಕ್ಷಣ ಕ್ಷೇತ್ರ ಬೆಳೆಯಲಿ ಲಕ್ಷಾಂತರ ಜನರು ಅವರನ್ನು ನೆನೆಯುವ ಕಾಲ ಇತಿಹಾಸದ ಪುಟದಲ್ಲಿ ಸ್ಮರಣೀಯವಾಗಿ ಉಳಿಯಲಿ ಎಂದು ಆಶಿಸಿದರು.

ಮಲ್ಲಪ್ಪ ನಿಂಗೋಜಿ ಪ್ರತಿಷ್ಠಾನದ ಅಧ್ಯಕ್ಷರು ಹಾಗೂ ನಿ.ಪ್ರಾಚಾರ್ಯರಾದ ಜಿ.ಎಂ. ನಿಂಗೋಜಿರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಹಿರಿಯರ ಸ್ಮರಣೆಯು ಸಾಧಕರನ್ನು ಗುರುತಿಸುವ ಮೂಲಕ ಪ್ರತಿಷ್ಠಾನ ಹಾಗೂ ನಿಂಗೋಜಿ ಶಿಕ್ಷಣ ಸಂಸ್ಥೆಯ ಮೂಲಕ ನಡೆಯುತ್ತಿರುವುದು ಸದ್ರಢ ಸಮಾಜ ನಿರ್ಮಾಣಕ್ಕೆ ಪ್ರೇರಣೆಯಾಗಲಿ ಎಂದೆನ್ನುತ್ತಾ ಆಂಗ್ಲ ಭಾಷೆಯ ಅನಿವಾರ್ಯತೆ ಮಕ್ಕಳ ಕಲಿಕಾ ವಿಚಾರದಲ್ಲಿ ಪಾಲಕರ ಜವಬ್ದಾರಿ ಮಹತ್ತರವಾದರೂ ಸಹಿತ ಮಾತೃ ಭಾಷೆಯಲ್ಲಿ ಕಲಿಯುವದರಿಂದ ಮಕ್ಕಳ ಸಾಮರ್ಥ್ಯ ನೂರಕ್ಕೆ ನೂರರಷ್ಟು ಹೆಚ್ಚಾಗಲಿದೆ ಎಂದರು.

2024–25 ನೇ ಸಾಲಿನಲ್ಲಿ ಹತ್ತನೆ ತರಗತಿಯಲ್ಲಿ ಹಾಗೂ ಏಳನೇ ತರಗತಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಕರಮುಡಿಯ ವಿದ್ಯಾರ್ಥಿಗಳಾದ ರಾಜೇಶ್ವರಿ ಪಾಟೀಲ ಲಕ್ಷ್ಮೀ ರಾಟಿ ಮಂಜುನಾಥ ಹೊಂಬಳ ಕಿರಣ ಹುನಗುಂದ ಸುಶ್ಮಿತಾ ನಂದಿಕೋಲಮಠ ಶಶಿಕಾಂತ ಮಾನಶೆಟ್ಟರವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಹಾಗೂ ಎಸ್.ಎ.ನಿಂಗೋಜಿ ಸೆಂಟ್ರಲ್ ಪಬ್ಲಿಕ ಶಾಲೆಯಲ್ಲಿ ಓದಿ ಸಾಧನೆಗೈದ ಅನೇಕ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪದಕ ನೀಡಿ ಸನ್ಮಾನ ಮಾಡಲಾಯಿತು.

ಗೋಪಾಲರಾವ್ ಬಿನ್ನಾಳ ಮುಕಂದರಾವ್ ದೇಸಾಯಿಡಿ. ಎಲ್.ಕುಲಕರ್ಣಿ ವೀರಪ್ಪ ನಿಡಶೇಸಿ ವೀರಣ್ಣ ವಾಲಿ ಶ್ಯಾಮೀದಸಾಬ್ ಮುಲ್ಲಾ ಇಮಾಮ ಗುಳೇದಗುಡ್ಡ ಬಸವರಾಜ ಕರಾಟೆ ಯಮನೂರಪ್ಪ ಹಾದಿಮನಿ ರಾಯಪ್ಪ ಹುಂಡಿ ನೀಲಸಗೌಡ ಪವಾಡಿಗೌಡರ ರವಿಚಂದ್ರ ಕೆಂಚರಡ್ಡಿ ನಿಂಗೋಜಿ ಶಿಕ್ಷಣ ಹಾಗೂ ಗ್ರಾ.ಅ.ಟ್ರಸ್ಟ ಅಧ್ಯಕ್ಷ ಎಸ್.ಎ.ನಿಂಗೋಜಿಡಾಪ್ರಕಾಶ ಜಾಫರ್ ಸಂಪತಕುಮಾರ ಆಕಳವಾಡಿ ವೀರೇಶ ಹೊನ್ನೂರು ನಿಂಗೋಜಿ ಕುಟುಂಬದ ರಾಜಶೇಖರ ರವಿ ಮಂಜುನಾಥವೀರಣ್ಣ ಇನ್ನು ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿದ್ದರು

# ಮಹಾಶಿವರಾತ್ರಿ ಮಹೋತ್ಸವ ಉತ್ಸವ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಮಹಾಶಿವರಾತ್ರಿಯ ಪ್ರಯುಕ್ತ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ, ಪಾರ್ವತಿ ನಗರ ಮುಖ್ಯ ರಸ್ತೆ, ಬಳ್ಳಾರಿ ಆಯೋಜಿಸಿರುವ ವಿಶೇಷ ಕಾರ್ಯಕ್ರಮಗಳು ಜ್ಯೋತಿರ್ಲಿಂಗ ದರ್ಶನ ದಿನಾಂಕ:15.02.2026 ಭಾನುವಾರ ಸಂಜೆ 4 ಗಂಟೆಯಿಂದ ಪ್ರಾರಂಭವಾಗುವದು.

ಸಂಜೆ 4 ಗಂಟೆಯಿಂದ 7 ಗಂಟೆಯ ವರೆಗೆ ಬಳ್ಳಾರಿ ನಗರದ ಪ್ರಮುಖ ರಸ್ತೆಗಳಲ್ಲಿ 12 ಜ್ಯೋತಿರ್ಲಿಂಗಗಳೊಂದಿಗೆ ಸದ್ಭಾವನಾ ಶಾಂತಿ ಯಾತ್ರೆ ನಡೆಯುತ್ತದೆ. ಸಂಜೆ 7 ಗಂಟೆಯಿಂದ 10 ಗಂಟೆಯ ವರೆಗೆ ಓಂ ನಮಃ ಶಿವಾಯ ಮಂತ್ರದಿಂದ ಅಂತರಂಗ-ಕ್ಕೆ ಜ್ಞಾನದ ಬೆಳಕು ನೀಡುವ ಶಿವಾನುಭವದ ಮಂಟಪದಲ್ಲಿ ಶಿವಯೋಗದ ಕಾರ್ಯಕ್ರಮವಿರುತ್ತದೆ. ದುರ್ಗುಣಗಳನ್ನು ಶಿವಾರ್ಪಣೆ ಮಾಡಲು ಸ್ವಪರಿವರ್ತನೆ ಮಂಟಪವಿರುತ್ತದೆ. ಆಕರ್ಷಣೀಯ 6 ಅಡಿ ಎತ್ತರದ ಪಂಚಲೋಹದಿಂದ ನಿರ್ಮಿತವಾಗಿರುವ ಶಿವಲಿಂಗ ದರ್ಶನವಿರುತ್ತದೆ. 40 ಅಡಿ ಎತ್ತರದಲ್ಲಿ ನಿರ್ಮಿತವಾಗಿರುವ ಹೊಲೊಗ್ರಾಫಿಕ್ ಶಿವಲಿಂಗ ದರ್ಶನವಿರುತ್ತದೆ. ಶರಣರು ಕಂಡ ಶಿವಲಿಂಗ ದರ್ಶನವಿರುತ್ತದೆ. ದಿನಾಂಕ : 16, 17, 18 ಫೆಬ್ರವರಿ 2026 ಸಮಯ : ಪ್ರತಿ ದಿನ ಸಂಜೆ 6.30 ರಿಂದ 7.30 ರ ವರೆಗೆ ಶಿವಾನುಭೂತಿ ಕಾರ್ಯಕ್ರಮವಿರುತ್ತದೆ.

ಸ್ಥಳ: ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ, ಪಾರ್ವತಿ ನಗರ ಮುಖ್ಯ ರಸ್ತೆ, ಬಳ್ಳಾರಿ ಶಿವಲಿಂಗ ದರ್ಶನವನ್ನು ಮಾಡುತ್ತ ಮಹಾಶಿವರಾತ್ರಿ ಮಹೋತ್ಸವವನ್ನು ಆನಂದಿಸೋಣ, ಸಂಭ್ರಮಿಸೋಣ.

# ಫುಟ್‌ಬಾಲ್ ಫಾರ್ ಸ್ಕೂಲ್ ವಿನೂತನ ಕಾರ್ಯಕ್ರಮಕ್ಕೆ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆ ಕುಕನೂರು:**

ಪಟ್ಟಣದ ಪಿಎಂ ಶ್ರೀ ಸ್ಕೂಲ್ ಜವಾಹರನವೋದಯ ಶಾಲೆಯಲ್ಲಿ ಇಂದು "ಫುಟ್‌ಬಾಲ್ ಫಾರ್ ಸ್ಕೂಲ್" (ಈಂಂಣಭಿಚಿಟಟ ಜಿಂಡಿ ಖಛಿಹಿಂಂಟ – ಈ4ಖ) ಎಂಬ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಯಾಗಿ ಭಾಗವಹಿಸಿದ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಬಸವರಾಜ್ ಎ. ಅವರು, ಅವಳಿ ತಾಲ್ಲೂಕಿನ ಸರ್ಕಾರಿ ಪ್ರೌಢಶಾಲೆಗಳಿಗೆ ಫುಟ್ಬಾಲ್ ವಿತರಿಸುವ ಮೂಲಕ "ಫುಟ್‌ಬಾಲ್ ಫಾರ್ ಸ್ಕೂಲ್" (ಈಂಂಣಭಿಚಿಟಟ ಜಿಂಡಿ ಖಛಿಹಿಂಂಟ – ಈ4ಖ) ಎಂಬ ವಿನೂತನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮೊದಲಹಂತದಲ್ಲಿ ಸಂಕೇತಿಕವಾಗಿ ಯಲಬುರ್ಗಾ–ಕುಕನೂರು ಅವಳಿ ತಾಲ್ಲೂಕಿನ 16 ಸರ್ಕಾರಿ ಪ್ರೌಢಶಾಲೆಗಳಿಗೆ ಫುಟ್ಬಾಲ್ ವಿತರಣೆ ಮಾಡಿದರು. ಬಳಿಕ ತಾಲೂಕಿನ 216 ಸರ್ಕಾರಿ ಪ್ರೌಢಶಾಲೆಗಳಿಗೆ ವಿತರಣೆ ಮಾಡಲಾಗುವುದು ಎಂದು ಅವರು ತಿಳಿಸಿದರು.

**ಏನಿದು ಫುಟ್‌ಬಾಲ್ ಫಾರ್ ಸ್ಕೂಲ್**

ಫಿಫಾ (ಈeಜeಡಿಚಿಣioಟಿ Iಟಿ- ಣeಡಿಟಿಚಿಣioಟಿಚಿಟe ಜe ಈooಣbಚಿಟಟ ಂssoಛಿiಚಿಣioಟಿ- ಈIಈಂ), ಭಾರತ ಸರ್ಕಾರದ ಶಿಕ್ಷಣ ಸಚಿವಾಲಯ ಹಾಗೂ ಅಖಿಲ ಭಾರತ ಫುಟ್‌ಬಾಲ್ ಫೆಡರೇಶನ್ (ಂIಈಈ) ಜೊತೆಗೆ ಭಾರತೀಯ ಕ್ರೀಡಾ ಪ್ರಾಧಿಕಾರ (ಖಂI) ಜಂಟಿಯಾಗಿ ಹಮ್ಮಿಕೊಂಡಿರುವ ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ.

ಈ ಯೋಜನೆಯ ಪ್ರಮುಖ ಅಂಶಗಳು ಹೀಗಿದೆ. ಶಾಲಾ ಶಿಕ್ಷಣ ವ್ಯವಸ್ಥೆಯ ಮೂಲಕ ವಿದ್ಯಾರ್ಥಿಗಳಿಗೆ ಫುಟ್‌ಬಾಲ್ ಕ್ರೀಡೆಯನ್ನು ತಲುಪಿಸುವುದು ಮತ್ತು ಕ್ರೀಡಾ ಸಂಸ್ಕೃತಿಯನ್ನು ಬೆಳೆಸುವುದು ಇದರ ಮುಖ್ಯ ಉದ್ದೇಶವಾಗಿದೆ. ಈ ಯೋಜನೆಯಡಿ ಫಿಫಾ ಭಾರತದಾದ್ಯಂತ ಶಾಲೆಗಳಿಗೆ ಸುಮಾರು 11 ಲಕ್ಷಕ್ಕೂ ಅಧಿಕ ಫುಟ್‌ಬಾಲ್‌ಗಳನ್ನು ವಿತರಿಸುವ ಗುರಿ ಹೊಂದಿದೆ.

ಭಾರತದ ಸುಮಾರು 1.5 ಲಕ್ಷ ಶಾಲೆಗಳ 2.5 ಕೋಟಿ ವಿದ್ಯಾರ್ಥಿಗಳನ್ನು ತಲುಪುವ ಗುರಿಯನ್ನು ಈ ಯೋಜನೆ ಹೊಂದಿದ್ದು, ಇದು ನವೋದಯ ವಿದ್ಯಾಲಯ (ಓಗಿಖ), ಕೇಂದ್ರೀಯ ವಿದ್ಯಾಲಯ (ಏಗಿಖ) ಮತ್ತು ರಾಜ್ಯ ಸರ್ಕಾರಿ ಶಾಲೆಗಳನ್ನೊಳಗೊಂಡಿದೆ. ಶಾರೀರಿಕ ಶಿಕ್ಷಣ ಶಿಕ್ಷಕರಿಗೆ (ಕಇ ಖಿeಚಿಛಿhಡಿs) ಫುಟ್‌ಬಾಲ್ ತರಬೇತಿ ನೀಡಲು ಮಾಸ್ಟರ್ ಟ್ರೈನರ್ ಶಿಬಿರಗಳನ್ನು ಬೆಂಗಳೂರು ಸೇರಿದಂತೆ ವಿವಿಧ ನಗರಗಳಲ್ಲಿ ಆಯೋಜಿಸಲಾಗಿದೆ.

ಕೇವಲ ಆಟವಷ್ಟೇ ಅಲ್ಲದೆ, ಈ ಕ್ರೀಡೆಯ ಮೂಲಕ ಜೀವನ ಕೌಶಲಗಳು, ಶಿಸ್ತು ಮತ್ತು ತಂಡದ ಕೆಲಸವನ್ನು (ಖಿeಚಿmತಿoಡಿಞ) ಮಕ್ಕಳಿಗೆ ಕಲಿಸುವುದು ಈ ಯೋಜನೆಯ ಆಶಯವಾಗಿದೆ. ಹುಡುಗರು ಮತ್ತು ಹುಡುಗಿಯರಿಬ್ಬರಿಗೂ ಸಮಾನವಾಗಿ ಈ ಕ್ರೀಡೆಯನ್ನು ತಲುಪಿಸಲು ಒತ್ತು ನೀಡಲಾಗಿದೆ. ಈ ಮೂಲಕ ಲಿಂಗ ಅಸಮಾನತೆ ಅಥವಾ ಲಿಂಗ ತಾರತಮ್ಯವನ್ನು ಹೋಗಲಾಡಿಸುವ ಪ್ರಮುಖ ಉದ್ದೇಶವಾಗಿದೆ.

ಈ ಸಂದರ್ಭದಲ್ಲಿ ಫುಟ್‌ಬಾಲ್ ಫಾರ್ ಸ್ಕೂಲ್ ಕಾರ್ಯಕ್ರಮದ ಆಯೋಜಕ ಆರ್. ಮರಿಸ್ವಾಮಿ , ಜವಾಹರ ನವೋದಯ ಶಾಲೆಯ ಪ್ರಾಂಶುಪಾಲ ರಾಜೇಶ್ ಎನ್. ಹಾಗೂ ತಾಲೂಕಿನ ವಿವಿಧ ಪ್ರೌಢ ಶಾಲೆಗಳ ದೈಹಿಕ ಶಿಕ್ಷಕರ ಜೊತೆಗೆ ಶಾಲಾ ಮಕ್ಕಳು ಭಾಗವಹಿಸಿದ್ದರು.

# ಕೆಎಸ್‌ಆರ್‌ಪಿ ಪಡೆ ಸ್ಥಾಪನೆಗೆ ಸಿಎಂಗೆ ಪತ್ರ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು ಬಳ್ಳಾರಿ:**

ರಾಯಚೂರು ಜಿಲ್ಲೆಯಲ್ಲಿ 13ನೇ ಕೆಎಸ್‌ಆರ್‌ಪಿ ಪಡೆಯನ್ನು ಸ್ಥಾಪಿಸಬೇಕೆಂದು ಯುವ ಹೋರಾಟಗಾರ ಅರುಣ್ ಭೂಪಾಲ್ ಅವರು ಮುಖ್ಯಮಂತ್ರಿ ಅವರಿಗೆ ಬಹಿರಂಗ ಪತ್ರ ಬರೆದು ಒತ್ತಾಯಿಸಿದ್ದಾರೆ. ಈ ಪತ್ರ ಖಾಕಿ ವಲಯ ಹಾಗೂ ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

ಕಲ್ಯಾಣ ಕರ್ನಾಟಕ ಭಾಗದ ಭದ್ರತಾ ಪರಿಸ್ಥಿತಿಯನ್ನು ಉಲ್ಲೇಖಿಸಿರುವ ಅವರು, "ಮಹಾನಗರಗಳ ಅಭಿವೃದ್ಧಿಗೆ ಸಾವಿರಾರು ಕೋಟಿ ಮೀಸಲಿಡುವ ಸರ್ಕಾರ, ಗಡಿಭಾಗದ ಜಿಲ್ಲೆಗಳಿಗೆ ಕನಿಷ್ಠ ಭದ್ರತಾ ವ್ಯವಸ್ಥೆ ಒದಗಿಸಲು ಯಾಕೆ ಹಿಂದೇಟು ಹಾಕುತ್ತಿದೆ?"



ಎಂದು ಪ್ರಶ್ನಿಸಿದ್ದಾರೆ.

ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳು ಆಂಧ್ರ ತೆಲಂಗಾಣ ಗಡಿಭಾಗಕ್ಕೆ ಹೊಂದಿಕೊಂಡಿರುವುದರಿಂದ ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ಶಾಶ್ವತ ಕೆಎಸ್‌ಆರ್‌ಪಿ ಪಡೆಯ ಅಗತ್ಯವಿದೆ ಎಂದು ಪತ್ರದಲ್ಲಿ ವಿವರಿಸಲಾಗಿದೆ. ವಿ.ವಿ.ಐ.ಪಿ ಭೇಟಿಗಳು, ರಾಜಕೀಯ ಸಮಾವೇಶಗಳು, ಧಾರ್ಮಿಕ ಜಾತ್ರೆಗಳು, ಹಟ್ಟಿ ಚಿನ್ನದ ಗಣಿ, ಶಕ್ತಿನಗರ ವಿದ್ಯುತ್ ಉತ್ಪಾದನಾ ಘಟಕ ಹಾಗೂ ಉದ್ದೇಶಿತ ವಿಮಾನ ನಿಲ್ದಾಣದ ಹಿನ್ನೆಲೆಯಲ್ಲಿ ಭದ್ರತಾ ಸವಾಲು ಹೆಚ್ಚುತ್ತಿದೆ ಎಂದು ಅವರು ತಿಳಿಸಿದ್ದಾರೆ.

ತುರ್ತು ಸಂದರ್ಭಗಳಲ್ಲಿ ಕಲಬುರಗಿ ಅಥವಾ ಮುನಿರಾಬಾದ್‌ನಿಂದ ಪಡೆ ಬರಲು ನಾಲ್ಕು ಗಂಟೆಗಳವರೆಗೆ ಸಮಯ ಹಿಡಿಯುತ್ತಿರುವುದು ಆತಂಕಕಾರಿ ಎಂದು ಅರುಣ್ ಭೂಪಾಲ್ ಅಭಿಪ್ರಾಯಪಟ್ಟಿದ್ದಾರೆ.

ಕಲ್ಯಾಣ ಕರ್ನಾಟಕದ 25 ಶಾಸಕರು ಒಟ್ಟಾಗಿ ಮನವಿ ಸಲ್ಲಿಸಿದ್ದರೂ ಹಣಕಾಸು ಇಲಾಖೆ ಎರಡನೇ ಬಾರಿ ಪ್ರಸ್ತಾವನೆ ತಿರಸ್ಕರಿಸಿರುವುದು ಅಸಮಾಧಾನಕ್ಕೆ ಕಾರಣವಾಗಿದೆ. ಅಗತ್ಯ ಭೂಮಿ ಹಾಗೂ ಅನುದಾನದ ವ್ಯವಸ್ಥೆ ಇದ್ದರೂ ಅನುಮತಿ ನೀಡದಿರುವುದನ್ನು ಅವರು ಪ್ರಶ್ನಿಸಿದ್ದಾರೆ.

ಐಆರ್‌ಬಿಕೆಎಸ್‌ಆರ್‌ಪಿ ಪ್ರತ್ಯೇಕೀಕರಣದ ನಂತರ ಕಲ್ಯಾಣ ಕರ್ನಾಟಕ ಮೀಸಲಾತಿಯಲ್ಲಿ ನೇಮಕವಾದ ಸಿಬ್ಬಂದಿಗೆ ಪದೋನ್ನತಿ ಸಿಗದೆ ನಿವೃತ್ತಿಯಾಗುತ್ತಿರುವ ವಿಚಾರವನ್ನೂ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ರಾಜ್ಯ ಬಜೆಟ್‌ನಲ್ಲಿ ರಾಯಚೂರಿನಲ್ಲಿ 13ನೇ ಕೆಎಸ್‌ಆರ್‌ಪಿ ಪಡೆಯ ಘೋಷಣೆ ಮಾಡಬೇಕು. ಇದು ಕೇವಲ ಒತ್ತಾಯವಲ್ಲ, ಸಂವಿಧಾನಬದ್ಧ ಹಕ್ಕು ಎಂದು ಅವರು ತಿಳಿಸಿದ್ದಾರೆ. ಈ ಕುರಿತು ಸರ್ಕಾರದ ಪ್ರತಿಕ್ರಿಯೆ ನಿರೀಕ್ಷಿಸಲಾಗುತ್ತಿದೆ.

# ವಸತಿ ಬೇಡಿಕೆಗೆ ಪ್ರಸ್ತಾವನೆ ಸಲ್ಲಿಸಿ: ಜಮೀರ್ ಅಹ್ಮದ್ ಖಾನ್

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**



ಜಿಲ್ಲೆಯಲ್ಲಿ ವಸತಿ ಬೇಡಿಕೆ ಇದ್ದಲ್ಲಿ ಪ್ರಸ್ತಾವನೆ ಸಲ್ಲಿಸಬೇಕು ಎಂದು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ಝೆಡ್.ಜಮೀರ್ ಅಹ್ಮದ್ ಖಾನ್ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಮೊದಲ ಜಿಲ್ಲಾ ಯೋಜನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 2 ಸಾವಿರ ಮನೆಗಳು ಬೇಡಿಕೆ ಇವೆ ಎಂದು, ಯೋಜನಾ ಸಮಿತಿಯ ವರದಿಯಲ್ಲಿದ್ದು, ಇನ್ನೂ ಪೂರಕ ಸಮೀಕ್ಷೆ ನಡೆಸಬೇಕು. ಜಿಲ್ಲೆಯಲ್ಲಿ ವಿವಿಧ ಅನುದಾನ ಲಭ್ಯವಿದೆ. ಹಾಗಾಗಿ ವಸತಿ ಬೇಡಿಕೆಗನುಗುಣವಾಗಿ ಪ್ರಸ್ತಾವನೆ ಸಿದ್ಧಪಡಿಸಿ ವರದಿ ಸಲ್ಲಿಸಿ ಎಂದರು.

ಜಿಲ್ಲೆಯ 5 ತಾಲ್ಲೂಕುಗಳಲ್ಲಿ ವಸತಿ, ಶಿಕ್ಷಣ, ಆರೋಗ್ಯ ಸೌಲಭ್ಯ ಸೇರಿದಂತೆ ಇದಕ್ಕಾಗಿ ರೂ.5,500 ಕೋಟಿ ಅಂದಾಜು ಮಾಡಲಾಗಿದೆ. ಇನ್ನೂ ಹಲವು ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಬೇಕಾದಲ್ಲಿ ಸದಸ್ಯರು ತಮ್ಮ ಅಭಿಪ್ರಾಯ ಮಂಡಿಸಿದಲ್ಲಿ ಯೋಜನಾ ವರದಿಯಲ್ಲಿ ಹೆಚ್ಚುವರಿಯಾಗಿ ಸೇರಿಸಲಾಗುವುದು ಎಂದರು. ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್ ಅವರು ಮಾತನಾಡಿ, ಜಿಲ್ಲಾ ಯೋಜನಾ ಸಮಿತಿ ಸಭೆಯು ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳ ಅಭಿವೃದ್ಧಿ ಯೋಜನೆಗಳನ್ನು ಕ್ರೋಢೀಕರಿಸಲು, ಅನುಮೋದಿಸಲು ಮತ್ತು ಜಿಲ್ಲಾ ಮಟ್ಟದ ಅಭಿವೃದ್ಧಿ ಕಾಮಗಾರಿಗಳ ಮೇಲ್ವಿಚಾರಣೆ ನಡೆಸುವ ಸಭೆಯಾಗಿದೆ. ಜಿಲ್ಲೆಯ ಮೊದಲ ಸಭೆ ಇದಾಗಿದ್ದು, ಸದಸ್ಯರು ಸಹ ಜಿಲ್ಲೆಯ ಅಭಿವೃದ್ಧಿಗಾಗಿ ಪ್ರಸ್ತಾವನೆಗಳನ್ನು ಸಲ್ಲಿಸಬಹುದಾಗಿದೆ ಎಂದು ಹೇಳಿದರು. ಮುಖ್ಯಮಂತ್ರಿಗಳ ಕಚೇರಿಯಿಂದ ಪತ್ರ ರವಾನೆಯ ಮೂಲಕ ಬಳ್ಳಾರಿ ಜಿಲ್ಲೆಯ ಮಾನವ ಅಭಿವೃದ್ಧಿ ವರದಿ–2025 ಮತ್ತು ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ವರದಿ–2030 ರ ವರದಿ ತಯಾರಿಕೆಗೆ ಸಂಬಂಧಿಸಿದಂತೆ ಮಾಹಿತಿ ಸಲ್ಲಿಸುವಂತೆ ತಿಳಿಸಿದ್ದು, ಜಿಲ್ಲೆಯ ವರದಿ ತಯಾರಿಕೆಗೆ ತಾಂತ್ರಿಕ ಬೆಂಬಲ ಸಂಸ್ಥೆಯಾಗಿ ರಾಜ್ಯ ಸರ್ಕಾರವು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯವನ್ನು ನೇಮಿಸಿ ಕಾರ್ಯಾದೇಶ ನೀಡಿದೆ ಎಂದು ಜಿಪಂ ಸಿಇಒ, ಜಿಲ್ಲಾ ಉಸ್ತುವಾರಿ ಸಚಿವರ ಗಮನಕ್ಕೆ ತಂದರು. ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಮಾತನಾಡಿ, ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ನಗರದ ಏಕಶಿಲಾ ಬೆಟ್ಟ ಕೋಟೆಯನ್ನು ಅಭಿವೃದ್ಧಿ ಮತ್ತು ಎರಡು ಕಡೆಯ ಮುಖ್ಯದ್ವಾರಗಳನ್ನು 30 ಅಡಿ ಎತ್ತರದಲ್ಲಿ ಪ್ರಾಚೀನ ಕಾಲದ ದ್ವಾರಗಳಂತೆ ನಿರ್ಮಿಸಲು ಅಂದಾಜು 5–6 ಕೋಟಿ ರೂ. ವೆಚ್ಚದ ಅನುದಾನ ಕುರಿತು ಪ್ರಸ್ತಾಪಿಸಿದರು.

ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಮಾತನಾಡಿ, ನಗರದಲ್ಲಿನ ಹಳೆಯ ಜಿಲ್ಲಾ ನ್ಯಾಯಾಲಯ ಕಟ್ಟಡವನ್ನು ಕಾನೂನು ಕಾಲೇಜು ಮಾಡಲು ಕೋರ್ಟ್‌ನಿಂದ ಅನುಮತಿ ದೊರೆತಿದ್ದು, ಇದರ ಅಭಿವೃದ್ಧಿಗಾಗಿ ಅನುದಾನ ಕುರಿತು ಪ್ರಸ್ತಾಪಿಸಿದರು. ಕುರೇಕುಪ್ಪ ಸದಸ್ಯರೊಬ್ಬರು ಮಾತನಾಡಿ, ಕುರೇಕುಪ್ಪ ಪುರಸಭೆ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದ್ದು, ಸುಮಾರು 1.50 ಕಿ.ಮೀ ವ್ಯಾಪ್ತಿಯಲ್ಲಿ ಹೊಸದಾಗಿ ಶಾಲೆ ನಿರ್ಮಾಣಗೊಳ್ಳುತ್ತಿದ್ದು, ಶಾಲೆಗೆ ತೆರಳಲು ರಸ್ತೆಯ ಸಮಸ್ಯೆ ಇದ್ದು, ಇರುವ ಕಾಲುದಾರಿಯ ಸುತ್ತಲೂ ಖಾಸಗಿ ಭೂಮಿ ಇದೆ. ಒತ್ತುವರಿ ಮಾಡಿ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸಭೆಗೆ ತಿಳಿಸಿದರು. ಜಿಪಂ ಸಿಇಒ ಮಹಮ್ಮದ್ ಹಾರಿಸ್ ಸುಮೇರ್ ಅವರು ಪ್ರತಿಕ್ರಿಯಿಸಿ ಈ ಕುರಿತು ಜಿಲ್ಲಾಧಿಕಾರಿಯವರೊಂದಿಗೆ ಚರ್ಚಿಸಲಾಗುವುದು ಎಂದರು.

ಸಭೆಯಲ್ಲಿ ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ, ಜಿಪಂ ಆಡಳಿತಾಧಿಕಾರಿ ಡಾ.ತ್ರಿಲೋಕ ಚಂದ್ರ ಕೆ.ವಿ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲಾ ಯೋಜನಾ ಸಮಿತಿಯ ಚುನಾಯಿತ ಸದಸ್ಯರು, ಮಹಾನಗರ ಪಾಲಿಕೆ ಸದಸ್ಯರು ಹಾಗೂ ಇತರರು ಉಪಸ್ಥಿತರಿದ್ದರು.

# ತೋಟಗಾರಿಕೆಯಲ್ಲಿ ಅತ್ಯಮೂಲ್ಯ ಬದಲಾವಣೆ ಕಾಣುತ್ತಿದೆ: ಕೆ.ರಾಘವೇಂದ್ರ ಹಿಟ್ನಾಳ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**



ಕಲ್ಯಾಣ ಕರ್ನಾಟಕದ ಹಣ್ಣಿನ ಕಣಜ ಎಂದೇ ಖ್ಯಾತಿ ಪಡೆದ ಕೊಪ್ಪಳ ಜಿಲ್ಲೆಯು ತೋಟಗಾರಿಕೆ ಕ್ಷೇತ್ರದಲ್ಲಿ ಅತ್ಯಮೂಲ್ಯ ಬದಲಾವಣೆಯನ್ನು ಕಾಣುತ್ತಿದೆ ಎಂದು ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿಯಮಿತದ ಅಧ್ಯಕ್ಷರು ಹಾಗೂ ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಹೇಳಿದರು.

ಅವರು ಗುರುವಾರ ಕೊಪ್ಪಳ ನಗರದ ತೋಟಗಾರಿಕೆ ಜಂಟಿ ನಿರ್ದೇಶಕರ ಕಚೇರಿ ಆವರಣದಲ್ಲಿ ರೈತರಿಂದ ನೇರವಾಗಿ ಗ್ರಾಹಕರಿಗೆ, ರೈತರಿಂದ ಖರೀದಿಸಿ ರೈತರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೊಪ್ಪಳ ತೋಟಗಾರಿಕೆ ಇಲಾಖೆಯಿಂದ ಶಿವರಾತ್ರಿ ಪ್ರಯುಕ್ತ ಫೆಬ್ರವರಿ 12 ರಿಂದ ಫೆ. 16 ರವರೆಗೆ ಏರ್ಪಡಿಸಲಾಗಿದ್ದ "ದ್ರಾಕ್ಷಿ, ದಾಳಿಂಬೆ, ಪೇರಲ, ಅಂಜೂರ, ಕಲ್ಲಂಗಡಿ, ಕರಬೂಜ, ಬಾಳೆ, ಪಪ್ಪಾಯ, ಹಲಸು, ಜೇನು ಹಾಗೂ ಅಣಬೆ" ಪ್ರದರ್ಶನ ಮತ್ತು ಮಾರಾಟ ಮೇಳ–2026ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ನಮ್ಮ ಜಿಲ್ಲೆಯು ತೋಟಗಾರಿಕೆ ಕ್ಷೇತ್ರದಲ್ಲಿ ದಿನದಿಂದ ದಿನಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಮುಂದೆ ಬರುತ್ತಿದ್ದು, ಇದಕ್ಕೆ ಕಾರಣ ರೈತರು, ವಾಣಿಜ್ಯ ಬೆಳೆಗಳಾದ ಮಾವಿನ ಹಣ್ಣು, ಬಾಳೆ, ದ್ರಾಕ್ಷೀ, ಪೇರಲ, ಪಪ್ಪಾಯ ಸೇರಿದಂತೆ ವಿವಿಧ ಹಣ್ಣುಗಳನ್ನು ಬೆಳೆಯುತ್ತಿದ್ದಾರೆ ಹಾಗೂ ಅಣಬೆ ಮತ್ತು ಜೇನು ಕೃಷಿಯಲ್ಲಿಯೂ ಹೆಚ್ಚು ಆಸಕ್ತಿ ತೋರುತ್ತಿರುವುದು ಮತ್ತೊಂದು ವಿಶೇಷವಾಗಿದೆ. ಈ ದಿಶೆಯಲ್ಲಿ ಕೊಪ್ಪಳ ತೋಟಗಾರಿಕೆ ಇಲಾಖೆಯಿಂದ ಮಾರುಕಟ್ಟೆ ಒದಗಿಸುವ ಕೆಲಸ ಆಗುತ್ತಿದೆ. ವಿಶೇಷವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ರೈತರಿಗೆ ಮನವರಿಕೆ ಮಾಡಿ ತೋಟಗಾರಿಕಾ ಬೆಳೆಗಳಿಗೆ ಹೆಚ್ಚು ಉತ್ತೇಜನ ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬರುತ್ತಿದ್ದಾರೆ. ಹಾಗಾಗಿ ಬೇರೆ ಬೇರೆ ಭಾಗಗಳಲ್ಲಿ ಬೆಳೆಯಲಾಗುತ್ತಿರುವ ವಿವಿಧ ತಳಿಯ ಹಣ್ಣುಗಳನ್ನು ಪ್ರಸ್ತುತ ನಮ್ಮ ಜಿಲ್ಲೆಯಲ್ಲಿ ಬೆಳೆಯಲಾಗುತ್ತಿದೆ ಎಂದರು. ನಮ್ಮ ರಾಜ್ಯ ಸರ್ಕಾರದಿಂದ ಕೊಪ್ಪಳ ಜಿಲ್ಲೆಯ ಕನಕಗಿರಿಯಲ್ಲಿ ತೋಟಗಾರಿಕೆ ಟೆಕ್ನಾಲಜಿ ಪಾರ್ಕ್ ಮಂಜೂರಾಗಿದ್ದು, ಇದರಿಂದ ನಮ್ಮ ಜಿಲ್ಲೆಯ ಬೆಳೆಗಳು ಮತ್ತು ಅವುಗಳ ಉತ್ಪನ್ನಗಳನ್ನು ದೇಶ, ವಿದೇಶಗಳಿಗೆ ಮಾರಾಟ ಮಾಡಲು ಎಲ್ಲಾ ರೈತರಿಗೆ ತುಂಬಾ ಅನುಕೂಲವಾಗಲಿದೆ. ಇಂತಹ ಮೇಳಗಳನ್ನು ಹಮ್ಮಿಕೊಳ್ಳುವ ಮೂಲಕ ತೋಟಗಾರಿಕೆಯತ್ತ ರೈತರ ಆಸಕ್ತಿಯನ್ನು ಮತ್ತಷ್ಟು ಹೆಚ್ಚಿಸಿ, ತೋಟಗಾರಿಕೆ ಬೆಳೆಗಾರರಿಗೆ ಉತ್ತೇಜನ ನೀಡುವ ಕೆಲಸವಾಗುತ್ತಿದೆ ಎಂದು ಹೇಳಿದರು.

ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾದ ಕೃಷ್ಣ ಉಕ್ಕುಂದ ಅವರು ಮಾತನಾಡಿ, ಶಿವರಾತ್ರಿ ಪ್ರಯುಕ್ತ 9ನೇ ವರ್ಷದ ಹಣ್ಣು, ಜೇನು ಮತ್ತು ಅಣಬೆ ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಫೆಬ್ರುವರಿ 16 ರವರೆಗೆ ಹಮ್ಮಿಕೊಳ್ಳಲಾಗಿದೆ. ಕೊಪ್ಪಳ ಜಿಲ್ಲೆಯ ಎಲ್ಲಾ ರೈತರು ಬೆಳೆದ ಹಣ್ಣುಗಳನ್ನು ಮಾರಾಟ ಮಾಡುತ್ತಿದ್ದಾರೆ. ವಿವಿಧ ಜೇನು ಉತ್ಪನ್ನಗಳನ್ನು ಸಹ ಮಾರಾಟ ಮಾಡಲಾಗುತ್ತಿದೆ. ಈ ವರ್ಷ ಅಣಬೆ ಮೇಳವನ್ನು ವಿಶೇಷವಾಗಿ ಮಾಡುತ್ತಿದ್ದು ಇದರ ತಳಿಗಳನ್ನು ಪ್ರದರ್ಶನಕ್ಕೆ ಇಡಲಾಗಿದೆ. ಜಗತ್ತಿನ ದುಬಾರಿ ಅಣಬೆ ಯರ್ಸಗುಂಬ ಅಣಬೆ ಇದರ ಬೆಲೆಯು ಒಂದು ಕೆ.ಜಿ.ಗೆ 15 ಲಕ್ಷ ರೂ. ಆಗಿದ್ದು, ಇದನ್ನು ಮೇಳದಲ್ಲಿ ಪ್ರದರ್ಶನಕ್ಕೆ ಇಡಲಾಗಿದೆ. ಈ ಅಣಬೆಯನ್ನು ಭಾರತ ದೇಶದ ಹಿಮಾಚಲ ಪ್ರದೇಶದಲ್ಲಿ ನೈಸರ್ಗಿಕವಾಗಿ ಬೆಳೆಯುತ್ತಾರೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಮೇಳದ ಸದುಪಯೋಗ ಪಡೆದುಕೊಳ್ಳಬೇಕೆಂದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಜಿಲ್ಲಾಧಿಕಾರಿ ಡಾ.ಸುರೇಶ ಬಿ. ಇಟ್ನಾಳ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ ಹಾಗೂ ಕೊಪ್ಪಳ ತಾಲ್ಲೂಕು ಅಧ್ಯಕ್ಷರಾದ ಬಾಲಚಂದ್ರನ್, ಹಿರಿಯ ಸಹಾಯಕ ತೋಟಗಾರಿಕೆ

ನಿರ್ದೇಶಕರಾದ ಮಂಜುನಾಥ ಲಿಂಗಣ್ಣವರ, ಸಂತೋಷ ಧರಣ, ದುರ್ಗಾಪ್ರಸಾದ, ಲಿಂಗನಗೌಡ, ಶಿವಯೋಗಪ್ಪ ಹಾಗೂ ಯೋಗೇಶ್ವರ ಸೇರಿದಂತೆ ಇತರೆ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ರೈತ ಉತ್ಪಾದಕರ ಸಂಸ್ಥೆ, ತೋಟಗಾರಿಕೆ ರೈತ ಉತ್ಪಾದಕರ ಸಂಸ್ಥೆಗಳು ಪ್ರತಿನಿಧಿಗಳು, ರೈತರು, ತೋಟಗಾರಿಕೆ ಬೆಳೆಗಾರರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಗೋವೇರಹಳ್ಳಿಯಲ್ಲಿ ಭಕ್ತಿ ಶ್ರದ್ಧೆಯಿಂದ ಉಚ್ಚಂಗೆಮ್ಮ ದೇವಿ ಕುಂಬೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಹರಪನಹಳ್ಳಿ (ಬಳ್ಳಾರಿ):**



ತಾಲೂಕಿನ ಗೋವೇರಹಳ್ಳಿ ಗ್ರಾಮದಲ್ಲಿ ಸುಕ್ಷೇತ್ರ ಉಚ್ಚಂಗೆಮ್ಮ ದೇವಿಯ ಜಾತ್ರಾ ಮಹೋತ್ಸವ ಮತ್ತು ಕುಂಬೋತ್ಸವ ಕಾರ್ಯಕ್ರಮ ಭಕ್ತಿ ಶ್ರದ್ಧೆ ಮತ್ತು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಫೇಬ್ರುವರಿ 10, 11 ಮತ್ತು 12ರಂದು ಮೂರು ದಿನಗಳ ಕಾಲ ಆಚರಿಸುವ ಈ ಜಾತ್ರಾ ಮಹೋತ್ಸವದಲ್ಲಿ ಪ್ರಥಮ ದಿನ ಸಿಹಿ ಅಡುಗೆ ಮಾಡಿ ದೇವಿಗೆ ಎಡೆ ನೀಡುವ ಮೂಲಕ ಭಕ್ತಿಯನ್ನು ಸಮರ್ಪಿಸಿದರು.

ಸಂಜೆವೇಳೆಗೆ ಶ್ರೀದೇವಿಯ ಮೂರ್ತಿಯನ್ನು ಪಲ್ಲಕ್ಕಿಯಲ್ಲಿಟ್ಟು ತಾಷ ಡೊಳ್ಳು ತಪ್ಪಡಿಗಳೊಂದಿಗೆ ಗ್ರಾಮದ ಬೀದಿ ಬೀದಿಗಳಲ್ಲಿ ಮೆರವಣಿಗೆಯನ್ನು ನಡೆಸಲಾಯಿತು. ಎರಡನೇ ದಿನ ಮುಂಜಾನೆಯಿಂದಲೇ ಭಕ್ತರು ಲಕ್ಕಿ ಗಿಡದ ಸೊಪ್ಪನ್ನು ಉಡು ಗೆಯ ರೋಪದಲ್ಲಿ ತೊಟ್ಟುಕೊಂಡು ದೇವಿಗೆ ತಮ್ಮ ಹರಕೆಯನ್ನು ತೀರಿಸಿದರು. ಸಂಜೆವೇಳೆಗೆ ಮಾಂಸದ ಅಡುಗೆಯ ಮಾಡಿ ದೇವಿಗೆ ಎಡೆನೀಡಿ ಭಕ್ತಿಯನ್ನು ಮೆರೆದರು.

ಎರಡನೇ ದಿನದ ರಾತ್ರಿ ಶ್ರೀದೇವಿ ಮಹಿಮೆ ಎಂಬ ಪೌರಾಣಿಕ ನಾಟಕವನ್ನು ಜಾತ್ರಾ ವಿಶೇಷವಾಗಿ ಹಮ್ಮಿಕೊಳ್ಳಲಾಗಿದೆ ಮರುದಿನ ರಾತ್ರಿ ಸಂಗೀತ ಪ್ರಿಯರಿಗಾಗಿ ಆರ್ಕೆಸ್ಟ್ರಾ ವ್ಯವಸ್ಥೆ ಆಯೋಜಿಸಲಾಗಿದೆ ಎಂದು ಸಮಿತಿಯ ಹಿರಿಯ ಮುಖಂಡರಾದ ಅಂಜನಪ್ಪ ತಿಳಿಸಿದ್ದಾರೆ.

ಶ್ರೀ ಉಚ್ಚಂಗೆಮ್ಮ ದೇವಿಯು ಸುಮಾರು ವರ್ಷಗಳ ಹಿಂದೆ ಗ್ರಾಮದಲ್ಲಿ ಪ್ರತಿಷ್ಠಾಪಿಸಲಾಗಿದ್ದು ಕಾಲಂತರವಾಗಿ ಅದನ್ನು ಪುನರ್ಜೀವನಗೊಳಿಸುತ್ತಾ ಮಾದರಿ ದೇವಸ್ಥಾನವನ್ನಾಗಿ ರೂಪಿಸಲಾಗಿದೆ, ಈ ಗ್ರಾಮ ದೇವತೆಯ ಅತ್ಯಂತ ವಿಶೇಷ ಸಂಗತಿ ಎಂದರೆ ಗುಡಿಯ ಅರ್ಚಕರಾಗಿ ಪರಿಶಿಷ್ಟ ಜಾತಿಯ ಹನುಮಂತಪ್ಪನವರು ಅರ್ಚಕರಾಗಿ ದೇವಸ್ಥಾನದ ಪೂಜಾ ಕೈಂಕರಗಳನ್ನು ನಡೆಸಿಕೊಂಡು ಹೋಗುತ್ತಿದ್ದರು. ಕಾಲ ನಂತರ ಅವರಿಗೆ ಗಂಡು ಸಂತಾನ ಇಲ್ಲದ ಕಾರಣ ಅವರ ಮಗಳನ್ನು ದೇವಸ್ಥಾನದ ಪರಿಚಾರಕಾರನ್ನಾಗಿ ನೇಮಿಸಿರುತ್ತಾರೆ. ನಂತರ ಅವರ ಮಗಳ ಸಂತಾನವಾದ ಪರಸಪ್ಪ ಎನ್ನುವವರು ಈಗ ಆ ದೇವಸ್ಥಾನದ ಎಲ್ಲಾ ಪೂಜೆಗಳು ಸೇರಿದಂತೆ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಹೋಗುತ್ತಿದ್ದಾರೆ ಇದು ಇಡೀ ವಿಜಯ ನಗರ ಜಿಲ್ಲೆಯಲ್ಲಿ ಅತ್ಯಂತ ವಿಶೇಷವಾದ ದೇವಸ್ಥಾನವಾಗಿದೆ ಎಂದು ಗ್ರಾಮದ ಮುಖಂಡರು ಮತ್ತು ದೇವಿಯ ಭಕ್ತರು ಅಭಿಪ್ರಾಯ ಪಡುತ್ತಾರೆ.

# ಆರೋಗ್ಯಕರ ಜೀವನ ಶೈಲಿಯಿಂದ ಕ್ಯಾನ್ಸರ್ ತಡೆಗಟ್ಟಬಹುದು: ರಮೇಶ್ ಬಾಬು

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಆರೋಗ್ಯಕರ ಜೀವನಶೈಲಿ, ಸಮತೋಲಿತ ಆಹಾರ, ನಿಯಮಿತ ವ್ಯಾಯಾಮ ಮತ್ತು ತಂಬಾಕು, ಮದ್ಯಪಾನ ತ್ಯಜಿಸುವುದರಿಂದ ಕ್ಯಾನ್ಸರ್ ತಡೆಗಟ್ಟಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಅಸಾಂಕ್ರಾಮಿಕ ರೋಗಗಳ ಸರ್ವೇಕ್ಷಣ ಘಟಕ ಇವರ ಸಹಯೋಗದಲ್ಲಿ "ವೈಶಿಷ್ಟದಲ್ಲಿ ಏಕತೆ" ಎಂಬ ಘೋಷವಾಕ್ಯದಡಿ "ವಿಶ್ವ ಕ್ಯಾನ್ಸರ್ ದಿನಾಚರಣೆ" ಅಂಗವಾಗಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಗಾಂಧಿನಗರದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದಲ್ಲಿ ಕ್ಯಾನ್ಸರ್ ಜಾಗೃತಿಗಾಗಿ ನವೆಂಬರ್ 7 ರಂದು ಪ್ರತ್ಯೇಕವಾಗಿ ರಾಷ್ಟ್ರೀಯ ಕ್ಯಾನ್ಸರ್ ಜಾಗೃತಿ ದಿನವನ್ನು ಆಚರಿಸಲಾಗುತ್ತದೆ ಎಂದರು. ಕ್ಯಾನ್ಸರ್



ಪೀಡಿತರಿಗೆ ಬೆಂಬಲ ನೀಡುವುದು, ರೋಗದ ಬಗ್ಗೆ ತಪ್ಪು ಕಲ್ಪನೆಗಳನ್ನು ತೊಡೆದುಹಾಕುವುದು ಮತ್ತು ಆರಂಭಿಕ ಪತ್ತೆಯ ಮಹತ್ವವನ್ನು ತಿಳಿಸಿದರು. ಜಿಲ್ಲಾ ಆಸಾಂಕ್ರಮಿಕ ರೋಗಗಳ ಕಾರ್ಯಕ್ರಮ ಅಧಿಕಾರಿ ಡಾ.ವೀರೇಂದ್ರ ಕುಮಾರ್ ಅವರು ಮಾತನಾಡಿ, ಆರೋಗ್ಯ ಇಲಾಖೆಯಲ್ಲಿ ದೊರೆಯುವಂತಹ ಎಲ್ಲಾ ಸೇವಾ ಸೌಲಭ್ಯಗಳನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು. ಇದೇ ವೇಳೆ ವಿಶ್ವ ಕ್ಯಾನ್ಸರ್ ದಿನಾಚರಣೆ ಪ್ರಯುಕ್ತ ವಿವಿಧ ರೀತಿಯ ಕ್ಯಾನ್ಸರ್ ಬಗ್ಗೆ ನಾಗರಿಕರಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ಜನರಿಗೂ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದೊತ್ತಡ, ಮಧುಮೇಹ ಪರೀಕ್ಷೆ ಕೈಗೊಳ್ಳಲಾಯಿತು ಹಾಗೂ ಕ್ಯಾನ್ಸರ್ ಸಂಬಂಧಿಸಿದ ಕಾಯಿಲೆ ಬಗ್ಗೆ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಡಾ.ಬಿನೋ ಬೈಟ್ ಕ್ಯಾನ್ಸರ್ ಹುಬ್ಬಳ್ಳಿ ಸೂಪರ್ ಸ್ಪೆಷಾಲಿಟಿ ಹಾಸ್ಪಿಟಲ್ ದಂತವೈದ್ಯಾಧಿಕಾರಿ ಡಾ.ವಿಶಾಲಾಕ್ಷಿ, ಸ್ತ್ರೀರೋಗ ತಜ್ಞರಾದ ಡಾ.ಪ್ರಶಾಂತ್ ಕುಮಾರ್ ಜಿ.ಎನ್., ಡಾ.ಚೇತನ್,

ಜನರಲ್ ಮೆಡಿಸನ್ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಗಾಂಧಿನಗರದ ಡಾ.ಚಂದನ, ಡಾ.ಸಾತ್ವಿಕ್, ಎನ್ ಸಿ ಡಿ ಸಲಹೆಗಾರ ಡಾ.ಜಬಿನ್ ತಾಜ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಮತ್ತು ಎನ್.ಸಿ.ಡಿ ಸಿಬ್ಬಂದಿ, ಸಾರ್ವಜನಿಕರು ಭಾಗವಹಿಸಿದ್ದರು.

## ಡೆಂಟಲ್ ಕಾಲೇಜಿನಲ್ಲಿ ಆ್ಯಂಟಿ ರ್‍ಯಾಗಿಂಗ್ ವಿಚಾರ ಸಂಕಿರಣ

# ಕ್ರಿಯಾತ್ಮಕ ವಿಚಾರಗಳಿಂದ ರ್‍ಯಾಗಿಂಗ್ ನಿರ್ಮೂಲನೆ: ಶಿವಶರಣ




• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ವಿದ್ಯಾರ್ಥಿಗಳು ಅಧ್ಯಯನ ಮತ್ತು ಕ್ರಿಯಾತ್ಮಕ ವಿಚಾರಗಳಲ್ಲಿ ಸಮಯ ವಿನಿಯೋಗಿಸುವುದು ಅಗತ್ಯವಾಗಿದೆ. ಕ್ರಿಯಾತ್ಮಕ ವಿಚಾರಗಳಿಂದ ರ್‍ಯಾಂಗಿಗ್ ಪಿಡುಗನ್ನು ನಿರ್ಮೂಲನೆ ಮಾಡಲು ಸಾಧ್ಯವಿದೆ ಎಂದು ಭಾರತೀಯ ದಂತ ವೈದ್ಯಕೀಯ ಮಂಡಳಿ ಸದಸ್ಯ ಡಾ.ಶಿವಶರಣ ಶೆಟ್ಟಿ ಅಭಿಪ್ರಾಯಪಟ್ಟರು.

ಬಿ.ವಿ.ವಿ ಸಂಘದ ಪಿ.ಎಮ್. ಎನ್.ಎಮ್ ದಂತ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ರ್‍ಯಾಗಿಂಗ್ ವಿರೋಧಿ ಅಭಿಯಾನದ ವಿಚಾರ ಸಂಕಿರಣದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಬದುಕಿನಲ್ಲಿ ತಾನು ಏನು ಮಾಡಬೇಕು ಎಂದು ನಿರ್ಧರಿಸುವ ಜವಾಬ್ದಾರಿ ವಿದ್ಯಾರ್ಥಿಗಳ ಮೇಲಿದೆ. ಈ ದಿಸೆಯಲ್ಲಿ ನಿಮ್ಮ ವಿಚಾರಗಳು ಕ್ರಿಯಾತ್ಮಕವಾಗಿದು ಹೊಸತನದಿಂದ ಕೂಡಿರಲಿ. ಹೊಸ ತಂತ್ರಜ್ಞಾನ ದಂತ ವೈದ್ಯಕೀಯ ಕ್ಷೇತ್ರಕ್ಕೆ ಕಾಲಿಟ್ಟಿದೆ. ತಂತ್ರಜ್ಞಾನವನ್ನು ಬಳಸಿಕೊಂಡು ದಂತ ವೈದ್ಯಕೀಯ ಕ್ಷೇತ್ರದಲ್ಲಿ ಪ್ರಗತಿ ಮತ್ತು ಬದಲಾವಣೆ ಮಾಡಿ ಎಂದು ಹೇಳಿದರು.

ಪ್ರಾಚಾರ್ಯ ಡಾ.ರವಿರಾಜ ದೇಸಾಯಿ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಯಶಸ್ಸಿಗೆ ಕಾಲೇಜುಗಳಲ್ಲಿ ರ್‍ಯಾಗಿಂಗ್ ಮುಕ್ತ ವಾತಾವರಣದ ಅವಶ್ಯಕತೆ ಇದೆ ಎಂದು ಹೇಳಿದರು. ಕಾಲೇಜಿನ ಆ್ಯಂಟಿ ರ್‍ಯಾಗಿಂಗ್ ಸಮಿತಿಯ ನೋಡಲ್ ಅಧಿಕಾರಿ ಡಾ.ಕಾಶಿನಾಥ ಅರಬ್ಬಿ ಮತ್ತು ನವನಗರ ಸಿ.ಪಿ.ಆಯ್ ಅಶೋಕ ಚವ್ಹಾಣ ಉಪಸ್ಥಿತರಿದ್ದರು.

ಅತಿಥಿಗಳನ್ನು ಕಾಲೇಜಿನ ಪರವಾಗಿ ಸನ್ಮಾನಿಸಲಾಯಿತು. ವಿಚಾರ ಸಂಕಿರಣದಲ್ಲಿ ಮಹಾವಿದ್ಯಾಲಯದ ಎಲ್ಲ ವಿಭಾಗಗಳ ಮುಖ್ಯಸ್ಥರು, ವೈದ್ಯ ಸಿಬ್ಬಂದಿ, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಡಾ.ಸಿದ್ಧರಾಮ ಪಾಟೀಲ ಪರಿಚಯಿಸಿದರು. ಡಾ.ನಿವೇದಿತಾ ವಂದಿಸಿದರು. ಡಾ.ವಿಜಯಲಕ್ಷ್ಮಿ ನಿರೂಪಿಸಿದರು.

# ಸಂಭ್ರಮದ ನೂರ ಅಲಿ ಶಹಾ ಬಾಬಾ ಉರುಸ್



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ತಾಲೂಕಿನ ಕಲಾದಗಿಯಲ್ಲಿ ಹಿಂದೂ ಮುಸ್ಲಿಂ ಭಾವೈಕ್ಯದ ಸೂಫಿ ಸಂತ ಹಜರತ್ ನೂರ್‌ಅಲಿ ಶಹಾ ಬಾಬಾ ಅವರ ಉರುಸ್ ಗುರುವಾರ ಸಡಗರ ಸಂಭ್ರಮದಿಂದ ಜರುಗಿತು.

ಹಿಂದೂ ಮುಸ್ಲಿಮರು ಸೇರಿ ದೇವರಿಗೆ ಊದುಬತ್ತಿ, ಸುಗಂಧ ದ್ರವ್ಯ, ಲೋಭಾನ, ಸಕ್ಕರೆ, ಮಾದಲಿ ನೈವೇದ್ಯಗಳನ್ನು ಅರ್ಪಿಸಿ ದೇವರನ್ನು ನೆನೆದು ಭಕ್ತಿ ಮೆರೆದರು. ಬೆಳಿಗ್ಗೆನಿಂದಲೇ ದರ್ಗಾದಲ್ಲಿ ವಿವಿಧ ಧಾರ್ಮಿಕ ವಿಧಿ ವಿಧಾನಗಳು ಜರುಗಿದವು. ಬಾಬಾರ ಕರ್ತೃ ಗದ್ದುಗೆಗೆ ಹಾಗೂ ದರ್ಗಾದ ಆವರಣವನ್ನು ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ಮಧ್ಯಾಹ್ನ ಅನ್ನ ಸಂತರ್ಪಣೆ ಜರುಗಿತು.

ಫೆ.13 ರಂದು ಶುಕ್ರವಾರ ರಾತ್ರಿ 9:30ಕ್ಕೆ ಅಂತರಾಷ್ಟ್ರೀಯ ಖ್ಯಾತಿಯ ಕವ್ವಾಲಿ ಗಾಯಕರಾದ ರಾಜಸ್ಥಾನದ ನುಸರತ್ ಖಾದ್ರಿ ಹಾಗೂ ಉತ್ತರ ಪ್ರದೇಶದ ರೈಸ್ ಅನೀಸ್ ಶಾಬ್ರಿ ನಡುವೆ ತುರುಸಿನ ಸವಾಲ್-ಜವಾಬ್ ನಡೆಯಲಿದೆ.

## ಬಳ್ಳಾರಿ ನಗರ ಡಿವೈಎಸ್ಪಿ ವರ್ಗಾ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಈವರೆಗೆ ನಗರ ಡಿವೈಎಸ್ಪಿಯಾಗಿದ್ದ ಚಂದ್ರಕಾಂತ್ ನಂದರೆಡ್ಡಿ ಅವರು ರಾಜ್ಯ ಗುಪ್ತವಾರ್ತೆಗೆ ವರ್ಗಾವಣೆ ಮಾಡಲಾಗಿದೆ. ಬೆಂಗಳೂರು ಸಿಸಿಬಿಯಲ್ಲಿದ್ದ ಗೋವಿಂದರಾಜು ವಿ. ಅವರು ನಂದರೆಡ್ಡಿ ಅವರ ಸ್ಥಾನಕ್ಕೆ ಬರಲಿದ್ದಾರೆ. ನಗರದಲ್ಲಿ ಕಳೆದ ಜ.1 ರಂದು ನಡೆದಿದ್ದ ಬ್ಯಾನರ್ ಗಲಾಟೆ ಮತ್ತು ಫೈರಿಂಗ್ ಪ್ರಕರಣವನ್ನು ನಿಭಾಯಿಸಲು ನಂದಾರೆಡ್ಡಿ ಅವರು ವಿಫಲವಾಗಿದ್ದಾರೆಂದು ಬಿಜೆಪಿಯ ಮುಖಂಡರು ಆರೋಪ ಮಾಡಿದ್ದಲ್ಲದೆ, ಅವರ ವರ್ಗಾವಣೆ ಮಾಡಲು ಆಗ್ರಹಿಸಿದ್ದರು.

ಬಿಜೆಪಿಯ ಬೇಡಿಕೆ ಹಿನ್ನಲೆಯಲ್ಲಿ. ಸರ್ಕಾರ ಜ.27 ರಂದು ನಂದರೆಡ್ಡಿಯವರನ್ನು ಸ್ಥಳ ತೋರಿಸದೆ ಇವರ ಸ್ಥಾನಕ್ಕೆ ಐಪಿಎಸ್ ಅಧಿಕಾರಿ ಯಶ್ ಕುಮಾರ್ ಶರ್ಮ ಅವರನ್ನು ನೇಮಕ ಮಾಡಿತ್ತು.

ಆದರೆ ಬ್ಯಾನರ್ ಗಲಾಟೆಯ ಆರೋಪದಿಂದ ವರ್ಗಾವಣೆ ಆಗಲು ಒಪ್ಪದೆ ತಮ್ಮದೇ ಪ್ರಭಾವ ಬಳಿಸಿ. ನಗರ ಡಿವೈಎಸ್ಪಿ ಯಾಗಿ ನಿಯೋಜಿತಗೊಂಡು ನಗರಕ್ಕೆ ಆಗಮಿಸಿ, ಡಿವೈಎಸ್ಪಿ ಕಚೇರಿಯಲ್ಲಿ ಕುಳಿತು, ಅಧಿಕಾರ ಸ್ವೀಕರಿಸಲು ಆಗದೇ ಐಪಿಎಸ್ ಅಧಿಕಾರಿ ಯಶ್ ಕುಮಾರ್ ಶರ್ಮ ವಾಪಸ್ ಹೋಗುವಂತೆ ಮಾಡಿದ್ದರು.

ನಂತರ ಅವರೇ ಸರ್ಕಾರಕ್ಕೆ ಪತ್ರಬರೆದು ಸಾಮಾನ್ಯ ವರ್ಗಾವಣೆ ಮಾಡಿದರೆ ನನ್ನ ಅಭ್ಯಂತರ ಇಲ್ಲ ಎಂದಿದ್ದರಂತೆ. ಈಗ ರಾಜ್ಯದ 23 ಜನ ಡಿವೈಎಸ್ಪಿಗಳ ವರ್ಗಾವಣೆಯಲ್ಲಿ ಇವರು ಒಬ್ಬರಾಗಿದ್ದು ಅಲ್ಲದೆ ಬೆಂಗಳೂರಿಗೆ ವರ್ಗಗೊಂಡಿದ್ದಾರೆ.

# ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ




• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ನವನಗರದ ಸೆಕ್ಟರ ನಂ.43 ರಲ್ಲಿರುವ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನ ಸಭಾಭವನದಲ್ಲಿ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ಆಚರಿಸಲಾಯಿತು.

ಜಿಲ್ಲಾಧಿಕಾರಿ ಸಂಗಪ್ಪ, ವಿದ್ಯಾರ್ಥಿಗಳಿಗೆ ಸಾಮೂಹಿಕವಾಗಿ ಅಲ್ಬೆಂಡಾಜೋಲ್ ಮಾತ್ರೆಯನ್ನು ನುಂಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ರಾಷ್ಟ್ರದಲ್ಲಿ ಅಪೌಷ್ಠಿಕತೆಯಿಂದ ಬಳಲುವ ಮಕ್ಕಳ ಸಂಖ್ಯೆ ಹೆಚ್ಚಾಗಿದೆ. ಇದನ್ನು ಕಡಿಮೆ ಮಾಡುವ ಉದ್ದೇಶದಿಂದ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಜಂತುಹುಳು ಬಾಧೆಯಿಂದ ಮಕ್ಕಳನ್ನು ರಕ್ಷಿಸಲು ಜಂತುಹುಳು ನಿವಾರಣಾ ಮಾತ್ರೆಗಳನ್ನು ನೀಡಲಾಗುತ್ತಿದೆ ಎಂದರು.

ಜಂತುಹುಳು ನಿರ್ಮೂಲನೆಯಿಂದಾಗ ಮಕ್ಕಳು ಸೇವನೆ ಮಾಡುವ ಪೌಷ್ಠಿಕ ಆಹಾರ ಮಕ್ಕಳ ದೇಹಕ್ಕೆ ಸರಿಯಾದ ರೀತಿಯಲ್ಲಿ ಲಭ್ಯವಾಗುತ್ತದೆ. ಜಂತುಹುಳು ನಿರ್ಮೂಲನೆಗೆ ಮಾತ್ರೆ ಸೇವಿಸುವುದು ಮಾತ್ರವಲ್ಲದೇ ಶೌಚಾಲಯಕ್ಕೆ ಹೋಗಿ ಬಂದ ನಂತರ ಹಾಗೂ ಊಟಕ್ಕೆ ಮುನ್ನ ಕೈಗಳನ್ನು ಚೆನ್ನಾಗಿ ತೊಳೆಯುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕೆಂದು ಡಿಸಿ ಸಲಹೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ.ಎನ್ ಮಾತನಾಡಿ, ರಾಷ್ಟ್ರೀಯ ಜಂತುಹುಳು ನಿರ್ಮೂಲನಾ ದಿನದ ಅಂಗವಾಗಿ 1-19 ವರ್ಷದೊಳಗಿನ ಎಲ್ಲ ಅಂಗನವಾಡಿ ಕೇಂದ್ರ, ಸರಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಖಾಸಗಿ

ಶಾಲೆಗಳು ಸೇರಿದಂತೆ ಕಾಲೇಜು ಮಕ್ಕಳಿಗೆ ಉಚಿತವಾಗಿ ಜಂತು ಹುಳು ನಿವಾರಣೆಗೆ ಮಾತ್ರೆ ನೀಡಲಾಗುತ್ತಿದೆ. ತರಗತಿಗಳಿಗೆ ಗೈರು ಹಾಜರಾದ ಮಕ್ಕಳಿಗೆ ಮತ್ತೆ ಫೆಬ್ರವರಿ 16 ರಂದು ಮಾಪ್ ಅಪ್ ದಿನ ಮಾತ್ರೆ ನೀಡಲಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ರಾಜಕುಮಾರ ಯರಗಲ್ಲ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ತಾಲೂಕಾ ಆರೋಗ್ಯಾಧಿಕಾರಿ ಡಾ.ಸರಸ್ವತಿ ಮಾಗಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಶಿಕಲಾ ಶಿನ್ನೂರ, ಆರ್.ಕೆ.ಎಸ್‌ಕೆ ಕಾರ್ಯಕ್ರಮ ಸಂಯೋಜಕ ವಿವೇಕ ಬೆಂಡಿಗೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮಾನ್-ಧನ್ ಯೋಜನೆ

# ನೋಂದಣಿಗೆ ಜಿಲ್ಲೆಯಾದ್ಯಂತ ವಿಶೇಷ ಅಭಿಯಾನ : ಡಿಸಿ ಸಂಗಪ್ಪ




• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಅಸಂಘಟಿತ ವಲಯದ ಕಾರ್ಮಿಕರಿಗೆ ವಯೋವೃದ್ದ ವೇಳೆಯಲ್ಲಿ ಸಾಮಾಜಿಕ ಭದ್ರತೆ ಕಲ್ಪಿಸಲು ಪ್ರಧಾನಮಂತ್ರಿ ಶ್ರಮಯೋಗಿ ಮಾನ್ ಧನ್ ಯೋಜನೆಯಡಿ ಪಿಂಚಣಿ ಸೌಲಭ್ಯ ಒದಗಿಸಲು ಜಿಲ್ಲೆಯಲ್ಲಿ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ಪ್ರಧಾನಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆ ಅನುಷ್ಠಾನ ಕುರಿತು ಜರುಗಿದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನೋಂದಣಿಗೆ ಮಾರ್ಚ 15 ವರೆಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, 18 ರಿಂದ 40 ವರ್ಷದೊಳಗಿನ ಹಾಗೂ ಮಾಸಿಕ ಆದಾಯ 15 ಸಾವಿರ ರೂ. ಅಥವಾ ಅದಕ್ಕಿಂತ ಕಡಿಮೆ ಇರುವ ಅಸಂಘಟಿತ ವಲಯದ ಕಾರ್ಮಿಕರು ಈ ಯೋಜನೆಯಡಿ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ 55 ರೂ.ಗಳಿಂದ 200 ರೂ.ಗಳ ವರೆಗೆ ವಂತಿಗೆ ಪಾವತಿಸಬೇಕಾಗುತ್ತದೆ. ಕೇಂದ್ರ ಸರಕಾರವು ಚಂದಾದಾರರು ಪಾವತಿಸವ ವಂತಿಗೆಗೆ ಸಮಾನಾಂತರವಾಗಿ ವಂತಿಕೆಯನ್ನು ಪಿಂಚಣಿ ಖಾತೆಗೆ ಪಾವತಿಸುತ್ತದೆ. ಅರ್ಹ ಅಸಂಘಟಿತ ಕಾರ್ಮಿಕರು ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ (ಸಿಎಸ್‌ಸಿ) ನೋಂದಣಿ ಮಾಡಿಕೊಳ್ಳಬಹುದಾಗಿದೆ. ಫಲಾನುಭವಿಗಳು 60 ವರ್ಷ

ಪೂರ್ಣಗೊಂಡ ನಂತರ ತಿಂಗಳಿಗೆ 3 ಸಾವಿರ ರೂ.ಗಳ ಪಿಂಚಣಿ ಪಡೆಯಬಹುದಾಗಿದೆ. ಪಿಂಚಣಿ ಆರಂಭಗೊಂಡ ನಂತರ ಚಂದಾದಾರು ಮೃತಪಟ್ಟಲ್ಲಿ ಅವರ ಪತ್ನಿ, ಪತಿ ಮಾತ್ರ ಶೇ.50 ರಷ್ಟು ಪಿಂಚಣಿ ಪಡೆಯಬಹುದಾಗಿದೆ ಎಂದರು.

ಈ ಯೋಜನೆಯಡಿ ಗೃಹ ಆಧಾರಿತ ಕಾರ್ಮಿಕರು, ಬೀದಿ ಬದಿ ವ್ಯಾಪಾರಿಗಳು, ಬಿಸುಊಟ ಸಿದ್ದಪಡಿಸುವವರು, ಹಮಾಲಿಗಳು, ಇಟ್ಟಿಗೆಭಟ್ಟಿಕಾರ್ಮಿಕರು, ಚಮ್ಮಾರರು, ಚಿಂದಿ ಆಯುವವರು, ಮನೆ ಕೆಲಸದವರು, ಅಗಸರು, ರಿಕ್ಷಾ ಚಾಲಕರು, ಭೂರಹಿತ ಕಾರ್ಮಿಕರು, ಸ್ವಯಂ ಉದ್ಯೋಗಿಗಳು, ಕೃಷಿ ಮತ್ತು ಕಟ್ಟಡ

ಕಾರ್ಮಿಕರು, ಬೀಡಿ ಕಾರ್ಮಿಕರು, ಕೈಮಗ್ಗ, ಚರ್ಮೋದ್ಯಮದ ಕಾರ್ಮಿಕರು, ಧ್ವನಿ ಮತ್ತು ದೃಶ್ಯ ಕಾರ್ಮಿಕರು ತಮ್ಮ ಆಧಾರ ಕಾರ್ಡ, ಬ್ಯಾಂಕ್ ಪಾಸ್‌ಬುಕ್ ಹಾಗೂ ಮೊದಲ ತಿಂಗಳ ವಂತಿಕೆಯೊಂದಿಗೆ ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ (ಸಿಎಸ್‌ಸಿ) ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಅಸಂಘಟಿತ ವಲಯದ ಕಾರ್ಮಿಕರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳುವ ನಿಟ್ಟಿನಲ್ಲಿ ವ್ಯಾಪಕ ಜಾಗೃತಿ ಮೂಡಿಸಿ, ಸೂಕ್ತ ಸ್ಥಳಗಳಲ್ಲಿ ಹಾಗೂ ಸಂತೆ ಮತ್ತು ಜಾತ್ರೆಗಳಲ್ಲಿ ಶಿಬಿರ ಆಯೋಜನೆಗೆ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ತಾಲೂಕಾ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನೋಂದಣಿಗೆ ವಿವಿಧ ಅಸಂಘಟಿತ ವಲಯಗಳ ಸಂಘಟನೆಗಳ ಪ್ರತಿನಿಧಿಗಳು ಜನರಲ್ಲಿ ಅರಿವು ಮೂಡಿಸುವ ಕೆಲಸ ಆಗಬೇಕು ಎಂದರು.

ಅಸಂಘಟಿತ ವಲಯದ ಕಾರ್ಮಿಕರಿಗೆ ನೀಡುವ ಸ್ಮಾರ್ಟ ಕಾರ್ಡ ಕಚೇರಿಗೆ ಬಂದು ಬಹಳದಿನವಾಗಿದ್ದು, ವಿತರಣೆಗೆ ವಿಳಂಭವಾಗುತ್ತಿದೆ ಎಂದು ವಿವಿಧ ವಲಯದ ಸಂಘಟನೆಗಳ

ಪ್ರತಿನಿಧಿಗಳು ಸಭೆಗೆ ತಿಳಿಸಿದ್ದಾರೆ. ಈ ಕುರಿತು ಮಾತನಾಡಿದ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಅವರು ಒಂದು ವಾರದಲ್ಲಿ ಸ್ಮಾರ್ಟ ಕಾರ್ಡಗಳ ವಿತರಣೆಗೆ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ವಾಹನ ಚಾಲಕರ ಕಾರ್ಡಗಳನ್ನು ಸಾಂಕೇತಿಕವಾಗಿ ವಿತರಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ, ಕಾರ್ಮಿಕ ನಿರೀಕ್ಷಕರಾದ ರಾಜಶೇಖರ, ರಮೇಶ ಒಂಗಿ, ಅಶೋಕ ವಡ್ಡರ, ರಾಕೇಶ ಹಾಗೂ ಅಸಂಘಟಿತ ವಲಯದ ವಿವಿಧ ಸಂಘಟನೆಗಳ ಪ್ರತಿನಿಧಿಗಳಾದ ನೂರಂದ ತೆ-ಊಟದ,

ಪರಶುರಾಮ ಕಂಬಾರ, ಸುರೇಶ ಹಡಪದ, ಕಟ್ಟಡ ಕಾರ್ಮಿಕ ಸಂಘದ ರವಿಕುಮಾರ ನಾಗನಗೌಡ ಹಾಗೂ ಇತರರು ಉಪಸ್ಥಿತರಿದ್ದರು.

## ಬೀದಿನಾಯಿ ಕಚ್ಚಿ ಮೃತಳಾದ ಬಾಲಕಿ

# ಕುಟುಂಬಕ್ಕೆ 5ಲಕ್ಷ ಪರಿಹಾರ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಬೀದಿನಾಯಿ ಕಚ್ಚಿದ್ದರಿಂದಾಗಿ ಮೃತಪಟ್ಟಿದ್ದ ನವನಗರದ 10 ವರ್ಷದ ಬಾಲಕಿ ಅಲೈನಾ ರಾಜೇಸಾಬ ಲೋಕಾಪೂರ ಕುಟುಂಬಕ್ಕೆ ಬಾಗಲಕೋಟೆ ನಗರಸಭೆ ನಿಧಿಯಿಂದ 5 ಲಕ್ಷ ರೂ.ಗಳ ಪರಿಹಾರದ ಚೆಕ್‌ನ್ನು ಜಿಲ್ಲಾಧಿಕಾರಿ ಸಂಗಪ್ಪ ವಿತರಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ದಿ ಕೋಶದ ಯೋಜನಾ ನಿರ್ದೇಶಕಿ ರೇಣುಕಾ ಎಂ, ನಗರಸಭೆ ಪೌರಾಯುಕ್ತ ವಾಸಣ್ಣ ಆರ್, ಅಯ್ಯುಬ್ ಪುಣೇಕಾರ, ಅಮೀನಸಾಬ ರಕ್ಕಸಗಿ, ಸಿಕಂದರ ಅಥಣಿ, ಮಲಿಕಸಾಬ ಪಾರ್ಷಿ ಹಾಗೂ ಇತರರು ಇದ್ದರು.

## ತಹಶೀಲ್ದಾರ ಕಚೇರಿಗೆ ಡಿಸಿ ಭೇಟಿ :

# ಕಾರ್ಯವೈಖರಿ ಪರಿಶೀಲನೆ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಮಖಂಡಿ ತಾಲೂಕಿನ ತಹಶೀಲ್ದಾರ ಕಚೇರಿಗೆ ಜಿಲ್ಲಾಧಿಕಾರಿ ಬುಧವಾರ ಭೇಟಿ ನೀಡಿ ವಿವಿಧ ವಿಭಾಗಗಳ ಕಾರ್ಯವೈಖರಿಯನ್ನು ಸಮಗ್ರವಾಗಿ ಪರಿಶೀಲಿಸಿದರು.

ಸಾರ್ವಜನಿಕರ ಅರ್ಜಿ ವಿಲೇವಾರಿ, ಕಡತಗಳ ನಿರ್ವಹಣೆ ಸೇರಿದಂತೆ ಇತರೆ ಕಾರ್ಯಗಳ ಪ್ರಗತಿ ಕುರಿತು ಅಧಿಕಾರಿಗಳಿಂದ ವಿವರವಾದ ಮಾಹಿತಿಯನ್ನು ಪಡೆದುಕೊಂಡರು. ಮುಖ್ಯವಾಗಿ ಕಚೇರಿಯನ್ನು ಸ್ವಚ್ಛವಾಗಿಟ್ಟುಕೊಂಳ್ಳಲು ಸೂಚನೆ ನೀಡಿದರು. ನಂತರ ಜಮಖಂಡಿ ತಾಲ್ಲೂಕು ಕ್ರೀಡಾಂಗಣಕ್ಕೆ ಭೇಟಿ ನೀಡಿ, ಜಿಲ್ಲಾಧಿಕಾರಿಗಳು ಕ್ರೀಡಾಂಗಣದಲ್ಲಿನ ಜಿಮ್, ಒಳಾಂಗಣ ಕ್ರೀಡಾಂಗಣಗಳನ್ನು ಪರಿಶೀಲಿಸಿ ಅಗತ್ಯ ರಿಪೇರಿಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡದರು.

ಜಮಖಂಡಿ ನಗರದ ಗಿರೀಶ ನಗರದಲ್ಲಿರುವ ಶಾಸಕರ ಮಾದರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ಶಾಲಾ ಮಕ್ಕಳೊಂದಿಗೆ ಸಂದರ್ಶನ ಮಾಡಿದರು.

ಶಿಕ್ಷಕರು & ಮಕ್ಕಳಿಗೆ ಅಗತ್ಯ ಮಾರ್ಗದರ್ಶನ ನೀಡಿದರು. ನಂತರ ಜಮಖಂಡಿ ಸರಕಾರಿ ಆಸ್ಪತ್ರೆಗೆ ಭೇಟಿ ನೀಡಿ, ಆಸ್ಪತ್ರೆ ಆವರಣದ ಸ್ವಚ್ಛತೆಯ ಬಗ್ಗೆ ಪರಿಶೀಲಿಸಿದರು. ರೋಗಿಗಳ ಆರೋಗ್ಯಕ್ಷೇಮದ ಬಗ್ಗೆ ವಿಚಾರಿಸಿ, ಔಷಧಿಗಳ ಗುಣಮಟ್ಟದ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ, ಸೂಕ್ತ ಸಲಹೆ ಸೂಚನೆ ನೀಡಿದರು.

ಭೇಟಿ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಜಮಖಂಡಿ ತಹಶಿಲ್ದಾರ ಅನೀಲ ಬಡಿಗೇರ ಸೇರಿದಂತೆ ಇತರೆ ಅಧಿಕಾರಿಗಳು

## ತಂಬಾಕು ಮಾರಾಟ ಅಂಗಡಿಗಳ ಮೇಲೆ ದಾಳಿ

# 25 ಪ್ರಕರಣ ದಾಖಲು, 6500 ದಂಡ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಿಲ್ಲೆಯಲ್ಲಿ ತಂಬಾಕು ನಿಯಂತ್ರಣ-ಕ್ಕೆ ಸಂಬಂಧಿಸಿದಂತೆ ತಂಬಾಕು ಮಾರಾಟ ಅಂಗಡಿಗಳ ಮೇಲೆ ದಾಳಿ ಮುಂದುವರಿದಿದ್ದು, ಗುರುವಾರ ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ಅಧಿಕಾರಿಗಳು ಅಧಿಕಾರಿಗಳು ಕೊಟ್ಪಾ ಕಾಯ್ದೆ ಉಲ್ಲಂಘನೆ ಆರೋಪದಲ್ಲಿ ಒಟ್ಟು 25 ಪ್ರಕರಣಗಳನ್ನು ದಾಖಲಿಸಿ, 6500 ಗಳ ದಂಡ ವಿಧಿಸಿದರು. ತಂಡ ತಂಬಾಕು ಮಾರಾಟಗಾರರಿಗೆ ಅಂಗಡಿಗಳಲ್ಲಿ ಕಡ್ಡಾಯವಾಗಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಫಲಕ ಅಳವಡಿಸಬೇಕು.

ಶಿಕ್ಷಣ ಸಂಸ್ಥೆಗಳ ಸುತ್ತಮುತ್ತ 100 ಗಜ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ನಿಷೇಧವಾಗಿದ್ದು, ಉಲ್ಲಂಘಿಸಿದರೆ ದಂಡ ಹಾಗೂ ಸೆರೆವಾಸ ಶಿಕ್ಷೆ ವಿಧಿಸಲಾಗುತ್ತದೆ ಎಂದು ಅಧಿಕಾರಿಗಳು ಎಚ್ಚರಿಸಿದರು. ದಾಳಿಯಲ್ಲಿ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆನ್ನವರ,



ನವನಗರದಲ್ಲಿ ದಿಢೀರ್ ದಾಳಿ ನಡೆಸಿ ನಿಯಮ ಉಲ್ಲಂಘಿಸಿದವರಿಗೆ ದಂಡ ವಿಧಿಸಿದರು.

ತಂಬಾಕು ಉತ್ಪನ್ನಗಳ ಸಗಟು ಹಾಗೂ ಚಿಲ್ಲರೆ ಮಾರಾಟಗಾರರ ಅಂಗಡಿಗಳ ಮೇಲೆ ದಾಳಿ ನಡೆಸಿದ ತಂಬಾಕು ಮಾರಾಟ ಪರವಾನಿಗೆ ಹೊಂದಿರಬೇಕು ಹಾಗೂ ತಂಬಾಕು ಉತ್ಪನ್ನಗಳ ಜಾಹೀರಾತುಗಳನ್ನು ಗೋಡೆ ಬರಹ, ಹೋರ್ಡಿಂಗ್ಸ್, ದೃಶ್ಯ ಮತ್ತು ಮುದ್ರಣ ಮಾಧ್ಯಮಗಳ ಮೂಲಕ ಮಾಡಬಾರದು ಎಂದು ಕರಪತ್ರ ವಿತರಿಸುವಂತೆ ತಿಳಿಸಲಾಯಿತು.

ಜಿಲ್ಲಾ ತಂಬಾಕು ಸಲಹೆಗಾರ ಶಶಿಕಾಂತ ಕುಮಠಳ್ಳಿ, ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ಬಸವರಾಜ ಹೊಸಳ್ಳಿ ಹಾಗೂ ತನಿಖಾ ದಳದ ಇತರ ಸದಸ್ಯರು ಭಾಗವಹಿಸಿದ್ದರು.

# ಸಮಾಜಸೇವಕಿ ಆಶಾ ಜನ್ಮದಿನ– ಮಹಾಶಿವರಾತ್ರಿ ಪ್ರಯುಕ್ತ ಕಬಡ್ಡಿ ಪಂದ್ಯಾವಳಿ



**ಬೆಂಗಳೂರು:** ಪ್ಯೂಚರ್ ಸ್ಟಾರ್ ಕಬಡ್ಡಿಕ್ಲಬ್ ವತಿಯಿಂದ ಹೆಗ್ಗನಹಳ್ಳಿಯ ಸಮಾಜಸೇವಕಿ ಆಶಾ ಬೋರೇಗೌಡರ ಜನ್ಮದಿನದ ಪ್ರಯುಕ್ತ 60 ಕೆಜಿ ಒಳಗಿನ ರಾಜ್ಯ ಮಟ್ಟದ ತೇಜು ಕಪ್ ಸೀಸನ್ –3 ಮ್ಯಾಟ್ ಕಬಡ್ಡಿ ಪಂದ್ಯಾವಳಿಗಳನ್ನು ಅಯೋಜಿಸಲಾಗಿದೆ.

ಮನುಷ್ಯನಾಗಿ ಹುಟ್ಟಿದ ಮೇಲೆ ಸಮಾಜಕ್ಕೆ ಏನಾದರೂ ಒಂದು ಕೊಡುಗೆಯಾಗಿ ನಮ್ಮಿಂದ ನೀಡಬೇಕು. ಹಾಗಾಗಿ ತಮ್ಮ ಹುಟ್ಟನ್ನು ಸಾರ್ಥಕಪಡಿಸುವ ನಿಟ್ಟಿನಲ್ಲಿ ಹಾಗೂ ಕ್ರೀಡಾಪಟುಗಳನ್ನು ಉತ್ತೇಜಿಸಲು ಕಬಡ್ಡಿ ಪಂದ್ಯಾವಳಿ ಅಯೋಜಿಸಿದ್ದು, ದಿನಾಂಕ:14–02–2026 ರಿಂದ 15–02–2026 ರವರೆಗೆ ಹೆಗ್ಗನಹಳ್ಳಿ ಬಸ್ ನಿಲ್ದಾಣ ಹಿಂಭಾಗ, ಬೆಳಿಗ್ಗೆ 9–00 ಘಂಟೆಯಿಂದ ಪಂದ್ಯಾವಳಿಗಳು ಆರಂಭವಾಗಲಿವೆ.

ಪ್ರಥಮ ಬಹುಮಾನ 20,001

ದ್ವಿತೀಯ ಬಹುಮಾನ 10,001

ತೃತೀಯ ಬಹುಮಾನ 7,001/

ಚತುರ್ಥ ಬಹುಮಾನ 5,001 ದೊಂದಿಗೆ ಅಕರ್ಷಕ ಟ್ರೋಫಿ ನೀಡಲಾಗುತ್ತಿದೆ ಎಂದು ಅಶಾ ಬೋರೇಗೌಡ ತಿಳಿಸಿದರು. ಉತ್ತಮ ದಾಳಿಗಾರ, ಉತ್ತಮ ಹಿಡಿತಗಾರ ಸರ್ವೋತ್ತಮ ಆಟಗಾರರಿಗೆ ವೈಯಕ್ತಿಕ ಬಹುಮಾನ ಕೂಡ ಇರಲಿದೆ. ಪ್ರವೇಶ ಶುಲ್ಕ: 851/–. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 8904981043/7026470520/9591409651.

# 26 ನೇ ಪಟ್ಟಾಧಿಕಾರ ಮಹೋತ್ಸವ



- ವರದಿ: ಶರಣಬಸಪ್ಪ ದಾನಕೈ

**ಯಲಬುರ್ಗಾ:** ಪಟ್ಟಣದ ಸಂಸ್ಥಾನ ಹಿರೇಮಠದಲ್ಲಿ ಷ.ಬ್ರ.ಸಿದ್ದರಾಮೇಶ್ವರ ಸ್ವಾಮೀಜಿ ಅವರ 26 ನೇ ಪಟ್ಟಾಧಿಕಾರ ಮಹೋತ್ಸವ ಫೆ.10 ರಂದು ಜರುಗಿತು. ಮಠಮಂದಿಗಳಲ್ಲಿ ಭಕ್ತರು ದೀಪ ಹಚ್ಚುವ ಕಾರ್ಯ ಮಾಡಬೇಕು, ಬೆಂಕಿ ಹಚ್ಚುವ ಕೇಲಸ ಮಾಡಬಾರದು ಎಂದು ಭಕ್ತ ವೀರಣ್ಣ ಹುಬ್ಬಳ್ಳಿ ಅವರು ಹಿರೇಮಠದ ಪೂಜ್ಯರ ಪಟ್ಟಾಧಿಕಾರ ಮಹೋತ್ಸವದಲ್ಲಿ ಮಾತನಾಡಿದರು. ಶ್ರೀಮಠದ ಭಕ್ತರೆಲ್ಲರೂ ಮಾತನಾಡಿ ಇನ್ನೂಮುಂದೆ ಮಠದ ಪ್ರತಿಯೊಂದು ಕಾರ್ಯಕ್ರಮದಲ್ಲಿ ಸರ್ವರು ಒಗ್ಗಟ್ಟಾಗಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೋಳಿಸಬೇಕು ಎಂದರು. ಸಾನಿದ್ಯವಹಿಸಿದ ಪೂಜ್ಯರು ಮಾತನಾಡಿ, ಮಠದ ಭಕ್ತರು ಸತ್ಯದ ಸಂಗತಿಯನ್ನು ತಿಳಿಯಬೇಕು ,ಯಾರೋ ಕರೆದರು ಎಂದು ಅವರ ಬಳಿ ಹೋಗಿ ಬೆಂಬಲ ಕೊಡುವದು ಸೂಕ್ತವಾದದು ಅಲ್ಲ, ನಮ್ಮ ಅವದಿಯಲ್ಲಿ ಮಠ ಸಾಕಷ್ಟು ಅಭಿವೃದ್ಧಿಯಾಗಿದೆ, ಕೆಲವು ಭಕ್ತರು ತಮ್ಮ ಸ್ವಾರ್ಥಕ್ಕಾಗಿ ಮಾತನಾಡುತ್ತಾರೆ ಎಂದರು. ಈ ವೇಳೆ ಭಕ್ತರಾದ ಸಂಗಣ್ಣ ಟೆಂಗಿನಕಾಯಿ, ಅಂದಯ್ಯ ಕಳ್ಳಿಮಠ, ಸಂಗಪ್ಪ ಕರಂಡಿ, ಸಿ.ಎಚ್.ಪೋಲೀಸ್ ಪಾಟೀಲ್, ವಿಜಯಕುಮಾರ ಕರಂಡಿ, ಈರಪ್ಪ ಕುಡಗುಂಟಿ, ಮಲ್ಲೇಶಗೌಡ ಮಾಲಿಪಾಟೀಲ್, ರೇವಣೆಪ್ಪ ಹಿರೇಕುರಬರ, ಬಸವರಾಜ ಗುಳಗುಳಿ,ಫಕೀರಪ್ಪ ಉಪ್ಪಾರ,ಹನುಮಂತಪ್ಪ ದಾನಕೈ, ಎಚ್.ಎಚ್.ಕುರಿ,ಶರಣಪ್ಪ ವ್ಹಿ.ನೇರೆಗಲ್ಲ, ಫಕೀರಪ್ಪ ಬೇದವಟ್ಟಿ,ರವಿ ಕಲಬುರ್ಗಿ, ವಿಕಾಶ ಉಳ್ಳಾಗಡ್ಡಿ, ಎಸ್.ಎನ್.ಶ್ಯಾಗೋಟಿ,ಶರಣಗೌಡ ಉಳ್ಳಾಗಡ್ಡಿ,ವೀರುಪಾಕ್ಷಯ್ಯ ಗಂಧದ, ದೀಲಿಪ ಟೆಂಗಿನಕಾಯಿ,ಮುತ್ತಪ್ಪ ಸಾದರ,ಮಲ್ಲಪ್ಪ ಹೊಸಳ್ಳಿ, ಪ್ರಭು ಹಡಪದ ಸೇರಿದಂತೆ ಇತರರು ಇದ್ದರು.

# ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ



**ಕೊಪ್ಪಳ:** ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳು ಸಮರ್ಪಕವಾಗಿ ಅನುಷ್ಠಾನಿಸಲು ಕೊಪ್ಪಳ ತಾಲೂಕ ಮಟ್ಟದ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯು ಬಾಲಚಂದ್ರನ್ ಎಸ್ ಅವರ ಅಧ್ಯಕ್ಷತೆಯಲ್ಲಿ ಗುರುವಾರ ಕೊಪ್ಪಳ ತಾಲೂಕ ಪಂಚಾಯತಿಯ ಸಭಾಂಗಣದಲ್ಲಿ ಜರುಗಿತು.

ಗೃಹಲಕ್ಷ್ಮಿ ಫಲಾನುಭವಿಗಳಿಗೆ ಅಕ್ಟೋಬರ್–2025ರವರೆಗೆ ಅನುದಾನ ಜಮೆಯಾಗಿರುವ ಕುರಿತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖಾಧಿಕಾರಿಗಳು ಸಭೆಯಲ್ಲಿ ಗಮನಕ್ಕೆ ತಂದರು. ಡ್ಯಾಷ್ ಬೋರ್ಡ ನಲ್ಲಿ ಮಾಹಿತಿ ಅಪಡೇಟ್ ಆಗಿರುವದಿಲ್ಲ ಕುರಿತು ಮಾಹಿತಿ ನೀಡಿದರು. ಗೃಹಜ್ಯೋತಿ ಯೋಜನೆಯಡಿ ಮುನಿರಾಬಾದ ಗ್ರಾಮದಲ್ಲಿ ವಿದ್ಯುತ್ ಕಂಬ ಸ್ಥಳಾಂತರ ಮಾಡಲು ತಿಳಿಸಿದ್ದು ಅದರಂತೆ ಸ್ವತಃ ಫಲಾನುಭವಿ ಸ್ಥಳಾಂತರ ಮಾಡಿಕೊಳ್ಳುವಂತೆ ತಿಳಿಸಲಾಗಿದೆ ಎಂಬ ಮಾಹಿತಿಯನ್ನು ಜೆಸ್ಕಾಂ ಇಲಾಖಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಮಾತನಾಡಿ, ಇದೇ 17ರಂದು ಜರುಗುವ ಗ್ಯಾರಂಟಿ ಉತ್ಸವ ಹಾಗೂ ಕಾರ್ಯಗಾರಕ್ಕೆಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ಕರೆತರುವ ಕುರಿತು ವ್ಯವಸ್ಥೆ ಮಾಡಿಕೊಳ್ಳಬೇಕು. ಅಂದು 5 ಅನುಷ್ಠಾನ ಇಲಾಖಾಧಿಕಾರಿಗಳು ಪಂಚಗ್ಯಾರಂಟಿ ಯೋಜನೆಗಳ ಮಾಹಿತಿಯುಳ್ಳ ಮಳಿಗೆಗಳನ್ನು ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಿಕೊಳ್ಳಬೇಕು ಮತ್ತು ಸಾರ್ವಜನಿಕರಿಗೆ ಮಾಹಿತಿ ನೀಡಲು ಇಲಾಖಾಧಿಕಾರಿಗಳು ಸಿಬ್ಬಂದಿಗಳನ್ನು ನಿಯೋಜಿಸುವಂತೆ ಸೂಚಿಸಿದರು. ಸಭೆಯಲ್ಲಿ ಕೊಪ್ಪಳ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪತುರಾದಿ, ಅನುಷ್ಠಾನ ಸಮಿತಿ ಸದಸ್ಯರಾದ ಜ್ಯೋತಿ ಗೊಂಡಬಾಳ, ರಮೇಶ ಹ್ಯಾಟಿ, ಪರಶುರಾಮ ಕೊರವರ, ರಾಮಣ್ಣ ಚೌಡ್ಕಿ, ಸವಿತಾ ಗೊರಂಟ್ಲಿ, ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನ ಇಲಾಖಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# 30 ಮಕ್ಕಳಿಗೆ 6 ರಿಂದ 10ನೇ ತರಗತಿವರೆಗೆ ಉಚಿತ ಶಿಕ್ಷಣ

- ಪರಶುರಾಮ ಕರಣಂ ಭಾಲ್ಕಿ

ಕನ್ನಡ ಮಾಧ್ಯಮದ ಶಿಕ್ಷಣ ಉತ್ತೇಜನದ ಜತೆಗೆ 6 ರಿಂದ 10ನೇ ತರಗತಿ ವರೆಗೆ ಬಡ ಪ್ರತಿಭಾನ್ವಿತ ಮಕ್ಕಳಿಗೆ ಉಚಿತ ಶಿಕ್ಷಣ ಕಲ್ಪಿಸಲು ಯೋಜನೆ ರೂಪಿಸಲಾಗಿದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಿಳಿಸಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಇಂದಿನ ಆಧುನಿಕ ಮತ್ತು ಆಂಗ್ಲ ಮಾಧ್ಯಮದ ಶಿಕ್ಷಣದ ಭರಾಟೆಯಲ್ಲಿ ಕನ್ನಡ ಮಾಧ್ಯಮದ ಶಿಕ್ಷಣ ಕುಸಿಯುತ್ತಿದೆ ಎನ್ನುವ ಆತಂಕ ಎಲ್ಲರಲ್ಲಿ ಕಾಡುತ್ತಿದೆ.

ಇಂತಹ ವ್ಯವಸ್ಥೆ ಮಧ್ಯೆ ಕನ್ನಡ ಮಾಧ್ಯಮ ಶಿಕ್ಷಣದ ಮೌಲ್ಯ ಎತ್ತಿ ಹಿಡಿಯಲು ಕಳೆದ ಎರಡು ವರ್ಷಗಳಿಂದ ಪ್ರತಿ ವರ್ಷ 30 ಮಕ್ಕಳಿಗೆ ಉಚಿತ ಶಿಕ್ಷಣ, ಐಐಟಿ, ನೀಟ್ ನಂತಹ ತರಬೇತಿ ಜತೆಗೆ ಊಟ, ವಸತಿ ಸೌಲಭ್ಯ ಕಲ್ಪಿಸಲಾಗುತ್ತಿದೆ.

ಹಾಗಾಗಿ 2026ನೇ ಸಾಲಿನಲ್ಲಿ 30 ಮಕ್ಕಳಿಗೆ ಉಚಿತ ಶಿಕ್ಷಣ ಕಲ್ಪಿಸಲು ಅರ್ಜಿ ಆಹ್ವಾನಿಸಿ ಪರೀ–ಕ್ಷೆ ಏರ್ಪಡಿಸಲಾಗುತ್ತಿದೆ. ಪರೀಕ್ಷೆಯಲ್ಲಿ ಕ್ರಮವಾಗಿ ಮೊದಲ 3ರ್‍ಯಾಂಕ್ ಪಡೆಯುವ ವಿದ್ಯಾರ್ಥಿಗಳು 6 ರಿಂದ 10ನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ 5 ವರ್ಷ ಉಚಿತ ಶಿಕ್ಷಣ, ಕೋಚಿಂಗ್, ಊಟ, ವಸತಿ ಸೌಲಭ್ಯ ಪಡೆದು ಕೊಳ್ಳಲಿದ್ದಾರೆ ಎಂದು ತಿಳಿಸಿದರು.



**ಫೆ.15, 22 ರಂದು ಎಕ್ಸಾಂ**

ಬಡ ಮತ್ತು ಪ್ರತಿಭಾವಂತ ಮಕ್ಕಳಿಗೆ 6 ರಿಂದ 10ನೇ ತರಗತಿ ವರೆಗೆ ಉಚಿತ ಶಿಕ್ಷಣ ಕಲ್ಪಿಸಲು ಚನ್ನಬಸವೇಶ್ವರ ಗುರುಕುಲದಲ್ಲಿ ಫೆ.15 ಮತ್ತು 22 ರಂದು ಭಾನುವಾರ ಪರೀಕ್ಷೆ ಏರ್ಪಡಿಸಲಾಗಿದೆ ಎಂದು ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ತಿಳಿಸಿದರು. ನಮ್ಮ ಸಂಸ್ಥೆಯಲ್ಲಿ ಕನ್ನಡ ಮಾಧ್ಯಮ ಶಿಕ್ಷಣದಲ್ಲಿ ಕಲಿತ ವಿದ್ಯಾರ್ಥಿಗಳು ಇಂದು ರಾಜ್ಯ, ರಾಷ್ಟ್ರ ಮತ್ತು ಅಂತರ ರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಸಾಧನೆ ತೋರಿದ್ದಾರೆ.

ಕನ್ನಡ ಮಾಧ್ಯಮದ ಶಿಕ್ಷಣ ತನ್ನದೇ ಆದ ಮೌಲ್ಯ ಹೊಂದಿದೆ. ಹಾಗಾಗಿ ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಪರೀಕ್ಷೆ ಬರೆಯಬಹುದಾಗಿದೆ. ಪಾಲಕರು ತಮ್ಮ ಮಕ್ಕಳಿಗೆ ಈ ಸೌಲಭ್ಯ ಕೊಡಿಸಲು ಮುಂದಾಗಬೇಕು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಹಾಲಿಂಗ ಸ್ವಾಮೀಜಿ, ಉದ್ಯಮಿ ಸೋಮನಾಥಪ್ಪ ಅಷ್ಟೂರೆ, ಸಂಸ್ಥೆಯ ಆಡಳಿತಾಧಿಕಾರಿ ಮೋಹನ ರೆಡ್ಡಿ, ಪತ್ರಕರ್ತ ಜೈರಾಜ ಪಾತ್ರೆ ಇದ್ದರು.

> ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ವಿದ್ಯಾ ದೇಗುಲ ತೆರೆದು ಶಿಕ್ಷಣದ ಪಾವಿತ್ರತೆ ಕಾಪಾಡಿದ್ದಾರೆ. ಕನ್ನಡ ಮಾಧ್ಯಮದಲ್ಲಿ ಕಲಿತ ವಿದ್ಯಾರ್ಥಿಗಳು ರಾಜ್ಯ ಅಷ್ಟೇ ಅಲ್ಲದೇ ರಾಷ್ಟ್ರ ಮತ್ತು ಅಂತರ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ.
>
> –ಗುರುಬಸವ ಪಟ್ಟದ್ದೇವರು
> ಹಿರೇಮಠ ಸಂಸ್ಥಾನ ಭಾಲ್ಕಿ

**5 ಸಾವಿರ ಮಕ್ಕಳು ನೋಂದಣಿ**

ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ಕೊಡಿಸಲು ಪಾಲಕರು ಉತ್ಸಕತೆ ತೋರಿದ್ದಾರೆ. ಈಗಾಗಲೇ ಪರೀಕ್ಷೆ ಬರೆಯಲು 5 ಸಾವಿರ ಮಕ್ಕಳು ತಮ್ಮ ಹೆಸರು ನೋಂದಾಯಿಸಿದ್ದಾರೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ತಿಳಿಸಿದ್ದಾರೆ. 100 ಅಂಕದ ಬಹು ಆಯ್ಕೆ ಪ್ರಶ್ನೆಗಳು ಇರಲಿದ್ದು ಕನ್ನಡ 20, ಇಂಗ್ಲಿಷ್ 20, ಗಣಿತ 30, ಪರಿಸರ ಅಧ್ಯಯನ 20 ಮತ್ತು ಮಾನಸಿಕ ಸಾಮರ್ಥ್ಯ ವಿಷಯ ಕುರಿತು 10 ಅಂಕಗಳನ್ನು ಒಳಗೊಂಡಿದೆ. ಪ್ರವೇಶ ಪರೀಕ್ಷೆ ಬರೆಯುವ ಆಸಕ್ತ ವಿದ್ಯಾರ್ಥಿಗಳು ಸಂಸ್ಥೆ ನೀಡಿರುವ ಕ್ಯೂಆರ್‌ಕೋಡ ಬಳಸಿ ಅರ್ಜಿ ಭರ್ತಿ ಮಾಡಬಹುದಾಗಿದೆ ಎಂದು ಮಾಹಿತಿ ನೀಡಿದರು.

# ಎರಡು ಸಾವಿರ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳ ಮಂಜೂರು

- ವರದಿ: ಶರಣಬಸಪ್ಪ ದಾನಕೈ , ಯಲಬುರ್ಗಾ

ವಿಧಾನಸಭಾ ಕ್ಷೇತ್ರದಲ್ಲಿ ಎರಡು ಸಾವಿರ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳನ್ನು ಮಂಜೂರು ಮಾಡುವಲ್ಲಿ ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಅವರ ಕಾರ್ಯಶ್ಲಾಘನೀಯವಾದದು, ತಾಲೂಕಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಪರಿಶಿಷ್ಟ ಜಾತಿಯ ಮೆಟ್ರಿಕ್ ನಂತರದ ಬಾಲಕ ಹಾಗೂ ಬಾಲಕಿಯರಿಗೆ ವಸತಿ ನಿಲಯ ,ಯಲಬುರ್ಗಾ ನಗರದ ಕೊಪ್ಪಳ ವಿಶ್ವವಿದ್ಯಾಲಯಗಳ ಪರಿಶಿಷ್ಟಜಾತಿಯ ಮೆಟ್ರಿಕ್ ನಂತರದ ವಸತಿ ನಿಲಯ ತಳಭಾಳ ಗ್ರಾಮದ ವಸತಿಯುಕ್ತ ಸರ್ಕಾರಿ ಪದವಿ ಕಾಲೇಜಿನಲ್ಲಿ ಪರಿಶಿಷ್ಟ ಜಾತಿಯ ಮೆಟ್ರಿಕ್ ನಂತರದ ವಸತಿ ನಿಲಯ ಇವುಗಳಿಗೆ ಬೇಕಾಗುವ 34 ಹುದ್ದೆಗಳನ್ನು ನೀಡುವುದರ ಜೊತೆಗೆ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕೆ ತೊಂದರೆಯಾಗದಂತೆ ಬಡ ಮಕ್ಕಳಿಗೆ ಅವಕಾಶ ಕಲ್ಪಿಸಿ ಕೊಡುವಲ್ಲಿ ಮುಂದಾಗಿದ್ದಾರೆ ಎಂದು



ಗ್ಯಾರಂಟಿ ಸಮಿತಿ ಯಲಬುರ್ಗಾ ತಾಲೂಕು ಅಧ್ಯಕ್ಷ ಸುಧೀರ ಕೋರ್ಲಹಳ್ಳಿ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಹಿಂದುಳಿದ ವರ್ಗಗಳ ಸಾಕಷ್ಟು ವಿದ್ಯಾರ್ಥಿಗಳು ವಿದ್ಯಾಭ್ಯಾಸಮಾಡುತ್ತಿದ್ದು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ತಳಬಾಳ ಗ್ರಾಮದ ವಸತಿಯುಕ್ತ ಸರ್ಕಾರಿ ಪದವಿ ಕಾಲೇಜಿನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕ ಬಾಲಕಿಯರಿಗೆ ವಸತಿ ನಿಲಯ,ಯಲಬುರ್ಗಾ ನಗರದ ಸರ್ಕಾರಿ ಸ್ನಾತಕೋತ್ತರ ಕೇಂದ್ರದಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕ ಬಾಲಕಿಯರಿಗೆ ವಸತಿ ನಿಲಯ, ಗುನ್ನಾಳ ಗ್ರಾಮದ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಜ ಬಾಲಕಿಯರ ವಸತಿ ನಿಲಯ ಮಂಜೂರು ಮಾಡಿರುವ ಆದೇಶದ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಕುಕನೂರ ಗ್ಯಾರಂಟಿ ಸಮಿತಿ ಅದ್ಯಕ್ಷ ಸಂಗಮೇಶ ಗುತ್ತಿ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಈ ವೇಳೆ ಕ್ಷೇತ್ರಕ್ಕೆ ಮಂಜೂರು ಮಾಡಿ ಕೊಟ್ಟಿರುವ ಮುಖ್ಯಮಂತ್ರಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಹಾಗೂ ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಅವರಿಗೆ ಕ್ಷೇತ್ರದ ಜನತೆಯ ಪರವಾಗಿ ಅಭಿನಂದನೆ ಸಲ್ಲಿಸಿದ ಬಳಿಕ ವೀರರಾಣಿ ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ವಿದ್ಯಾರ್ಥಿಗಳು ಹಾಗೂ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಸಿಹಿ ಹಂಚಿ ಸಂತಸ ವ್ಯಕ್ತಪಡಿಸಿ ಪಟಾಕ್ಷಿ ಸಿಡಿಸಿ ಸಂಭ್ರಮಾಚರಣೆ ಮಾಡಿದರು. ಈ ವೇಳೆ ಈ ವೇಳೆ ಯಲಬುರ್ಗಾ ತಹಶೀಲ್ದಾರ್ ಪ್ರಕಾಶ್ ನಾಶಿ,ಕುಕನೂರ ತಹಶೀಲ್ದಾರ್ ಬಸವರಾಜ ಬೆಣ್ಣಿ, ತಾಲೂಕು ಪಂಚಾಯಿತಿ ಇ.ಓ ಸಂತೋಷ್ ಬಿರಾದಾರ್ ಪಾಟೀಲ್, ಶಿವಶಂಕರ ಕರಡಕಲ್, ಶಶಿದರ ಸಕ್ರಿ, ವೀರುಪಾಕ್ಷಪ್ಪ ಬಾಗೋಡಿ, ಹನುಮಂತ ಗೌಡ ಪಾಟೀಲ್, ಡಾ.ರಾಮದುರ್ಗ, ಆರ್‌ಡಿ ಸಿಸಿ ಬ್ಯಾಂಕ್ ನಿರ್ದೇಶಕ ಶೇಖರಗೌಡ ಉಳ್ಳಾಗಡ್ಡಿ,ಮುಖಂಡರಾದ ಹನುಮಂತಗೌಡ ಚಂಡೂರ, ವೀರನಗೌಡ ಪೊಲೀಸ್ ಪಾಟೀಲ್, ಡಾ. ಶಿವನಗೌಡ ದಾನರಡ್ಡಿ, ಹಂಪಯ್ಯ ಹಿರೇಮಠ, ಶರಣಪ್ಪ ಗಾಂಜಿ, ಮಲ್ಲಿಕಾರ್ಜುನ ಜಕ್ಕಲಿ ಹುಲಗಪ್ಪ ಬಂಡಿ ವಡ್ಡರ, ಸೇರಿದಂತೆ ಇತರರು ಇದ್ದರು.

# ದೈವ ಭಕ್ತಿ, ಜ್ಯೋತಿಷ್ಯದಲ್ಲಿ ಅಭ್ಯಾಸ ಪಡೆದ ಡಾ. ಆರ್. ಕೆ. ಶಶಿಕಿರಣ್

- ಮಲ್ಲಮ್ಮ ನುಡಿ ವಾರ್ತೆ ಶಿವಮೊಗ್ಗ

ಶಿಕಾರಿಪುರ ತಾಲೂಕು ತೊಗರ್ಶಿಯ ದಿ. ಮಾರ್ತಾಂಡ ರಾವ್ ನಾಡಿಗೇರ್ ಮತ್ತು ಶ್ರೀಮತಿ ಅಂಬುಜಾಬಾಯಿ ರವರ ಪುತ್ರ 'ಕಿರಣ್' ಮಧ್ಯಮ ಬ್ರಾಹ್ಮಣರ ನಾಡಿಗೇರ್ ಕುಟುಂಬದಲ್ಲಿ ಜನಿಸಿ ಬೆಳೆದ ಡಾ. ಆರ್. ಕೆ. ಶಶಿಕಿರಣ್ ನಾಡಿಗೇರ್ ಅವರು, ಬಾಲ್ಯದಿಂದಲೇ, ದೈವ ಭಕ್ತಿ, ಶಾಸ್ತ್ರ,ಸಾಂಪ್ರದಾಯಿಕ ಜ್ಯೋತಿಷ್ಯದಲ್ಲಿ ಆಳವಾದ ಅಭ್ಯಾಸ ಪಡೆದವರು.

ಒಂದು ದಶಕಕ್ಕೂ ಅಧಿಕ ಜ್ಯೋತಿಷ್ಯ ಅನುಭವ ಹೊಂದಿರುವ ಅವರು, ವೈದಿಕ ಜ್ಯೋತಿಷ್ಯ(ಪರಾಶರಪದ್ಧತಿ),ಕೆ.ಪಿ.ವ್ಯವಸ್ಥೆ, ಪ್ರಶ್ನ ಶಾಸ್ತ್ರ, ಬೃಘು ನಂದಿ ನಾಡಿ, ಡೀಪ್ ಸೀಕ್ರೆಟ್, ವೈದ್ಯಕೀಯ ಜ್ಯೋತಿಷ್ಯ, ವಾಸ್ತು ಶಾಸ್ತ್ರ,ಸಂಖ್ಯಾಶಾಸ್ತ್ರ,ಹಸ್ತಸಾಮುದ್ರಿಕ ಶಾಸ್ತ್ರ ಸೇರಿದಂತೆ ಅನೇಕ ಶಾಖೆಗಳಲ್ಲಿ ಪರಿಣತಿ ಗಳಿಸಿದ್ದಾರೆ. ಪಂಚ ಭಾಷಾ ಪರಿಣಿತರು ಕನ್ನಡ,ಇಂಗ್ಲಿಷ್,ತಮಿಳು,ಹಿಂದಿ,ತೆಲುಗು ಸರಾಗವಾಗಿ ಮಾತನಾಡಲು ಬಲ್ಲವರು.ಕಲಾ ಸೇವೆಯಿಂದ ಜೋತಿಷ್ಯ ಕ್ಷೇತ್ರದಲ್ಲಿ ಮನ್ನಣೆ ಪಡೆದಿದ್ದಾರೆ. ಇವರು ಮೂರು ದಶಕಗಳ ಕಾಲ ಕಿರುತೆರೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈ ಕ್ಷೇತ್ರದಲ್ಲಿ 30 ವರ್ಷಗಳ ಅನುಭವ ಹೊಂದಿದ್ದಾರೆ. ಜೊತೆಗೆ, ಕಳೆದ 10 ವರ್ಷಗಳಿಂದ ಜ್ಯೋತಿಷ್ಯ ಸಲಹೆಗಾರರಾಗಿ ಸಾವಿರಾರು ಜನರಿಗೆ ಆನ್‌ಲೈನ್ ಹಾಗೂ ಆಫ್‌ಲೈನ್ ಮೂಲಕ ಮಾರ್ಗದರ್ಶನ ನೀಡಿದ್ದಾರೆ. ಮೊದಲಾದ ಪ್ರತಿಷ್ಠಿತ ಜ್ಯೋತಿಷ್ಯ ಪೋರ್ಟಲ್‌ಗಳಲ್ಲಿ ಆನ್‌ಲೈನ್ ಜ್ಯೋತಿಷ್ಯ ಸಲಹೆಗಾರರಾಗಿ ಸೇವೆ ಸಲ್ಲಿಸುತ್ತಿದ್ದಾರೆ.



ಸಾಮಾಜಿಕ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಗಾಗಿ ಪಂಡಿತ್ ಡಾ. ಆರ್. ಕೆ. ಶಶಿಕಿರಣ್ ನಾಡಿಗೇರ್ ಅವರಿಗೆ ಇಂಗ್ಲೆಂಡ್‌ನಿಂದ World Record of Excellence – "ಶ್ರೇಷ್ಠ ಜ್ಯೋತಿಷಿ ಪ್ರಶಸ್ತಿ–2026"ಹಾಗೂ ವಿಯೆಟ್ನಾಂನಲ್ಲಿ "ಜ್ಯೋತಿಷ್ಯ ಶಾಸ್ತ್ರಾಚಾರ್ಯ (ವೇದಿಕ ನಂತರದ ಡಾಕ್ಟರೇಟ್ ಫೆಲೋಶಿಪ್)" ಬಿರುದು ದೊರೆತಿದೆ. ಸಾಧನೆಗೆ ವಯಸ್ಸಿಗೆ ಹತ್ತಿರವಿಲ್ಲ ಎನ್ನುವ ಹಾಗೆ ಕಲಿಯುವ ಉತ್ಸಾಹ ಜ್ಯೋತಿಷ್ಯ ಕಡೆ ಎಳೆದಾಗ ಬೋಧಕಗುರುವಾಗಿ ಬಂದವರೇ ಗೋಲ್ಡ್ ಟ್ರೀ ಅಸ್ಟ್ರೋ ಪಂಡಿತ ಡಾಕ್ಟರ್ ಎನ್. ದಿನೇರವರು. ಅವರ ಮಾರ್ಗದರ್ಶನದಲ್ಲಿ ಜ್ಯೋತಿಷ್ಯ ಮತ್ತು ಅದರ ಇತರ ಶಾಖೆಗಳ ಬಗ್ಗೆ ಸಮಗ್ರವಾದ ಕಲಿಕೆ. ಮನುಕುಲಕ್ಕೆ ಒಳಿತು ಮಾಡುವ ಮೂಲಕ ಸಮಾಜ ಸೇವೆಗೆ ಇನ್ನಷ್ಟು ಅವಕಾಶಗಳು ಒದಗಿ ಬರಲಿ ಎಂದು ಅವರು ಆಶಿಸಿದರು.

# ಗಾಂಧಿನಗರ ಟು ಜಾಲಿಹಾಳ ರಸ್ತೇಲಿ ಗಾಲಿ ಓಡದು..!





- ಮಲ್ಲಮ್ಮ ನುಡಿ ವಾರ್ತೆ ವೀರೇಶಹೊಸಳ್ಳಿ,ಸಿಂಧನೂರು

ತಾಲೂಕಿನ ಗಾಂಧಿ ನಗರ ದೊಡ್ಡ ಹೋಬಳಿಯಾಗಿ ಅಧಿಕ ಜನಸಂಖ್ಯೆ ಹೊಂದಿರುವ ಜಿಲ್ಲಾ ಪಂಚಾಯತ್ ಕ್ಷೇತ್ರವಾಗಿದೆ. ಇಲ್ಲಿ ಅದ್ಭುತವಾದ ಶಿವಾಲಯ ದೇವಾಲಯ ಇದ್ದು. ಪ್ರತಿ ದಿವಸ ಪ್ರವಾಸಿಗರಿಗೆ ಆಗಮಿಸುತ್ತಾರೆ. ವಾಣಿಜ್ಯ ಸಂಸ್ಥೆಗಳು ಮೂಲಕ ದಿನಕ್ಕೆ ಕೋಟಿಯಷ್ಟು ಹಣದ ವ್ಯವಹಾರ ಹೊಂದಿರುವುದು ಎಂಬು ಹೆಗ್ಗಳಿಕೆ ಹೆಸರಾಗಿರುವ ಗಾಂಧಿನಗರ ಆದರೆ ಇಲ್ಲಿಯ ಮೂಲಭೂತ ಸೌಕರ್ಯಗಳ ಇಲ್ಲದೆ ಇರುವುದು ದುರಂತ. ಈ ದುರಂತವನ್ನು ಎದುರಿಸುತ್ತಿರುವ ಸಾರ್ವಜನಿಕರು. ಆದರೆ ಗಾಂಧಿನಗರ ಟು ಜಾಲಿಹಾಳ ಬಸಾಪುರ.ಬಸಣ್ಣ ಕ್ಯಾಂಪ್ . ಹಂಚಿನಾಳ ಕ್ಯಾಂಪ್ .ಮತ್ತು ಕಾರಟಗಿ ಹೋಗುವ ಅಡ್ಡ ರಸ್ತೆ. ಈ ರಸ್ತೆಯಲ್ಲಿ ದಿನಕ್ಕೆ ನೂರಾರು ಬೈಕ್ ಮತ್ತು ವಾಹನಗಳು ಸವಾರರು ಮೊಣಕಾಲು ಮಟ ತಗ್ಗು ಬಿದ್ದಿರುವ ರಸ್ತೆಯಲ್ಲಿ ತಮ್ಮ ಜೀವವನ್ನು ಅಂಗೈಯಲ್ಲಿ ಹಿಡಿದುಕೊಂಡು ಪ್ರಯಾಣಿಸುತ್ತಾರೆ. ಆದರೆ ಇದುವರೆಗೂ ಚುನಾಯಿತರಾದ ಜನಪ್ರತಿನಿಧಿಗಳು ಗಾಂಧಿ ನಗರ ಹೋಬಳಿಗೆ ತಿರುಗಿ ನೋಡುತ್ತಿಲ್ಲ ಎಂದು ಸಾರ್ವಜನಿಕರು ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

ಗುಣಮಟ್ಟ ಹೊಂದಿರುವ ರಸ್ತೆಗಳನ್ನು ಮಾಡದೇ ತಮ್ಮ ಲಾಭಕ್ಕಾಗಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಹೊಂದಾಣಿಕೆ ಮಾಡಿಕೊಂಡು ಕಳಪೆ ಮಟ್ಟದಲ್ಲಿ ಕಾಮಗಾರಿಗಳು ಕೆಲಸ ಮಾಡಿ ಹೋಗುತ್ತಾರೆ. ಆದರೆ ರಸ್ತೆ ಹದಗೆಟ್ಟು ಹೋಗಿರುವ ರಸ್ತೆಯನ್ನು (ತಮ್ಮ ಅವಧಿ ಇದುವರೆಗೂ) ತಿರುಗಿ ಸಹ ನೋಡುವುದಿಲ್ಲ ಎಂದು ಆಕ್ರೋಶವನ್ನು ವ್ಯಕ್ತಪಡಿಸಿದರು.

## ಬೊಬ್ಬೆ ಬಿಡಿ, ಅಭಿವೃದ್ಧಿ ಮಾಡಿ

ಆದರೆ ನಮಗೆ ಯಾವುದೇ ಸಂಬಂಧ ಇಲ್ಲ ಎಂಬಂತೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಈ ಕಡೆಗೆ ಗಮನ ಹರಿಸದೇ ಎಸಿ ರೂಮಿನಲ್ಲಿ ಕುಳಿತು ಕೊಂಡು ಬೊಬ್ಬೆ ಹೊಡೆಯುವ ರಾಜಕಾರಣಿಗಳೇ ಅಭಿವೃದ್ಧಿ ಕಡೆಗೆ ಗಮನ ಹರಿಸಿ ಎಂದು ಹೆಸರು ಹೇಳಿದ ಗಾಂಧಿನಗರದ ನಿವಾಸಿ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

## ಅಧಿಕಾರಿಗಳಿಗೆ ಹಿಡಿಶಾಪ

ಆದರೆ ಕ್ಷೇತ್ರದ ಜನಪ್ರತಿನಿಧಿಗಳು ಸಿಂಧನೂರು ವಿಧಾನ ಸಭಾ ಕ್ಷೇತ್ರ ಅಭಿವೃದ್ಧಿಯತ್ತ ಸಾಗುತ್ತದೆ ಎಂದು ಭಾಷಣ ಬಿಗಿಯುತ್ತಾರೆ. ಇದೇನಾ ನಿಮ್ಮ ಅಭಿವೃದ್ಧಿ ಎಂದು ಪ್ರಶ್ನೆ? ಎಂದು ಓಡಾಡುವ ಸಾರ್ವಜನಿಕರು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಮೇಲೆ ಇಡೀ ಶಾಪ ಹಾಕುತ್ತಿದ್ದಾರೆ. ಟ್ರಾಕ್ಟರ್ ಗಳು.ಕಾರು. ಬೈಕ್ ಇತರರು ವಾಹನಗಳು ಈ ತಗ್ಗು ಬಿದ್ದಿರುವ ರಸ್ತೆಯಲ್ಲಿ (ಕುಡುಕರ ಜೋಲಿಯಾಗಿ ಒಂದೇ ಕಡೆಗೆ ಬಾಗಿಕೊಂಡು ಬರುತ್ತಾರೆ) ಅದರಂತೆಯೇ ವಾಹನಗಳು ಒಂದೇ ಬಾಗಿಕೊಂಡು ಬರಬೇಕೆಂದು ಸವಾರರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)